22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 77 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 17 2024 ಮಂಗಳವಾರ




## ನಿತ್ಯ ಪಂಚಾಂಗ 17.09.2024 ಮಂಗಳವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ–ವಸಂತ ಋತು,
ಚಾಂದ್ರಮಾನ, ಭಾದ್ರಪದ ಶುದ್ಧ

ಚತುರ್ದಶಿ, ಶತಭಿಷ ನಕ್ಷತ್ರ
ವಿಶ್ವಕರ್ಮ ಜಯಂತಿ, ಉಮಾಮಹೇಶ್ವರ
ವ್ರತ, ಕನ್ಯಾ ಸಂಕ್ರಮಣ
ಷಡಶೀತಿಪುಣ್ಯಕಾಲ, ಕ್ಷಮಾವಾಣಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಪ್ರವಾಸೋದ್ಯಮದ ಖರ್ಚು ನಾವೇ ಭರಿಸಲು ಸಿದ್ಧ: ಸಿಎಂ

**ಬೆಂಗಳೂರು, ಸೆ.16:** ರಾಜ್ಯದಲ್ಲಿ ಹೊಸ ಪ್ರವಾಸೋದ್ಯಮ ನೀತಿ ಜಾರಿಗೊಳಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ರಾಜ್ಯದಲ್ಲಿ ಹೊಸ ಪ್ರವಾಸೋದ್ಯಮ ನೀತಿ ಜಾರಿಗೊಳಿಸಲಾಗುವುದು, ಪ್ರವಾಸೋದ್ಯಮ ಅಭಿವೃದ್ಧಿಗೆ ಎಷ್ಟು ಹಣ ಖರ್ಚಾಗುತ್ತದೋ ಅಷ್ಟನ್ನು ಭರಿಸಲು ನಾವು ತಯಾರಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಪ್ರಾಕೃತಿಕ ಸೌಂದರ್ಯವಿರುವ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಮಾಡುತ್ತೇವೆ. ಕೇಂದ್ರ ಸರ್ಕಾರಕ್ಕೆ ತೆರಿಗೆ ಪಾವತಿಸುವಲ್ಲಿ ಕರ್ನಾಟಕ ರಾಜ್ಯವು ಎರಡನೇ ಸ್ಥಾನದಲ್ಲಿದೆ. ಹೀಗಾಗಿ ಪ್ರವಾಸೋದ್ಯಮದಿಂದ ಬರುವ ಆದಾಯದಿಂದ ರಾಜ್ಯ ನಡೆಸಬೇಕು ಎಂದರು.

# ನನ್ನನ್ನು ಅಷ್ಟು ಸುಲಭ ಅಂದುಕೊಳ್ಳಬೇಡಿ: ಸವಾಲೆಸೆದ ಸಿ.ಎಂ.ಸಿದ್ದರಾಮಯ್ಯ

## ಬ್ರಿಟಿಷರ ಜೊತೆ ನಮ್ಮವರೇ ಕೈಜೋಡಿಸಿದ್ದರಿಂದಲೇ 200 ವರ್ಷ ಗುಲಾಮಗಿರಿ ಅನುಭವಿಸಿದ್ದೆವು



**ಕಲಬುರಗಿ ಸೆ.16:** ಎಚ್.ಡಿ.ಕುಮಾರಸ್ವಾಮಿ, ಬಿ.ಎಸ್ ಯಡಿಯೂರಪ್ಪ ನನ್ನನ್ನು ಮುಗಿಸ್ತೀನಿ ಅಂದುಕೊಂಡಿದ್ದರೆ ಅದು ಅವರ ಮೂರ್ಖತನ. ನನ್ನನ್ನು ಅಷ್ಟು ಸುಲಭ ಅಂದುಕೊಳ್ಳಬೇಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿ ಮತ್ತು ಜೆಡಿಎಸ್ ನಾಯಕರಿಗೆ ನೇರ ಸವಾಲೆಸೆದರು.

ಕಲಬುರಗಿ ತಾಲ್ಲೂಕಿನ ಕವಲಗಿ (ಕೆ) ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಜಯಂತಿಯನ್ನು ಉದ್ಘಾಟಿಸಿ ರಾಯಣ್ಣ ಪ್ರತಿಮೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಬ್ರಿಟಿಷರ ಜೊತೆ ನಮ್ಮವರು ಕೈಜೋಡಿಸಿದ್ದರಿಂದಲೇ 200 ವರ್ಷ ಗುಲಾಮಗಿರಿ ಅನುಭವಿಸಿದೆವು. ಸಂಗೊಳ್ಳಿ ರಾಯಣ್ಣನನ್ನು ಬ್ರಿಟಿಷರಿಗೆ ಹಿಡಿದುಕೊಟ್ಟವರು ನಮ್ಮವರೇ ಆದ ಮನೆ ಮುರುಕರು. ನಮ್ಮ ಸಮಾಜದಲ್ಲೇ ಇಂಥಹ ಮನೆ ಮುರುಕರು ಹಿಂದೆಯೂ ಇದ್ದರು. ಮುಂದೆಯೂ ಇರುತ್ತಾರೆ. ಇಂಥವರ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂದರು. ಎರಡನೇ ಬಾರಿ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಬಡವರ, ಮಧ್ಯಮ ವರ್ಗದವರ ಕಲ್ಯಾಣಕ್ಕೆ ಗ್ಯಾರಂಟಿಗಳನ್ನು ಜಾರಿಗೊಳಿಸಿದ್ದಕ್ಕೆ ಪಟ್ಟಭದ್ರರು ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. 40 ವರ್ಷದಿಂದ ಸಣ್ಣ ತಪ್ಪು ಮಾಡದವನು ಈಗ ಮಾಡ್ತೀನಾ? ಹಿಂದೆಯೂ ಮಾಡಿಲ್ಲ, ಮುಂದೆಯೂ ಮಾಡಲ್ಲ. ಮುಡಾ ಪ್ರಕರಣದಲ್ಲಿ ಏನೇನೂ ಇಲ್ಲ. ಆದರೂ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಡೆಲ್ಲಿಯಿಂದ ರಾಜಭವನದವರೆಗೂ ಪಿತೂರಿ ಹೆಣೆಯುತ್ತಿದ್ದಾರೆ. ಇದರಲ್ಲಿ ಅವರು ಯಶಸ್ವಿ ಆಗಲು ಬಿಡಬಾರದು. ಸಂಗೊಳ್ಳಿರಾಯಣ್ಣನ ಹೋರಾಟದ ಕಿಚ್ಚು ನಮ್ಮೊಳಗಿದೆ ಎಂದು ಎಚ್ಚರಿಕೆ ನೀಡಿದರು. ಡಾ.ಬಾಬಾಸಾಹೇಬರು ಕೊಟ್ಟ ಸಂವಿಧಾನದಿಂದಾಗಿ ನಾನು ಮುಖ್ಯಮಂತ್ರಿ ಆಗಿದ್ದೇನೆ. ಬಾಬಾ ಸಾಹೇಬರ ಆಶಯದಂತೆ ನಾನು ಎಲ್ಲಾ ಜಾತಿ, ವರ್ಗಗಳಿಗೆ, ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡುತ್ತಿದ್ದೇನೆ ಎಂದರು. ದೇಶದಲ್ಲಿ ಆಹಾರ ಭದ್ರತೆ ಕಾಯ್ದೆ ಜಾರಿಗೆ ಬಂದಿದ್ದು ಕಾಂಗ್ರೆಸ್ ಅವಧಿಯಲ್ಲಿ. ನಾವು ನಮ್ಮ ಜನರಿಗೆ 5 ಕೆಜಿ ಹೆಚ್ಚುವರಿ ಅಕ್ಕಿ ಕೊಡಬೇಕು ಎಂದು ತೀರ್ಮಾನಿಸಿದರೆ ನರೇಂದ್ರ ಮೋದಿಯವರು ಅಕ್ಕಿ ಕೊಡಲು ಬಿಡಲಿಲ್ಲ. ಅದಕ್ಕಾಗಿ ನಾವು ಅಕ್ಕಿ ಬದಲಿಗೆ 5ಕೆಜಿ ಅಕ್ಕಿಯ ಹಣ ಕೊಡುತ್ತಿದ್ದೇವೆ ಎಂದರು.

ಇಷ್ಟೆಲ್ಲಾ ಕಾರ್ಯಕ್ರಮಗಳನ್ನು ನಾನು ಕೊಡುತ್ತಿರುವುದರಿಂದ ನನ್ನನ್ನು ಮುಗಿಸಲು ಯತ್ನಿಸುತ್ತಿದ್ದಾರೆ. ಅವರ ಯತ್ನ ಸಕ್ಸಸ್ ಆಗಲು ಬಿಡಬೇಡಿ ಎಂದು ಕರೆ ನೀಡಿದರು. ಪಟ್ಟಭದ್ರ ಹಿತಾಸಕ್ತಿಗಳೇ ರಾಯಣ್ಣನನ್ನು ಬ್ರಿಟಿಷರಿಗೆ ಹಿಡಿದುಕೊಟ್ಟರು, ಬಸವಣ್ಣನವರನ್ನು ಆಸ್ಥಾನದಿಂದ ಓಡಿಸಿಬಿಟ್ಟರು. ಹೀಗಾಗಿ ಈ ಬಿಜೆಪಿ ಮತ್ತು ಜೆಡಿಎಸ್ ನವರ ಬಗ್ಗೆ ಎಚ್ಚರದಿಂದ ಇರಿ ಎಂದು ಕರೆ ನೀಡಿದರು. ನಾನು ಹಿಂದುಳಿದ ಸಮಾಜದಲ್ಲಿ ಜನಿಸಿ ಬಡತನ ಅಂದರೆ ಏನು, ಗ್ರಾಮಗಳ ಸ್ಥಿತಿ ಹೇಗಿದೆ ಎಂದು ಅರ್ಥಮಾಡಿ ಕೊಂಡಿದ್ದೇನೆ. ಬಡತನ ಹೋಗಲಾಡಿಸಲು ಕಾರ್ಯಕ್ರಮ ರೂಪಿಸುತ್ತಿದ್ದೇನೆ ಎಂದರು.

# ಇನ್ನು ಬಗೆಹರಿಯದ ಚನ್ನಪಟ್ಟಣ ಟಿಕೆಟ್ ಗೊಂದಲ

**ಬೆಂಗಳೂರು, ಸೆ.16:** ಕುಮಾರಸ್ವಾಮಿಯವರ ತೆರವಿನಿಂದ ಸೃಷ್ಟಿಯಾಗಿರುವ ಸ್ಥಾನ ಚನ್ನಪಟ್ಟಣ ಉಪಚುನಾವಣೆಯ ಟಿಕೆಟ್ ಗೊಂದಲ ಇನ್ನು ಬಗೆ ಹರಿದಿಲ್ಲ. ಈ ಮಧ್ಯದಲ್ಲೇ ಸಿ.ಪಿ ಯೋಗೇಶ್ವರ್ ತಮಗೆ ಡಾ.ಸಿ.ಎನ್. ಮಂಜುನಾಥ್ ಬೆಂಬಲ ಇರುವಂತೆ ಮಾತನಾಡಿ ಅಚ್ಚರಿಗೆ ಕಾರಣವಾಗಿದ್ದಾರೆ. ಈ ಬಗ್ಗೆ ಮಾತನಾಡಿರುವ ಬಿಜೆಪಿ ಮುಖಂಡ ಸಿಪಿ ಯೋಗೇಶ್ವರ್, ನನ್ನ ಪರವಾಗಿ ಸಂಸದ ಡಾ.ಸಿ.ಎನ್.ಮಂಜುನಾಥ್ ದಂಪತಿ ಸಮೇತ ಬೆಂಬಲ ನೀಡುತ್ತಿದ್ದು ಅವರ ಆಶೀರ್ವಾದ ಯಾವಾಗಲೂ ನನ್ನ ಮೇಲಿರುತ್ತದೆ. ಹೀಗಾಗಿ ಅವರ ಮೇಲೆ ನನಗೆ ಅಪಾರ ಗೌರವವಿದೆ ಎಂದಿದ್ದಾರೆ.ಈ ಮೂಲಕ ಟಿಕೆಟ್ ಹಗ್ಗಜಗ್ಗಾಟ ಮತ್ತೊಂದು ಹಂತ ತಲುಪಿದೆ. ಈಗಾಗಲೇ ಚನ್ನಪಟ್ಟಣ ಕ್ಷೇತ್ರದಲ್ಲಿ ಜನರನ್ನು ಭೇಟಿಯಾಗಿ ಸಿಪಿ ಯೋಗೇಶ್ವರ್ ಮತಯಾಚಿಸುತ್ತಿದಾರೆ. ತಾವೇ ಎನ್‌ಡಿಎ ಅಭ್ಯರ್ಥಿ ಎಂದು ಬಿಂಬಿಸಿಕೊಂಡಿದ್ದಾರೆ. ಇದು ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಜೆಡಿಎಸ್ ನಾಯಕರ ಕೋಪಕ್ಕೆ ಕಾರಣವಾಗಿದೆ.

# ಭಯೋತ್ಪಾದಕ ಕೃತ್ಯ ಎಸಗಲು ಸಂಚು: ಸಿ.ಟಿ.ರವಿ ಆರೋಪ

**ಮೈಸೂರು, ಸೆ.16–** ಮೈಸೂರು– ಮಲೆನಾಡು ಸ್ಲೀಪರ್ ಸೆಲ್‌ಗಳ ತಾಣವಾಗುತ್ತಿದೆ, ಭಯೋತ್ಪಾದಕ ಕೃತ್ಯ ಎಸಗಲು ಇಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ ರವಿ ಬಾಂಬ್ ಸಿಡಿಸಿದ್ದಾರೆ. ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಚಿಕ್ಕಮಗಳೂರಿನಲ್ಲಿ ಪ್ಯಾಲೆಸ್ತೀನ್ ಬಾವುಟ ಹಾರಿಸಿದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ. ಈ ವೇಳೆ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧವೂ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮಲೆನಾಡು ಸ್ಲೀಪರ್ ಸೆಲ್‌ಗಳ ತಾಣವಾಗುತ್ತಿದೆ, ಭಯೋತ್ಪಾದಕ ಕೃತ್ಯ ಎಸಗಲು ಇಲ್ಲಿ ತರಬೇತಿ ನೀಡಲಾಗುತ್ತಿದೆ. ಈ ಹಿಂದೆ ಕೊಪ್ಪದಲ್ಲಿ ಯಾಸೀನ್ ಭಟ್ಕಳ್ ನೇತೃತ್ವದಲ್ಲಿ ಭಯೋತ್ಪಾದಕ ತರಬೇತಿ ಶಿಬಿರ ನಡೆಸಲಾಗುತ್ತಿತ್ತು. ಅದನ್ನು ಬಜರಂಗದಳ ಪತ್ತೆ ಮಾಡಿತ್ತು ಎಂದರು.

# ಕ್ರೀಡಾಂಗಣಗಳ ಅಭಿವೃದ್ಧಿ ಕಾಮಗಾರಿ ವರ್ಷದಲ್ಲಿ ಪೂರ್ಣ: ಸತೀಶ್ ಜಾರಕಿಹೊಳಿ ಹೇಳಿಕೆ



**ಬೆಳಗಾವಿ, ಸೆ.16:** ಕ್ರೀಡಾಪಟುಗಳಿಗೆ ಅಗತ್ಯವಿರುವ ಎಲ್ಲ ಆಧುನಿಕ ಸೌಲಭ್ಯ ಒಳಗೊಂಡ ಜಿಲ್ಲಾ ಕ್ರೀಡಾಂಗಣದ ಕಾಮಗಾರಿ ಮೂರು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.ಇಲ್ಲಿನ ರಾಮತೀರ್ಥ ನಗರದಲ್ಲಿ ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣಕ್ಕೆ ಸೋಮವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಆವರಣ ಗೋಡೆ ನಿರ್ಮಾಣ, ನೆಲ ಸಮತಟ್ಟುಗೊಳಿಸುವುದು ಸೇರಿದಂತೆ ಮೊದಲ ಹಂತದ ಕಾಮಗಾರಿಗಳು ಒಂದು ವರ್ಷದೊಳಗೆ ಪೂರ್ಣಗೊಳ್ಳಲಿವೆ ಎಂದರು. ಸದ್ಯ ಇರುವ ಜಿಲ್ಲಾ ಕ್ರೀಡಾಂಗಣದ ಲೀಸ್ ಅವಧಿ ಇನ್ನೆರಡು ವರ್ಷಗಳಲ್ಲಿ ಮುಕ್ತಾಯವಾಗಲಿದೆ. ಹಾಗಾಗಿ ಕ್ರೀಡಾ ಚಟುವಟಿಕೆಗಳು ಹಾಗೂ ಸರ್ಕಾರಿ ಕಾರ್ಯಕ್ರಮಗಳಿಗಾಗಿ ನಗರಕ್ಕೆ ಹೊಸ ಕ್ರೀಡಾಂಗಣದ ಅಗತ್ಯವಿತ್ತು. ಇದಕ್ಕೆ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ 17.36 ಎಕರೆ ಜಮೀನು ಮಂಜೂರುಗೊಳಿಸಿದ್ದು, ಮೊದಲ ಹಂತದ ಕಾಮಗಾರಿ ಆರಂಭಿಸಲಾಗುವುದು. ಟ್ರ್ಯಾಕ್‌ಗಳು, ಗ್ಯಾಲರಿಗಳು, ಇತರೆ ಕಾಮಗಾರಿಗಳನ್ನು ಎರಡನೇ ಹಂತದಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನವೇ, ಹೊಸ ಜಿಲ್ಲಾ ಕ್ರೀಡಾಂಗಣಕ್ಕೆ ಚಿಂತನೆ ನಡೆಸಿದ್ದೆವು. ನಾವು ಅಧಿಕಾರ ಹಿಡಿದ ನಂತರ, ಈ ಪ್ರಕ್ರಿಯೆ ಚುರುಕುಗೊಳಿಸಿದೆವು. ಜಾಗ ಗುರುತಿಸಿದೆವು. ಮೊದಲ ಹಂತದ ಕಾಮಗಾರಿಗೆ 10 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು. ಹೊಸ ಕ್ರೀಡಾಂಗಣಕ್ಕೆ ಗುರುತಿಸಿದ ಜಾಗದಲ್ಲಿ ದೇವಸ್ಥಾನ ಇದೆ. ಅದನ್ನು ಸ್ಥಳಾಂತರಿಸಲು ದೇವಸ್ಥಾನದ ಆಡಳಿತ ಮಂಡಳಿ ಸಮ್ಮತಿ ಸೂಚಿಸಿದೆ. ಕ್ರೀಡಾಂಗಣ ಪಕ್ಕದಲ್ಲೇ ದೇವಾಲಯದ ಪುನರ್ನಿರ್ಮಾಣ ಮಾಡಲಾಗುವುದು.

ನಿವಾಸಿಗಳ ಬೇಡಿಕೆಯಂತೆ, ಅಲ್ಲಿ ಸಮುದಾಯ ಭವನ ಸಹ ನಿರ್ಮಿಸಲಾಗುವುದು ಎಂದು ಹೇಳಿದರು. ಹೊಸ ಕ್ರೀಡಾಂಗಣದಲ್ಲಿ ಲಭ್ಯವಾಗುವ ಸೌಕರ್ಯ ಬಳಸಿಕೊಂಡು, ಈ ಭಾಗದ ಕ್ರೀಡಾಪಟುಗಳು ಸಾಧನೆಯ ನಾಗಾಲೋಟದಲ್ಲಿ ಮುನ್ನುಗ್ಗಬೇಕು ಎಂದು ಕರೆಕೊಟ್ಟರು.ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಮಹಾನಗರ ಪಾಲಿಕೆ ಸದಸ್ಯರಾದ ಹನುಮಂತ ಕೊಂಗಾಲಿ, ರವಿ ಸಾಳುಂಕೆ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ನಗರ ಪೊಲೀಸ್ ಕಮಿಷನರ್ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಇತರರಿದ್ದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಆಸೀಫ್ ಸೇಠ್, 150 ಕೋಟಿ ವೆಚ್ಚದಲ್ಲಿ ನೂತನ ಕ್ರೀಡಾಂಗಣ ನಿರ್ಮಾಣವಾಗಲಿದೆ. ಈಗ 10 ಕೋಟಿ ಬಿಡುಗಡೆಯಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಹೆಚ್ಚಿನ ಅನುದಾನ ಬಿಡುಗಡೆಗೊಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರನ್ನು ಒತ್ತಾಯಿಸಿದ್ದೇವೆ ಎಂದರು.



ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ 30 ನೇ ವಾರ್ಷಿಕ ಸರ್ವ ಸದಸ್ಯರ ಸಭೆಯು ದಾವಣಗೆರೆಯಲ್ಲಿ ಪರಿಷತ್ತಿನ ಅಧ್ಯಕ್ಷ ರಾದ ಡಾ ಸಿ. ಸೋಮಶೇ ಖರ ಅವರ ಅಧ್ಯಕ್ಷತೆ ಯಲ್ಲಿ ನಡೆಯಿತು. ಸಭೆಯ ಸಾನಿಧ್ಯ ವನ್ನು ಗದಗಿನ ಶ್ರೀ ತೊಂಟ ದ ಮಠದ ಡಾ. ಸಿದ್ದರಾಮ ಸ್ವಾಮಿಗಳುವಹಿಸಿದ್ದರು ಡೋಮಟ್ಟಿ ಮಠದ ಶ್ರೀ ಗುರುಬಸವ ಸ್ವಾಮಿಗಳು, ಮಾಜಿ ಸಚಿವರಾದ ಶ್ರೀ ಎಸ್ ಎಸ್ ಪಾಟೀಲ್ ಶ್ರೀಮತಿ ಲೀಲಾದೇವಿ ಪ್ರಸಾದ ಅವರು ಹಾಗು ಇನ್ನಿತರ ಗಣ್ಯರು ಪಾಲ್ಗೊಂಡಿದ್ದರು


# ನವದೆಹಲಿಯ ರಾಜೇಂದ್ರ ಭವನದಲ್ಲಿ ರಾಷ್ಟ್ರೀಯ ಸಭೆ




**ನವದೆಹಲಿ, ಸೆ.16:** NOPRUFನ ವತಿಯಿಂದ ರಾಷ್ಟ್ರೀಯ ಸಭೆ ದೆಹಲಿಯ ರಾಜೇಂದ್ರ ಭವನದಲ್ಲಿ ರಾಷ್ಟ್ರೀಯ ಅಧ್ಯಕ್ಷರಾದ ಬಿ.ಪಿ.ಸಿಂಗ್ ರಾವತ್ ನೇತೃತ್ವದಲ್ಲಿ ನಡೆಯಿತು. ಕೇಂದ್ರ ಸರ್ಕಾರ ಜಾರಿಗೆ ತಂದಿರುವ UPS ಯೋಜನೆಯನ್ನು ವಿರೋಧಿಸಿ ದೇಶಾದ್ಯಂತ ಹೋರಾಟ ಮಾಡಲು ನಿರ್ಧಾರ ಮಾಡಲಾಯಿತು. ಕರ್ನಾಟಕ NPS ನೌಕರರ ಸಂಘದ ರಾಜ್ಯಾಧ್ಯಕ್ಷ ನಾಗನಗೌಡ. ಎಂ.ಎ ಭಾಗವಹಿಸಿ ಕರ್ನಾಟಕದಲ್ಲಿ ಸಿದ್ದರಾಮಯ್ಯ ಸರ್ಕಾರ OPS ಕೊಡುವ ಮಾತನ್ನು ಚುನಾವಣೆಗೂ ಮುನ್ನ ನೀಡಿತ್ತು. ಅದಕ್ಕೆ ಪೂರಕವಾಗಿ ರಾಜ್ಯ ಸರ್ಕಾರ 5 ಜನ IAS ಅಧಿಕಾರಿಗಳ ಸಮಿತಿ ರಚಿಸಿದೆ. ಸಮಿತಿಯ ವರದಿಯ ನಿರೀಕ್ಷೆಯಲ್ಲಿ ರಾಜ್ಯದ ನೌಕಕರು ಇದ್ದಾರೆ.

ವರದಿ ವಿಳಂಬವಾದರೆ ರಾಜ್ಯಾದ್ಯಂತ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು. ಕರ್ನಾಟಕ ರಾಜ್ಯದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ, ಉಪಾಧ್ಯಕ್ಷರಾದ ನಾರಾಯಣ ಸ್ವಾಮಿ, ಪೃಥ್ವಿ ಕುಮಾರ ಇದ್ದರು.

# ಪಾಂಡವಪುರ ಆರ್‌ಎಸ್‌ಎಸ್ ಕಚೇರಿಗೆ ನುಗ್ಗಿದ ಪೊಲೀಸರು: ಬಿ.ವೈ.ವಿಜಯೇಂದ್ರ ಆಕ್ರೋಶ



**ಬೆಂಗಳೂರು, ಸೆ.16:** ಪಾಂಡವಪುರದ ಆರ್‌ಎಸ್‌ಎಸ್ ಕಚೇರಿಗೆ ಪೋಲಿಸರು ನುಗ್ಗಿದ ಘಟನೆ ಅತ್ಯಂತ ಖಂಡನೀಯ. ಸರ್ಕಾರ ಈ ಕೂಡಲೇ ಘಟನೆಯ ಕುರಿತು ಕ್ಷಮೆಯಾಚಿಸಲಿ ಪೊಲೀಸ್ ದರ್ಪ ಮೆರೆದ ಅಧಿಕಾರಿಗಳನ್ನು ಅಮಾನತ್ತಿನಲ್ಲಿಡಲಿ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಆರ್‌ಎಸ್‌ಎಸ್ ಕಚೇರಿಗೆ ಪೊಲೀಸರು ನುಗ್ಗಿರುವ ಘಟನೆ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಸಂವಿಧಾನ ವಿರೋಧಿ ಕ್ರಮ ಹಾಗೂ ಹಿಂದೂ ಸಮಾಜವನ್ನು ಪ್ರಚೋದಿಸುವ ನಡವಳಿಕೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೊನ್ನೆ ಗಣೇಶೋತ್ಸವ ಮೆರವಣಿಗೆಯ ಮೇಲೆ ನಡೆದ ಗಲಭೆಯಿಂದಾಗಿ ನಾಗಮಂಗಲ ಇನ್ನು ಸಹಜ ಸ್ಥಿತಿಯತ್ತ ಮರಳುತ್ತಿಲ್ಲ ಈ ನಡುವೆ ಬೆಂಕಿಗೆ ತುಪ್ಪ ಸುರಿದಂತೆ ಪೋಲಿಸರು ನಿನ್ನೆ ರಾತ್ರಿ ಪಾಂಡವಪುರದ ಆರ್.ಎಸ್.ಎಸ್ ಕಚೇರಿಗೆ ನುಗ್ಗಿ ಅನುಚಿತ ವರ್ತನೆ ತೋರಿದ್ದಾರೆ, ಪೊಲೀಸರ ಮೂಲಕ ಕಾಂಗ್ರೆಸ್ ಸರ್ಕಾರ ತುರ್ತು ಪರಿಸ್ಥಿತಿಯ ಕರಾಳ ದಿನಗಳನ್ನು ನೆನಪಿಸುವ ದಾಟಿಯಲ್ಲಿ ವರ್ತಿಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬದುಕುತ್ತಿದ್ದೇವೆಯೋ ಅಥವಾ ಹಿಂದೂ ಮನಸ್ಥಿತಿಯ ವಿರೋಧಿ ಸರ್ಕಾರದ ನೆರಳಿನಲ್ಲಿದ್ದೇವೆಯೋ ಎಂಬ ಆತಂಕ ಹಿಂದೂ ಸಮಾಜವನ್ನು ಕಾಡುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ನೈಜ ರಾಷ್ಟ್ರೀಯತೆಯನ್ನು ಪ್ರತಿಪಾದಿಸುವ ಭಾರತೀಯ ಸಮಾಜ ಕಟ್ಟುವ ಉದಾತ್ತ ಉದ್ದೇಶದಿಂದ ಜನತಳೆದ ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್) ವನ್ನು ನಿರ್ಬಂಧಿಸಲು ಕಾಂಗ್ರೆಸ್, ನೆಹರು ಕಾಲದಿಂದಲೂ ಯತ್ನಿಸುತ್ತಲೇ ಬಂದಿದೆ ಎಂದು ಆರೋಪಿಸಿದ್ದಾರೆ. ಸಮರ್ಪಣೆಯ ಬದ್ಧತೆ, ತ್ಯಾಗದ ಪರಿಪೂರ್ಣತೆಯನ್ನು ಮೈಗೂಡಿಸಿಕೊಂಡಿರುವ ಕೋಟ್ಯಾಂತರ ಸ್ವಯಂಸೇವಕರ ಮಹಾಪಡೆಯನ್ನು ಹೊಂದಿರುವ ಆರ್‌ಎಸ್‌ಎಸ್, ದಬ್ಬಾಳಿಕೆ ಎದುರಾದಷ್ಟು ಹೆಮರವಾಗಿ ಬೆಳೆಯುತ್ತಲೇ ಇರುತ್ತದೆ. ಇದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಅರಿತು ನಡೆದರೆ ಒಳಿತು ಎಂದು ಅವರು ಎಚ್ಚರಿಸಿದ್ದಾರೆ.

# ದಸರಾ ಚಲನಚಿತ್ರೋತ್ಸವ: ಉತ್ತಮ ಕಿರುಚಿತ್ರ ಆಯ್ಕೆಗೆ ಪೂರ್ವಸಿದ್ಧತೆ

**ಮೈಸೂರು, ಸೆ.16:** ದಸರಾ ಚಲನಚಿತ್ರೋತ್ಸವ 2024ರ ಅಂಗವಾಗಿ ಕಿರುಚಿತ್ರಗಳ ಸ್ಪರ್ಧೆ ಆಯೋಜಿಸಲಾಗಿತ್ತು. ಈ ಸಂಬಂಧವಾಗಿ ಕಿರುಚಿತ್ರ ಸ್ಪರ್ಧೆಗೆ ಬಂದ 72 ಕಿರುಚಿತ್ರಗಳನ್ನು ಚಲನಚಿತ್ರ ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುವವರು ಉತ್ತಮ ಕಿರುಚಿತ್ರಗಳ ಆಯ್ಕೆ ಸಂಬಂಧ ಇಂದು ವೀಕ್ಷಿಸಿದರು. ಬಾರಿಯ ದಸರಾ ಚಲನಚಿತ್ರೋತ್ಸವದಲ್ಲಿ ಕಿರುಚಿತ್ರ ತಯಾರಿಕೆ ಸ್ಪರ್ಧೆ ಸೇರಿದಂತೆ ಹಲವು ವಿಶೇಷಗಳನ್ನು ನೀಡಲು ಚಲನ ಚಿತ್ರೋತ್ಸವ ಉಪ ಸಮಿತಿ ಸಿದ್ಧತೆ ನಡೆಸಿದ್ದು ತೀರ್ಪುಗಾರರಿಂದ ಆಯ್ಕೆಯಾದ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಅತ್ಯುತ್ತಮ ಕಿರುಚಿತ್ರಗಳನ್ನು ಐನಾಕ್ಸ್ ಚಿತ್ರಮಂದಿರದಲ್ಲಿ ಪ್ರದರ್ಶನ ಮಾಡಲಾಗುವುದು. ಕಿರುಚಿತ್ರಗಳ ಸ್ಪರ್ಧೆಗೆ 63 ಕನ್ನಡ ಭಾಷೆ, 2 ಮೂಕಿ ಚಿತ್ರ, 1 ಕೊಡವ, 1 ಹಿಂದಿ, 4 ತಮಿಳು ಹಾಗೂ 1 ಲಂಬಾಣಿ ಭಾಷೆಯ ಕಿರುಚಿತ್ರಗಳು ಬಂದಿರುತ್ತದೆ.


ಕಿರುಚಿತ್ರ ಸ್ಪರ್ಧೆಗೆ ಬಂದ ಕಿರುಚಿತ್ರಗಳ ಆಯ್ಕೆ ಸಂಬಂಧ ತೀರ್ಪು ಗಾರರಾಗಿ ರಂಗಭೂಮಿ ಕಲಾವಿದರು ಹಾಗೂ ಚಲನಚಿತ್ರ ನಟರು, ಕಿರುತರೆ ನಟರಾದ ಶಿವಾಜಿರಾವ್ ಜಾಧವ್, ಹಿರಿಯ ಚಲನಚಿತ್ರ ಛಾಯಾಗ್ರಾಹಕರು ಹಾಗೂ ನಿರ್ದೇಶಕ ಜನಾರ್ದನ್, ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥೆ ಪ್ರೊ. ಸಪ್ನಾ ಎಸ್.ಎಂ ಹಾಗೂ ಛಾಯಾಗ್ರಾಹಕರು ಮತ್ತು ನಟ ಕೆ.ಜೆ.ಪವನ್ ಅವರು ಭಾಗವಹಿಸಿದ್ದರು ಸಂದರ್ಭದಲ್ಲಿ ದಸರಾ ಚಲನಚಿತ್ರೋತ್ಸವ ಉಪ ವಿಶೇಷಾಧಿಕಾರಿ ಹಾಗೂ ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್. ಬಸವರಾಜು, ಸಮಿತಿಯ ಕಾರ್ಯಾಧ್ಯಕ್ಷರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಹಾಗೂ ಸಮಿತಿಯ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಹರೀಶ್ ಟಿ.ಕೆ. ಹಾಗೂ ಚಲನ ಚಿತ್ರೋತ್ಸವದ ಸಹ ಸಂಯೋಜಕ ಶ್ರೇಯಸ್ ಮತ್ತು ಇತರರು ಉಪಸ್ಥಿತರಿದ್ದರು.

# ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಕರ್ನಾಟಕದ ನಾಲ್ವರಿಗೆ ಶ್ರೇಷ್ಠತಾ ಪದಕ

## ಫ್ರಾನ್ಸ್‌ನ ಲಿಯೋನ್‌ನಲ್ಲಿ ನಡೆದ ಸ್ಪರ್ಧೆ: ಸಾಧಕರಿಗೆ ಸಚಿವ ಶರಣಪ್ರಕಾಶ್ ಪಾಟೀಲ್ ಶ್ಲಾಘನೆ

**ಬೆಂಗಳೂರು ಸೆ.16–** ಫ್ರಾನ್ಸ್‌ನ ಲಿಯೋನ್‌ನಲ್ಲಿ ನಡೆದ ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಕರ್ನಾಟಕದ ನಾಲ್ವರು ಶ್ರೇಷ್ಠತಾ ಪದಕಗಳನ್ನು ಪಡೆದ್ದಿದ್ದರೆ. ಲಿಯೋನ್‌ನಲ್ಲಿ ಸೆಪ್ಟೆಂಬರ್ 10 ರಿಂದ 15 ರವರೆಗೆ ನಡೆದ ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಕರ್ನಾಟಕದ 9 ಸ್ಪರ್ಧಿಗಳು ಭಾಗವಹಿಸಿದ್ದು, ಈ ಪೈಕಿ ಪ್ರೇಮ್, ಹರ್ಷವರ್ಧನ್, ಭಾನುಪ್ರಸಾದ್, ದರ್ಶನ್ ಗೌಡ 3 ಕೌಶಲ್ಯ ಸ್ಪರ್ಧೆಯಲ್ಲಿ ಶ್ರೇಷ್ಠತಾ ಪದಕ ಪಡೆದಿದ್ದಾರೆ. ಇದಕ್ಕೂ ಮುನ್ನ ಕಳೆದ ಮೇ ತಿಂಗಳಿನಲ್ಲಿ ನವದೆಹಲಿಯಲ್ಲಿ ನಡೆದ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿಯೂ ಕರ್ನಾಟಕದಿಂದ 62 ಅಭ್ಯರ್ಥಿಗಳು ಪಾಲ್ಗೊಂಡಿದ್ದರು. ಯುವ ಕೌಶಲ್ಯ ಸ್ಪರ್ಧೆಯಲ್ಲಿ 13 ಚಿನ್ನದ ಪದಕ, 12 ಬೆಳ್ಳಿ ಪದಕ, 4 ಕಂಚಿನ ಪದಕ ಹಾಗೂ 19 ಶ್ರೇಷ್ಠತಾ ಪದಕ ಗೆಲ್ಲುವುದರೊಂದಿಗೆ ರಾಜ್ಯದ ಹಿರಿಮೆಯನ್ನು ಹೆಚ್ಚಿಸಿದ್ದಾರೆ.

ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಕರ್ನಾಟಕ 2ನೇ ಸ್ಥಾನ ಪಡೆದಿದೆ. ಅಲ್ಲಿ ಉತ್ತಮ ಪ್ರದರ್ಶನ ನೀಡಿದ್ದ ಕರ್ನಾಟಕದ ಪ್ರೇಮ್ (ಆಡಿಟಿವ್ ಮ್ಯಾನುಫ್ಯಾಕ್ಚರಿಂಗ್), ಹರ್ಷವರ್ಧನ್



(ಕುಕ್ಕಿಂಗ್), ಭಾನುಪ್ರಸಾದ್, ದರ್ಶನ್ ಗೌಡ (ಮೆಕಾಟ್ರಾನಿಕ್ಸ್) ಫ್ರಾನ್ಸ್ನ ಲಿಯೋನ್ನಲ್ಲಿ ನಡೆದ ಅಂತಾರಾಷ್ಟ್ರೀಯ ಸ್ಪರ್ಧೆಗೆ ಆಯ್ಕೆಯಾಗಿದ್ದರು. ಅಲ್ಲಿಯೂ ತಮ್ಮ ಚಾಕಚಕ್ಯತೆ ತೋರಿದ ನಾಲ್ವರು ಶ್ರೇಷ್ಠತಾ ಪದಕ ಪಡೆದಿದ್ದಾರೆ.

**ಕರ್ನಾಟಕದ ಸಾಧಕರಿಗೆ ಸಚಿವರ ಮೆಚ್ಚುಗೆ :**

ಫ್ರಾನ್ಸ್ ನ ಲಿಯೋನ್ನಲ್ಲಿ ನಡೆದ ಅಂತಾರಾಷ್ಟ್ರೀಯ ಸ್ಪರ್ಧೆಯಲ್ಲಿ ಶ್ರೇಷ್ಠತಾ ಪದಕಗಳನ್ನು ಪಡೆದಿರುವ ಕರ್ನಾಟಕದ ಸಾಧಕರನ್ನು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಶರಣ ಪ್ರಕಾಶ್ ಪಾಟೀಲ್ ಅಭಿನಂದಿಸಿದ್ದಾರೆ. ಈ ಸಂಬಂಧ ಮಾಧ್ಯಮ ಪ್ರಕಟಣೆ ಹೊರಡಿಸಿದ್ದು, ಆಡಿಟಿವ್ ಮ್ಯಾನುಫ್ಯಾಕ್ಚರಿಂಗ್, ಕುಕ್ಕಿಂಗ್, ಮೆಕಾಟ್ರಾನಿಕ್ಸ್ ವಿಭಾಗದಲ್ಲಿ ಪದಕ ಗಿಟ್ಟಿಸಿರುವ ಪ್ರೇಮ್, ಹರ್ಷವರ್ಧನ್, ಭಾನುಪ್ರಸಾದ್, ದರ್ಶನ್ ಗೌಡ ಅವರಿಗೆ ವೈಯಕ್ತಿಕವಾಗಿ ಅಭಿನಂದನೆಗಳನ್ನು ತಿಳಿಸುತ್ತೇನೆ. ನಿಮ್ಮ ಅಸಾಧಾರಣ ಪ್ರತಿಭೆಯಿಂದ ನಮ್ಮ ಕರ್ನಾಟಕ ಕೌಶಲ್ಯತೆ ಹಾಗೂ ನಿಪುಣತೆಯಲ್ಲಿ ವಿಶ್ವ ಮಟ್ಟದಲ್ಲಿ ಮನ್ನಣೆ ಗಳಿಸಿದೆ. ನಿಮ್ಮಂಥ ಪ್ರತಿಭೆಗಳಿಗೆ ಉತ್ತೇಜನ ನೀಡಲು ನಮ್ಮ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸದಾ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಮುಂಬರುವ ದಿನಗಳಲ್ಲಿ ನಮ್ಮ ಇಲಾಖೆಯ ವತಿಯಿಂದ ಇನ್ನಷ್ಟು ಯೋಜನೆಗಳನ್ನು ಜಾರಿಗೆ ತಂದು, ರಾಜ್ಯವನ್ನು ಕೌಶಲ್ಯ ಹಾಗೂ ನಿಪುಣ ರಾಜ್ಯವನ್ನಾಗಿ ಮಾಡಲು ಎಲ್ಲ ರೀತಿಯ ಪ್ರಯತ್ನ ಮಾಡಲಾಗುವುದು. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಸದಾ ಬದ್ಧವಾಗಿದೆ ಎಂದು ಸಚಿವರು ತಿಳಿಸಿದ್ದಾರೆ.



ಕೆ.ಎಸ್.ಡಿ.ಸಿ ಅಧ್ಯಕ್ಷ ಕಾಂತಾ ನಾಯ್ಕ್, ಕೆ.ಎಸ್.ಡಿ.ಎ ಅಧ್ಯಕ್ಷ ಡಾ. ಇ.ವಿ. ರಮಣರೆಡ್ಡಿ, ಕೆ.ಎಸ್.ಡಿ.ಸಿ. ವ್ಯವಸ್ಥಾಪಕ ನಿರ್ದೇಶಕ ಎಂ. ಕನಗವಲ್ಲಿ, ಜಿ.ಟಿ.ಟಿ.ಸಿ ವ್ಯವಸ್ಥಾಪಕ ನಿರ್ದೇಶಕ ವೈ.ಕೆ. ದಿನೇಶ್ ಕುಮಾರ್, ಹಿರಿಯ ಅಧಿಕಾರಿಗಳಾದ ಕೃಷ್ಣ ಕುಮಾರ್, ಕೃಷ್ಣ ಗೌಡ ಹಾಗೂ ಇತರರು ಕರ್ನಾಟಕದ ನಿಯೋಗದಲ್ಲಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,‘A’/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಸೆಪ್ಟೆಂಬರ್ 17, 2024, ಮಂಗಳವಾರ

## ಒಳಪುಟಗಳಲ್ಲಿ

ಜಿಎಂಎಂ ಪಕ್ಷಕ್ಕೆ ಕಾಂಗ್ರೆಸ್‌ನ ಭೂತ ಅಂಟಿಕೊಂಡಿದೆ-ಮೋದಿ ಗುಡುಗು - ಪು.4

## ನಾಗಮಂಗಲ ಪ್ರಕರಣ

### ನಿಷೇದಿತ ಸಂಘಟನೆಗಳ ಕೈವಾಡ: ಅಶೋಕ್ ಆರೋಪ



ಬೆಂಗಳೂರು, ಸೆ.16– ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಕೋಮು ಗಲಭೆಯಲ್ಲಿ ಮೂವರು ಕಿಡಿಗೇಡಿಗಳು ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳ ಹೇಳುತ್ತಿದ್ದು, ಈ ಕೋಮುದಳ್ಳುರಿಯಲ್ಲಿ ನಿಷೇಧಿತ ಸಂಘಟನೆಗಳ ಕೈವಾಡವಿರುವ ಅನುಮಾನ ಮತ್ತಷ್ಟು ಗಟ್ಟಿಯಾಗುತ್ತಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಘಟನೆ ಬೆನ್ನಲ್ಲೇ ಚಿಕ್ಕಮಗಳೂರಲ್ಲಿ ಬೈಕ್ ನಲ್ಲಿ ಪ್ಯಾಲೆಸ್ತೀನ್ ಧ್ವಜ ಹಿಡಿದಿರುವ ಪುಂಡಾಟ, ದಾವಣಗೆರೆಯ ಗಾಂಧಿನಗರ ಹಾಗೂ ಅಹದ್ ನಗರಗಳಲ್ಲಿ ಹಿಂದೂ ಯುವಕರು ಬಾವುಟ ಕಟ್ಟಿದ್ದಕ್ಕೆ ಮತಾಂಧ ಪುಂಡರು ಅವರ ಮೇಲೆ ಹಲ್ಲೆ ಮಾಡಿರುವುದು, ಇವನ್ನೆಲ್ಲಾ ಗಮನಿಸುತ್ತಿದ್ದರೆ ಈ ಪ್ರಚೋದನಕಾರಿ ಘಟನೆಗಳು ಗಣೇಶೋತ್ಸವವನ್ನೇ ಟಾರ್ಗೆಟ್ ಮಾಡಿರುವಂತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಇಂತಹ ಘಟನೆಗಳು ಅಯೋಧ್ಯ ರಾಮ ಮಂದಿರದ ಉದ್ಘಾಟನೆ ಸಂದರ್ಭದಲ್ಲಿಯೂ ನಡೆದಿತ್ತು. ಹಿಂದೂಗಳ ಹಬ್ಬಗಳು, ಉತ್ಸವಗಳು, ಸಂಭ್ರಮಾಚರಣೆಗಳನ್ನೇ ಗುರಿಯಾಗಿಸಿ ರಾಜ್ಯಾದ್ಯಂತ ನಡೆಸುತ್ತಿರುವ ಇಂತಹ ದುಷ್ಕೃತ್ಯಗಳ ಹಿಂದೆ ಮತೀಯ ಮೂಲಭೂತವಾದಿ ಸಂಘಟನೆಗಳ ದೊಡ್ಡ ಜಾಲವೇ ಇರುವಂತಿದೆ. ಅಂತಾರಾಜ್ಯ, ಅಂತರಾಷ್ಟ್ರೀಯ ನಂಟು ಹೊಂದಿರುವ ಇಂತಹ ವ್ಯವಸ್ಥಿತ, ಪ್ರಾಯೋಜಿತ, ಜಾಲವನ್ನು ಬೇಧಿಸುವುದು ಸ್ಥಳೀಯ ಪೊಲೀಸರಿಂದ ಅಸಾಧ್ಯವಾಗಿದ್ದು, ಕೂಡಲೇ ಈ ಪ್ರಕರಣಗಳನ್ನ ಎನ್ಐಗೆ ವಹಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

# 2030 ರ ವೇಳೆಗೆ 500ಜಿಡಬ್ಲ್ಯು ಹಸಿರು ಇಂಧನ ಉತ್ಪಾದನೆ ಗುರಿ

## ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆಯಲ್ಲಿ ಮೋದಿ ವಾಗ್ದಾನ



ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಗುಜರಾತ್‌ನ ಗಾಂಧಿನಗರದಲ್ಲಿ 4 ನೇ ಜಾಗತಿಕ ಮರು ಹೂಡಿಕೆ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆ ಮತ್ತು ಪ್ರದರ್ಶನವನ್ನು ಉದ್ಘಾಟಿಸಿದರು.

**ಅಹ್ಮದಬಾದ್, ಸೆ.16:** ನವೀಕರಿಸಬಹುದಾದ ಇಂಧನ ಇಲಾಖೆಯಿಂದ ಆಯೋಜಿಸಿರುವ 4ನೇ ಜಾಗತಿಕ ಮಟ್ಟದ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆ ಮತ್ತು ಎಕ್ಸ್‌ಪೋಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಗುಜುರಾತ್ನ ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಎಕ್ಸ್‌ಪೋ ನಡೆಯುತ್ತಿದ್ದು ಉದ್ಘಾಟನ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಗುಜರಾತ್ ಸಿಎಂ ಭೂಪೇಂದ್ರ ಪಟೇಲ್ ಸೇರಿ ಹಲವು ಗಣ್ಯರು ಭಾಗಿಯಾಗಿದ್ದರು.

200 ಅಧಿಕ ವಿದೇಶಿ ಪ್ರತಿನಿಧಿಗಳು, ವಿವಿಧ ಕಂಪನಿಗಳು ಹಾಗೂ 10000 ಸಾರ್ವಜನಿಕರು ಇದರಲ್ಲಿ ಭಾಗಿಯಾಗಿದ್ದರು. ಮೂರು ದಿನಗಳಲ್ಲಿ 40 ಸೆಷನ್‌ಗಳು ನಡೆಯುತ್ತಿದ್ದು ನವೀಕರಿಸಬಹುದಾದ ಇಂಧನ ವಲಯದಲ್ಲಿ ಭಾರತದಲ್ಲಿರುವ ಅವಕಾಶಗಳಲ್ಲಿ ಹೂಡಿಕೆ ಬಗ್ಗೆ ಸುಧೀರ್ಘ ಚರ್ಚೆ ನಡೆಯಲಿದೆ.

ಕಾರ್ಯಕ್ರಮ ಉದ್ಘಾಟನೆ ಬಳಿಕ ಪ್ರಧಾನಿ ನರೇಂದ್ರ ಮೋದಿ ಮಾತು, ಮುಂದಿನ ಮೂರು ದಿನ ಇಂಧನದ ಭವಿಷ್ಯ ಮತ್ತು ಯೋಜನೆಗಳ ಬಗ್ಗೆ ಚರ್ಚೆ ನಡೆಯಲಿದೆ, ಈ ವಲಯದ ತಜ್ಞರಿದ್ದಾರೆ ಇದರಿಂದ ನಮ್ಮಗೆ ಮಾರ್ಗದರ್ಶನ ಸಿಗಲಿದೆ ಒಬ್ಬರಿಂದ ಮತ್ತೊಬ್ಬರು ಈ ಎಕ್ಸ್‌ಪೋ ಯಿಂದ ಹೊಸತನ್ನು ಕಲಿಯಲಿದ್ದೇವೆ ಎಂದರು.

ಭಾರತದ ಜನರು ಐವತ್ತು ವರ್ಷಗಳ ನಂತರ ಒಂದೇ ಪಕ್ಷಕ್ಕೆ ಮೂರನೇ ಬಾರಿಗೆ ಸತತವಾಗಿ ಅಧಿಕಾರ ನೀಡಿದ್ದಾರೆ.

140 ಜನರಿಗೆ, ಭಾರತದ ಯುವಕರಿಗೆ ಭರವಸೆ ಇದೆ ಅವರ ಭರವಸೆಗಳನ್ನು ನಾವು ಈಡೇರಿಸಬೇಕಿದೆ. ದೇಶದ ಬಡವರು, ದಲಿತರು, ಹಿಂದುಳಿದ, ವಂಚಿತರಿಗೆ ಆರಾಮದಾಯಕ ಜೀವನದ ಭರವಸೆ ನೀಡಬೇಕು, ವಿಶ್ವದ ಮೂರನೇ ಬಲಿಷ್ಠ ಆರ್ಥಿಕತೆಯ ದಿಕ್ಕಿನಲ್ಲಿ ಸಾಗುತ್ತಿದ್ದೇವೆ 2047 ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನು ಮಾಡಬೇಕಿದೆ ಇದರ ಟ್ರೇಲರ್ ನಮ್ಮ ಮೂರನೇ ಅವಧಿಯ ಮೊದಲ ನೂರು ದಿನದಲ್ಲಿ ತೋರುತ್ತದೆ ನಮ್ಮ ಆದ್ಯತೆ ಮತ್ತು ನಮ್ಮ ವೇಗ ಕಾಣ ಸಿಗಲಿದೆ

ಪ್ರತಿಯೊಂದು ಕ್ಷೇತ್ರವನ್ನು ಗಮನ ಹರಿಸಿ, ಅಭಿವೃದ್ಧಿ ಕಾರ್ಯ ಮಾಡಲಾಗುತ್ತಿದೆ, 7 ಕೋಟಿ ಮನೆ ನಿರ್ಮಾಣ ಮಾಡುತ್ತಿದ್ದೇವೆ, ಹಿಂದಿನ ಎರಡು ಅವಧಿಯಲ್ಲಿ ಕ್ರಮವಾಗಿ ಮೂರು ಮತ್ತು ನಾಲ್ಕು ಕೋಟಿ ಮನೆ ನಿರ್ಮಾಣ ಮಾಡಿದೆ. ಕಳೆದ ನೂರು ದಿನಗಳಲ್ಲಿ ಹದಿನೈದು ವಂದೇ ಭಾರತ್ ಟ್ರೈನ್ ಚಾಲನೆ ನೀಡಿದೆ, 2025 ಒಳಗೆ ಪೆಟ್ರೋಲ್ ಒಳಗೆ 20% ಎಥಿನಾಲ್ ಬ್ಲೇಡಿಂಗ್ ಮಾಡಲಿದ್ದೇವೆ

ಭಾರತದಲ್ಲಿ ನವೀಕರಿಸಬಹುದಾದ ಇಂಧನಕ್ಕೆ ಬೇಡಿಕೆ ಹೆಚ್ಚುತ್ತಿದೆ, ಅದಕ್ಕಾಗಿ ನಾವು ಹೊಸ ಯೋಜನೆಗಳನ್ನು ಆರಂಭಿಸುತ್ತಿದ್ದೇವೆ, ಹೀಗಾಗಿ ಭಾರತದಲ್ಲಿ ಹೂಡಿಕೆಗೆ ಅವಕಾಶಗಳಿದೆ, ಈ ವಲಯದಲ್ಲಿ ಭಾರತಕ್ಕಿಂತ ಉತ್ತಮ ಸ್ಥಳ ಮತ್ತೊಂದಿಲ್ಲ ಎಂದರು.

ಪ್ರಹ್ಲಾದ್ ಜೋಶಿ ಕಳೆದ ಬಾರಿ ಕಲ್ಲಿದ್ದಲು ಸಚಿವರಾಗಿದ್ದರು, ಈಗ ಅವರು ನವೀಕರಿಸಬಹುದಾದ ಇಂಧನ ಸಚಿವರಾಗಿದ್ದಾರೆ ಅವರು ಈಗ ಅಪ್ಡೇಟ್ ಆಗಿದ್ದಾರೆ ಎಣಮದು ಭಾಷಣದಲ್ಲಿ ಪ್ರಹ್ಲಾದ್ ಜೋಶಿ ಉಲ್ಲೇಖಿಸಿ ಮೋದಿ ಹಾಸ್ಯ ಚಟಾಕಿ ಹಾರಿಸಿದರು.

ಭಾರತದಲ್ಲಿ ಕಲ್ಲಿದ್ದಲ್ಲಿ ಗ್ಯಾಸ್ ನಿಕ್ಷೇಪ ಹೆಚ್ಚಿನ ಪ್ರಮಾಣ ಇಲ್ಲ, ಹೀಗಾಗಿ ಸೋಲಾರ್ ಮತ್ತು ನ್ಯೂಕ್ಲಿಯರ್‌ಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ, 2030ರ ವೇಳೆ 500 GW ಗ್ರೀನ್ ಎನರ್ಜಿ ಉತ್ಪಾದನೆ ಗುರಿ ಹೊಂದಿದೆ. ಸೂರ್ಯಘರ್ ಯೋಜನೆ ಅಧ್ಯಯನ ಮಾಡಬೇಕು, ಮನೆ ಛಾವಣಿ ಮೇಲೆ ಸೋಲಾರ್ ಅಳವಡಿಸಲು ಸಬ್ಸಿಡಿ ನೀಡುವುದಲ್ಲದೇ ಸರ್ಕಾರ ಸಹಾಯ ಮಾಡುತ್ತಿದೆ, 1.30 ಕೋಟಿ ಜನರು ಈಗಾಗಲೇ ನೋಂದಣಿ ಮಾಡಿಕೊಂಡಿದ್ದಾರೆ, 3.5 ಲಕ್ಷ ಮನೆಗಳಲ್ಲಿ ಸೋಲಾರ್ ಅಳವಡಿಸಿದೆ ಈಗ ಜನರು ವಿದ್ಯುತ್ ಉತ್ಪಾದಿಸಿ ಮಾರಾಟ ಮಾಡುತ್ತಿದ್ದಾರೆ ಇದರಿಂದ ವಿದ್ಯುತ್ ಉಳಿತಾಯದ ಜೊತೆಗೆ ಹಣ ಮದ ಸಂಪಾದನೆಯಾಗಲಿದೆ

ಇಲ್ಲಿ ವಿದ್ಯುತ್ ಉತ್ಪಾದನೆ ಜೊತೆಗೆ ಉದ್ಯೋಗ ಸೃಷ್ಟಿಯಾಗಲಿದೆ ಮತ್ತು ಪ್ರಕೃತಿಯ ರಕ್ಷಣೆಯೂಯಾಗಲಿದೆ, ಮೂಡೇರಾ ದೇಶದ ಮೊದಲ ಗ್ರಾಮವಾಗಿದೆ, ಇಲ್ಲ ಎಲ್ಲ ಮನೆಗಳಿಗೆ ಸೋಲಾರ್ ಅಳವಡಿಸಿದೆ ಸೋಲಾರ್ ಮೂಲಕ ಈ ಹಳ್ಳಿ ವಿದ್ಯುತ್ ನಲ್ಲಿ ಸ್ವಾವಲಂಬಿಯಾಗಿದೆ. ಅಯೋಧ್ಯೆಯನ್ನು ಮಾಡೆಲ್ ಸೋಲಾರ್ ಸಿಟಿ ಮಾಡುವ ಚಿಂತನೆ ಇದೆ, ಈಗಾಗಲೇ ಈ ಕಾರ್ಯ ಶುರುವಾಗಿದೆ, ಬೀದಿದೀಪ, ಬೋರ್ಡ್, ಎಟಿಎಂ ಸೇರಿ ಹಲವು ಕಡೆ ಸೋಲಾರ್ ಬಳಸಲಾಗುತ್ತಿದೆ. ಭಾರತದಲ್ಲಿ 17 ಸೋಲಾರ್ ಸಿಟಿ ನಿರ್ಮಿಸುವ ಗುರಿ ಹೊಂದಿದೆ ಎಂದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಭಾರತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ, ನವೀಕರಿಸಬಹುದಾದ ಇಂಧನಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ, ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನವೀಕರಿಸಬಹುದಾದ ಇಂಧನ ಶಕ್ತಿ ಹೆಚ್ಚಿದೆ, ಭಾರತದ ಸೋಲಾರ್ ಶಕ್ತಿ 33% ಹೆಚ್ಚಾಗಿದೆ. ಪ್ರಧಾನಮಂತ್ರಿ ಸೂರ್ಯಘರ್ ಯೋಜನೆಯಲ್ಲಿ ಸಾಕಷ್ಟು ಜನರು ಇಂದು ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ, 32.45 ಲಕ್ಷ ಕೋಟಿ 2030 ರೊಳಗೆ ಹೂಡಿಕೆ ಮಾಡಲು ಹೂಡಿಕೆದಾರರು ಮುಂದೆ ಬಂದಿದ್ದಾರೆ ಎಂದರು.

ಸಿಎಂ ಭೂಪೇಂದ್ರ ಪಟೇಲ್ ಮಾತಾನಾಡಿ, ಪ್ರಧಾನಿ ನರೇಂದ್ರ ಮೋದಿ ಸಿಎಂಯಾಗಿದ್ದ ವೇಳೆ ಗುಜರಾತ್‌ನಲ್ಲಿ ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಆರಂಭಿಸಿದರು, ಹವಮಾನ ಬದಲಾವಣೆ ಬಗ್ಗೆ ಚರ್ಚೆ ನಡೆಯುವ ಹೊತ್ತಲ್ಲಿ ಅವರು ಅದಕ್ಕಾಗಿ ಪ್ರತ್ಯೇಕ ಇಲಾಖೆ ತೆರೆದರು ಗುಜರಾತ್ ನಲ್ಲಿ ಸೋಲಾರ್ ಪಾರ್ಕ್ ನಿರ್ಮಾಣ ಮಾಡಿದರು. ವಿಂಡ್ ಎನರ್ಜಿ ಯಲ್ಲಿ ಗುಜರಾತ್ ಎರಡನೇ ಸ್ಥಾನದಲ್ಲಿದೆ, ಗುಜರಾತ್ ಅನ್ನು ಗ್ರೀನ್ ಎನರ್ಜಿ ಹಬ್ ಮಾಡುವ ಗುರಿ ಹೊಂದಿದೆ, ಅದಕ್ಕಾಗಿ ಸಾಕಷ್ಟು ಸ್ಥಳ ಪರಿಶೀಲನೆ ಮಾಡಿದೆ

ಪ್ರಧಾನಿ ನರೇಂದ್ರ ಮೋದಿ ಕನಸು ಸಾಕಾರಗೊಳಿಸಲು ಗುಜರಾತ್ ತನ್ನದೇಯಾದ ಯೋಗದಾನ ಮಾಡಲಿದೆ, ನವೀಕರಿಸಬಹುದಾದ ಇಂಧನದ ಶಕ್ತಿ ಪ್ರಯೋಜನ ಸಾಮಾನ್ಯ ಜನರು ಪಡೆಯಬೇಕು ಎಂಬುದು ಮೋದಿ ಅವರು ಚಿಂತನೆ, ಸೂರ್ಯಘರ್ ಯೋಜನೆ ಮೂಲಕ ಅದನ್ನು ಸಾಕಾರಗೊಳಿಸಲಾಗುತ್ತಿದೆ. ಸೋಲಾರ್, ಸೆಮಿಕಂಡಕ್ಟರ್, ನಾಗರಿಕ ವಿಮಾನಯಾನ, ಗ್ರೀನ್ ಎನರ್ಜಿ ಹೀಗೆ ಹಲವು ವಲಯಗಳಲ್ಲಿ ಸಂಬಂಧಿಸಿದಂತೆ ಎಕ್ಸ್‌ಪೋ ನಡೆಸಲಾಗುತ್ತಿದೆ.ವಿಶ್ವದಲ್ಲಿ ಸೋಲಾರ್ ಬಗ್ಗೆ ಚರ್ಚೆ ಇರಲಿಲ್ಲ, ಆದರೆ ಗುಜರಾತ್ ನಲ್ಲಿ ಸೋಲಾರ್ ಅಳವಡಿಕೆ ಆರಂಭವಾಗಿತ್ತು, ಹವಮಾನ ಬದಲಾವಣೆಗೆ ಮೊದಲು ಸಚಿವಾಲಯ ಶುರು ಮಾಡಿದ್ದು ಗುಜರಾತ್ ನಲ್ಲಿ ಮಹಾತ್ಮ ಗಾಂಧಿ ಅವರ ಕನಸು ನನಸು ಮಾಡಬೇಕಿದೆ ಗ್ರೀನ್ ಎನರ್ಜಿ ಇಂದಿನ ಭಾರತದ ಅಗತ್ಯವಾಗಿದೆ ಎಂದರು.

### ಇಂಧನ ವಲಯದಲ್ಲಿ ಕರ್ನಾಟಕಕ್ಕೆ ನಾಲ್ಕು ಪ್ರಶಸ್ತಿ



ನವೀಕರಿಸಬಹುದಾದ ಇಂಧನ ಇಲಾಖೆಯಿಂದ 4ನೇ ಜಾಗತಿಕ ಮಟ್ಟದ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆ ಮತ್ತು ಎಕ್ಸ್‌ಪೋಗೆ ಆಯೋಜಿಸಲಾಗಿದೆ. ಗುಜುರಾತ್ನ ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಎಕ್ಸ್‌ಪೋ ನಡೆಯುತ್ತಿದ್ದು ಇಂದು ಪ್ರಧಾನಿ ನರೇಂದ್ರ ಮೋದಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಎಕ್ಸ್‌ಪೋದಲ್ಲಿ ಕರ್ನಾಟಕದ ಇಂಧನ ಇಲಾಖೆಯೂ ಭಾಗಿಯಾಗಿದ್ದು ವಿಶೇಷವಾದ ಪೆವಿಲಿಯನ್ ನಿರ್ಮಿಸಿದೆ. ಕರ್ನಾಟಕ ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ನೇತೃತ್ವದಲ್ಲಿ ಹಾಕಲಾಗಿರುವ ಕರ್ನಾಟಕ ಪೆವಿಲಿಯನ್ ಉದ್ಯಮಿಗಳ ಗಮನ ಸೆಳೆಯುತ್ತಿದೆ. ಸೌರಶಕ್ತಿ ಸ್ಥಾಪಿತ ಸಾಮರ್ಥ್ಯ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿದ 2ನೇ ರಾಜ್ಯ, ಪವನಶಕ್ತಿ ಸ್ಥಾಪಿತ ಸಾಮರ್ಥ್ಯದಲ್ಲಿ 3ನೇ ರಾಜ್ಯ, ಜಲವಿದ್ಯುತ್ ಸ್ಥಾಪಿತ ಸಾಮರ್ಥ್ಯದಲ್ಲಿ 2ನೇ ರಾಜ್ಯ ಮತ್ತು ಪಾವಗಡ ಸೋಲಾರ್ ಪಾರ್ಕ್‌ಗೆ ದೇಶದ ಅತಿದೊಡ್ಡ ನವೀಕರಿಸಬಹುದಾದ ಇಂಧನ ಪಾರ್ಕ್ ಎಂಬ ನಾಲ್ಕು ಪ್ರಶಸ್ತಿಗಳನ್ನು ರಾಜ್ಯ ಇಂಧನ ಇಲಾಖೆಗೆ ಕೇಂದ್ರ ನವೀಕರಿಸಬಹುದಾದ ಇಂಧನ ಇಲಾಖೆಯಿಂದ ನೀಡಿ ಗೌರವಿಸಿದೆ. ಈ ಬಗ್ಗೆ ಮಾತನಾಡಿದ ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನ ವಲಯದಲ್ಲಿ ಹೂಡಿಕೆಗೆ ವಿಪುಲವಾದ ಅವಕಾಶಗಳಿವೆ. ಅಂತಹ ಅಂಶಗಳನ್ನಿಟ್ಟುಕೊಂಡು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆಯಲು ಪೆವಿಲಿಯನ್ ಹಾಕಿದ್ದು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಹೂಡಿಕೆದಾರರ ಆಕರ್ಷಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

# ನಾಗನಾರ್ ಕಬ್ಬಿಣ-ಉಕ್ಕು ಕಾರ್ಖಾನೆಗೆ ವಾರ್ಷಿಕ 2.8 ದಶಲಕ್ಷ ಟನ್ ಉತ್ಪಾದನೆ ಗುರಿ ಕೊಟ್ಟ ಸಚಿವ ಎಚ್.ಡಿ.ಕುಮಾರಸ್ವಾಮಿ




**ನಾಗನಾರ್, ಸೆ.16:** ಇಲ್ಲಿನ ರಾಷ್ಟ್ರೀಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯಲ್ಲಿನ ಉಕ್ಕು ಉತ್ಪಾದನೆ ಪ್ರಮಾಣವನ್ನು ವಾರ್ಷಿಕ ಒಂದು ದಶಲಕ್ಷ ಟನ್'ನಿಂದ 2.8 ದಶಲಕ್ಷ ಟನ್'ಗೆ ಹೆಚ್ಚಿಸಬೇಕು ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಅಧಿಕಾರಿಗಳಿಗೆ ಟಾಸ್ಕ್ ನಿಗದಿಪಡಿಸಿದ್ದಾರೆ.

ಛತ್ತೀಸಗಢ ಬಸ್ತರ್ ಜಿಲ್ಲೆಯ ನಾಗನಾರ್ ನಲ್ಲಿರುವ ರಾಷ್ಟ್ರೀಯ ಖನಿಜ ನಿಗಮದ ಅಧೀನದ ರಾಷ್ಟ್ರೀಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗೆ ಸೋಮವಾರ ಭೇಟಿ ನೀಡಿದ ಸಚಿವರು; ಸಾವಿರಾರು ಎಕರೆ ಪ್ರದೇಶದಲ್ಲಿರುವ ಕಾರ್ಖಾನೆಯನ್ನು ವಿಸ್ತೃತವಾಗಿ ಪರಿಶೀಲನೆ ನಡೆಸಿದರು.

ಕಾರ್ಖಾನೆ ವೀಕ್ಷಣೆ ನಂತರ ಅಧಿಕಾರಿಗಳ ಸಭೆ ನಡೆಸಿದ ಸಚಿವರು; ಪ್ರಧಾನಿಗಳಾದ ನರೇಂದ್ರ ಮೋದಿ ಅವರು ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿ ನಿಗದಿಪಡಿಸಿದ್ದು, ಆ ನಿಟ್ಟಿನಲ್ಲಿ ರಾಷ್ಟ್ರೀಯ ಖನಿಜ ನಿಗಮ ನಿರ್ಣಾಯಕ ಪಾತ್ರ ವಹಿಸಬೇಕು. ಆ ನಿಟ್ಟಿನಲ್ಲಿ ತನ್ನ ವ್ಯಾಪ್ತಿಯಲ್ಲಿನ ಉಕ್ಕು ಉತ್ಪಾದನಾ ಘಟಕಗಳಲ್ಲಿನ ಉತ್ಪಾದನಾ ಪ್ರಮಾಣ ಹೆಚ್ಚಿಸಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಕ್ಷಮತೆ, ದಕ್ಷತೆ ವಿಷಯದಲ್ಲಿ ರಾಜಿ ಇರಲೇಬಾರದು. ನುರಿತ ಮಾನವ ಸಂಪನ್ಮೂಲ ಬಳಸಿಕೊಂಡು, ಸವಾಲುಗಳನ್ನು ಅತ್ಯಾಧುನಿಕ ತಾಂತ್ರಿಕ ನೆರವಿನೊಂದಿಗೆ ಮೆಟ್ಟಿ ನಿಂತು ಉತ್ಪಾದನೆ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕು. ದೇಶದ ನಿರ್ಮಾಣದ ವಿಷಯದಲ್ಲಿ ಉಕ್ಕು ಕ್ಷೇತ್ರದ ಪಾತ್ರ ನಿರ್ಣಾಯಕ. ಈ ವಿಷಯದಲ್ಲಿ ಯಾರೂ ಹಿಂದೆಜ್ಜೆ ಇಡಬಾರದು ಎಂದು ಅವರು ಹೇಳಿದರು. ಆತ್ಮನಿರ್ಭರ್ ಭಾರತ್, ಮೇಕ್ ಇನ್ ಇಂಡಿಯಾ ಪರಿಕಲ್ಪನೆಗಳ ಮೂಲಕ ಉಕ್ಕು ಕ್ಷೇತ್ರದಲ್ಲಿ ನಾವು ಸ್ವಾವಲಂಬನೆ ಸಾಧಿಸಿದರೆ ಪ್ರಧಾನಿಗಳ ವಿಕಸಿತ ಭಾರತ 2047ರ ಗುರಿಗೆ ಬಹುದೊಡ್ಡ ಕೊಡುಗೆ ನೀಡಬಹುದು. ದೇಶೀಯ ಉಕ್ಕು ಉತ್ಪಾದನೆಗೆ ಹೆಚ್ಚು ಒತ್ತು ಕೊಟ್ಟರೆ ನಾವು ಆ ಗುರಿಯನ್ನು ಸುಲಭವಾಗಿ ಮುಟ್ಟಬಹುದು ಎಂದರು ಸಚಿವರು.

ಉತ್ಪಾದನೆಯನ್ನು ಆರಂಭಿಸಿದ ಕೇವಲ ಒಂದೇ ವರ್ಷದಲ್ಲಿ ಒಂದು ದಶಲಕ್ಷ ಟನ್ ಉಕ್ಕು ಉತ್ಪಾದನೆ ಮಾಡಿದ ಕಾರ್ಖಾನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು, ದೇಶದ ಅತ್ಯುತ್ತಮ ಮೂಲಸೌಕರ್ಯ ಹೊಂದಿರುವ, ಅತ್ಯಾಧುನಿಕವಾದ ಈ ಕಾರ್ಖಾನೆಯಲ್ಲಿ ವಾರ್ಷಿಕ 2.8 ದಶಲಕ್ಷ ಟನ್ ಉಕ್ಕು ಉತ್ಪಾದನೆ ಮಾಡುವುದು ಕಷ್ಟಸಾಧ್ಯವಿಲ್ಲ ಎಂದು ಸಚಿವರು ಪ್ರತಿಪಾದಿಸಿದರು.

ವರ್ಷದಿಂದ ವರ್ಷಕ್ಕೆ ಕಾರ್ಖಾನೆಯ ಉತ್ಪಾದನೆ, ವಹಿವಾಟು ಏರುಗತಿಯಲ್ಲಿರಬೇಕು ಎಂದು ಒತ್ತಿ ಹೇಳಿದ ಸಚಿವರು; ಗ್ರೀನ್ ಸ್ಟೀಲ್ ಹಾಗೂ ಸ್ಪೆಶಾಲಿಟಿ ಸ್ಟೀಲ್ ಉತ್ಪಾದನೆಯ ಬಗ್ಗೆ ಅಧಿಕಾರಿಗಳಿಗೆ ಮಹತ್ವಪೂರ್ಣ ಸೂಚನೆಗಳನ್ನು ಕೊಟ್ಟರು. ಅಲ್ಲದೆ, ಹೊಸ ಆವಿಷ್ಕಾರ, ತಂತ್ರಜ್ಞಾನದ ಬಗ್ಗೆ ಮುಕ್ತ ಮನಸ್ಸು ಹೊಂದಬೇಕು. ಕ್ಷಮತೆ, ದಕ್ಷತೆ ಹೆಚ್ಚಿಸುವ ಅಗತ್ಯ ಕ್ರಮ ವಹಿಸಿ. ಕೇಂದ್ರ ಸರಕಾರದಿಂದ ಎಲ್ಲಾ ಸಹಕಾರ ಕೊಡಲಾಗುವುದು ಎಂದು ಸಚಿವರು ಭರವಸೆ ನೀಡಿದರು.

### ಕಾರ್ಖಾನೆಗೆ ಭೇಟಿ, ಪರಿಶೀಲನೆ

ಬೆಳಗ್ಗೆ ಬೆಂಗಳೂರಿನಿಂದ ಜಗದಲ್ ಪುರಕ್ಕೆ ಬಂದು ಅಲ್ಲಿಂದ ನಾಗನಾರ್ ನಲ್ಲಿರುವ ರಾಷ್ಟ್ರೀಯ ಉಕ್ಕು ಕಾರ್ಖಾನೆಗೆ ಆಗಮಿಸಿದ ಸಚಿವ ಕುಮಾರಸ್ವಾಮಿ ಅವರು, ಹಲವು ಗಂಟೆಗಳ ಕಾಲ ಕಾರ್ಖಾನೆಯನ್ನು ಪ್ರದಕ್ಷಿಣೆ ಹಾಕಿದರು. ದೇಶದಲ್ಲಿಯೇ ಎರಡನೇ ಅತಿ ದೊಡ್ಡದಾದ 'ಮಾ ದಂತೇಶ್ವರಿ' ಬ್ಲಾಸ್ಟ್ ಫರ್ನೇಸ್ (ಊದು ಕುಲುಮೆ), ಉಕ್ಕು ಘನೀಕೃತ ಘಟಕ ಸೇರಿ ಎಲ್ಲಾ ಘಟಕಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ತಾಂತ್ರಿಕ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು.

ಕಾರ್ಖಾನೆ ವೀಕ್ಷಣೆಯ ನಂತರ ಕಾರ್ಖಾನೆ ಚಟುವಟಿಕೆಗಳು, ಉಕ್ಕು ಉತ್ಪಾದನೆ, ವಿಲೇವಾರಿ, ಮಾರುಕಟ್ಟೆ ಇತ್ಯಾದಿ ಅಂಶಗಳ ಬಗ್ಗೆ ಪರಿಶೀಲನೆ ನಡೆಸಿದ ಸಚಿವ ಕುಮಾರಸ್ವಾಮಿ ಅವರು. ನೌಕರರ ಜತೆ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಸಚಿವರು ಕಾರ್ಖಾನೆಯ ಆವರಣದಲ್ಲಿರುವ ಶ್ರೀ ಬಾಮನ್ ದೇವಿ ಅಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು. ಬಳಿಕ ಆಡಳಿತ ಕಚೇರಿ ಆವರಣದಲ್ಲಿ ಗಿಡ ನೆಟ್ಟು ನೀರೆರೆದರು. ಎನ್‌ಎಂಡಿಸಿ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಅಮಿತವ್ ಮುಖರ್ಜಿ, ಮೆಕ್ರಾನ್ ಅಧ್ಯಕ್ಷ ವ್ಯವಸ್ಥಾಪಕ ನಿರ್ದೇಶಕ ಸಂಜಯ್ ಕುಮಾರ್, ಬಸ್ತರ್ ಕ್ಷೇತ್ರದ ಸಂಸದ ಮಹೇಶ್ ಕಶ್ಯಪ್ ಸೇರಿದಂತೆ ಕಾರ್ಖಾನೆಯ ಹಿರಿಯ ಅಧಿಕಾರಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು ಹಾಜರಿದ್ದರು.

# ಇಂದು ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ

## ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಪೂರಕ ಚರ್ಚೆ: ಮುಖ್ಯಮಂತ್ರಿ ಸಿದ್ದರಾಮಯ್ಯ




**ಕಲಬುರಗಿ, ಸೆ.16:** ಕಲ್ಯಾಣ ಕರ್ನಾಟಕದ ಭಾಗವಾದ ಕಲಬುರಗಿಯಲ್ಲಿ ನಾಳೆ ಸಚಿವ ಸಂಪುಟ ಸಭೆ ನಡೆಸಲಾಗುತ್ತಿದ್ದು, ಈ ಭಾಗದ ಅಭಿವೃದ್ಧಿಗಾಗಿ ಪೂರಕ ಚರ್ಚೆ ಹಾಗೂ ತೀರ್ಮಾನಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಕಲಬುರಗಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ರೂಪಿಸಲಾಗಿರುವ ಯೋಜನೆಗಳು ಹಾಗೂ ಇನ್ನಿತರ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲಾಗುವುದು. ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿನ ಜನರಿಗೆ ಉದ್ಯೋಗಾವಕಾಶಗಳ ಬಗ್ಗೆ ಹಾಗೂ ಪ್ರತ್ಯೇಕ ಸಚಿವಾಲಯ ರಚನೆ ಬಗ್ಗೆಯೂ ಚರ್ಚಿಸಲಾಗುವುದು. ಕಾಂಗ್ರೆಸ್ ಸರ್ಕಾರ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯ ಪರವಾಗಿದೆ ಎಂದರು.

**371 ಜೆ ಜಾರಿಗೆ ತಂದಿದ್ದು ಕಾಂಗ್ರೆಸ್ ಸರ್ಕಾರ:** ಮನಮೋಹನ್ ಸಿಂಗ್ ನೇತೃತ್ವದ ಕೇಂದ್ರ ಸರ್ಕಾರದ ಅವಧಿಯಲ್ಲಿ 371 ಜೆ ಕಾನೂನು ತರಲಾಗಿದ್ದು,, ಇದಕ್ಕಾಗಿ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಹಾಗೂ ಮಾಜಿಮುಖ್ಯಮಂತ್ರಿ ಧರಂಸಿಂಗ್ ಅವರು ಶ್ರಮವಹಿಸಿದ್ದರು. 2013 ರಲ್ಲಿ ಈ ಕಾನೂನನ್ನು ಕರ್ನಾಟಕದಲ್ಲಿ ಜಾರಿಗೆ ತರಲು ಕಾಂಗ್ರೆಸ್ ಸರ್ಕಾರ ಪ್ರಯತ್ನಿಸಿತೇ ಹೊರತರು ಬಿಜೆಪಿಯವರಲ್ಲ. ವಾಜಪೇಯಿಯವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಈ ಕಾನೂನನ್ನು ಜಾರಿಗೆ ತರಲು ತಿರಸ್ಕರಿಸಿದ್ದರು ಎಂದರು.

**ಕಲ್ಯಾಣ ಕರ್ನಾಟಕಕ್ಕೆ 5000 ಕೋಟಿ ಅನುದಾನ:** ಕಾಂಗ್ರೆಸ್ ಸರ್ಕಾರದ ಮೇಲೆ ಕಲ್ಯಾಣ ಕರ್ನಾಟಕ ಭಾಗದ ಜನರ ನಿರೀಕ್ಷೆಯಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಬಡವರ ಪರವಾದ ಸರ್ಕಾರ ನಮ್ಮದು. ಆದ್ದರಿಂದ ಈ ಭಾಗದ ಅಭಿವೃದ್ಧಿಗಾಗಿ 5000 ಕೋಟಿ ರೂ.ಗಳನ್ನು ನೀಡಲಾಗಿದೆ ಎಂದರು.

# ದೆಹಲಿ ಮುಂದಿನ ಸಿಎಂ ಯಾರು?

**ನವದೆಹಲಿ, ಸೆ.16:** ದೆಹಲಿ ಮುಖ್ಯಮಂತ್ರಿ ಸ್ಥಾನಕ್ಕೆ ಕೇಜ್ರಿವಾಲ್ ಅವರು ರಾಜೀನಾಮೆ ನೀಡುವುದಾಗಿ ಘೋಷಿಸಿದ ನಂತರ ಮುಂದಿನ ದೆಹಲಿ ಮುಖ್ಯಮಂತ್ರಿ ಯಾರು? ಎಎಪಿ ನಾಯಕ ಅರವಿಂದ್ ಕೇಜ್ರಿವಾಲ್ ಗೇಮ್ ಪ್ಲಾನ್ ಏನು ಎಂಬ ಬಗ್ಗೆ ಭಾರಿ ಚರ್ಚೆಗಳು ನಡೆಯುತ್ತಿವೆ. ಅದಾಗ್ಯೂ, ಅವರ ಉಪ ಮುಖ್ಯಮಂತ್ರಿಯಾಗಿದ್ದ ಮನೀಶ್ ಸಿಸೋಡಿಯಾ ಅವರ ಕಡೆಗೆ ಎಲ್ಲರ ಚಿತ್ತ ಹೊರಳಿದೆ.

ಪಕ್ಷದ ವರಿಷ್ಠರಾಗಿರುವ ಕೇಜ್ರಿವಾಲ್ ಅವರು ರಾಜೀನಾಮೆ ನೀಡುವುದಾಗಿ ಘೋಷಿಸಿದ ಒಂದು ದಿನದ ನಂತರ ಸೋಮವಾರ ಮನೀಶ್ ಸಿಸೋಡಿಯಾ ಅವರು ಅರವಿಂದ್ ಕೇಜ್ರಿವಾಲ್ ಅವರನ್ನು ಭೇಟಿಯಾಗುವ ನಿರೀಕ್ಷೆಯಿದೆ ಎಂದು ವರದಿಯಾಗಿದೆ. ಕೇಜ್ರಿವಾಲ್ ಅವರು ರಾಜೀನಾಮೆ ನೀಡುವ ವೇಳೆ, ಜನರು ತನಗೆ ಪ್ರಾಮಾಣಿಕತೆಯ ಪ್ರಮಾಣಪತ್ರ ನೀಡುವವರೆಗೂ ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತುಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ.

ದೆಹಲಿ ಅಸೆಂಬ್ಲಿಯ ಅವಧಿಯು ಫೆಬ್ರವರಿ 23, 2025 ರಂದು ಕೊನೆಗೊಳ್ಳಲಿದ್ದು, ಚುನಾವಣೆಯು ಫೆಬ್ರವರಿ ಆರಂಭದಲ್ಲಿ ನಡೆಯಲಿದೆ ಎಂದು ನಿರೀಕ್ಷಿಸಲಾಗಿದೆ. ರಾಜೀನಾಮೆಯನ್ನು ಘೋಷಿಸಿದ ನಂತರ ಹೊಸ ಮುಖ್ಯಮಂತ್ರಿಯನ್ನು ನೇಮಿಸಲಾಗುವುದು ಮತ್ತು ಇನ್ನೆರಡು ದಿನಗಳಲ್ಲಿ ಸಂಪುಟ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಕೇಜ್ರಿವಾಲ್ ಭಾನುವಾರ ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಸಿಸೋಡಿಯಾ–ಕೇಜ್ರಿವಾಲ್ ಭೇಟಿಯಾಗಲಿದ್ದು, ಈ ಸಭೆಯಲ್ಲಿ ಮುಂದಿನ ಮುಖ್ಯಮಂತ್ರಿ ಬಗ್ಗೆ ಚರ್ಚೆ ನಡೆಯುವ ಸಾಧ್ಯತೆ ಇದೆ ಎಂದು ವರದಿಯಾಗಿದೆ. ಕೇಜ್ರಿವಾಲ್ ಮತ್ತು ಸಿಸೋಡಿಯಾ ಇಂದು ಭೇಟಿಯಾಗಲಿದ್ದಾರೆ? ಎಂದು ಎಎಪಿಯ ನಾಯಕರ ಹೇಳಿಕೆಯನ್ನ ಉಲ್ಲೇಖಿಸಿ ಮಾಧ್ಯಮಗಳು ವರದಿ ಮಾಡಿವೆ. ರಾಜೀನಾಮೆ ಘೋಷಿಸುವ ವೇಳೆ ಎಎಪಿ ರಾಷ್ಟ್ರೀಯ ಸಂಚಾಲಕರೂ ಆಗಿರುವ ಕೇಜ್ರಿವಾಲ್ ಅವರು,?ನಾವು ಪ್ರಾಮಾಣಿಕರು ಎಂದು ಜನರು ಹೇಳಿದಾಗ ಮಾತ್ರ ನಾನು ಮುಖ್ಯಮಂತ್ರಿಯಾಗುತ್ತೇನೆ ಮತ್ತು ಮನೀಶ್ ಸಿಸೋಡಿಯಾ ಅವರ ಉಪ ಉಖ್ಯಮಂತ್ರಿಯಾಗಲಿದ್ದಾರೆ? ಎಂದು ಹೇಳಿದ್ದಾರೆ.

### ಕೇಜ್ರಿವಾಲ್ ರಾಜೀನಾಮೆಗೆ ಮುಹೂರ್ತ ನಿಗದಿ



ನವದೆಹಲಿ: ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆಗೆ ಮುಹೂರ್ತ ಫಿಕ್ಸ್ ಆಗಿದೆ. ನಾಳೆ ಸಂಜೆ 4:30ರ ವೇಳೆಗೆ ಅವರು ರಾಜೀನಾಮೆ ಸಲ್ಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅರವಿಂದ್ ಕೇಜ್ರಿವಾಲ್ ಅವರು ಲೆಫ್ಟಿನೆಂಟ್ ಗವರ್ನರ್ ವಿ.ಕೆ ಸಕ್ಸೇನಾ ಅವರನ್ನು ಭೇಟಿ ಮಾಡಲು ಸಮಯ ಕೋರಿದ್ದಾರೆ. ಮಂಗಳವಾರ ಸಂಜೆ 4:30 ಕ್ಕೆ ಕೇಜ್ರಿವಾಲ್ ಅವರೊಂದಿಗಿನ ಸಭೆಯನ್ನು ಸಕ್ಸೇನಾ ಖಚಿತಪಡಿಸಿದ್ದಾರೆ. ಇದೇ ಸಂದರ್ಭ ಕೇಜ್ರಿವಾಲ್ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸುವ ಸಾಧ್ಯತೆ ಇದೆ.

# ಪ್ಯಾಲೆಸ್ತೀನ್ ಧ್ವಜ ಪ್ರದರ್ಶನ: ನಾಲ್ವರು ಅಪ್ರಾಪ್ತ ವಯಸ್ಕರ ಬಂಧನ

**ಬೆಂಗಳೂರು ಸೆ.16:** ನಗರದ ಪ್ರಮುಖ ರಸ್ತೆಗಳಲ್ಲಿ ಪ್ಯಾಲೆಸ್ತೀನ್ ಧ್ವಜ ಹಿಡಿದು ಬೈಕ್‌ನಲ್ಲಿ ಸುತ್ತಾಡಿದ ನಾಲ್ವರು ಅಪ್ರಾಪ್ತ ಬಾಲಕರನ್ನು ನಗರ ಠಾಣಾ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪ್ಯಾಲೆಸ್ತೀನ್ ಧ್ವಜ ಹಿಡಿದ ರಸ್ತೆಗಳಲ್ಲಿ ಸುತ್ತಾಡಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಬೆನ್ನಲ್ಲೇ ಕಾರ್ಯಾಚರಣೆ ಕೈಗೊಂಡ ನಗರ ಠಾಣೆಯ ಪೊಲೀಸರು ನಾಲ್ವರು ಅಪ್ರಾಪ್ತ ಬಾಲಕರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಬಾಲಕರಿಗೆ ಪ್ಯಾಲೆಸ್ತೀನ್ ಧ್ವಜ ಸಿಕ್ಕಿರುವುದು, ಧ್ವಜ ನೀಡಿ ನಗರದಾದ್ಯಂತ ಓಡಾಟ ನಡೆಸಲು ಸೂಚನೆ ನೀಡಲಾಗಿತ್ತಾ ಇಂದು ಈದ್ ಮಿಲಾದ್ ಮೆರವಣಿಗೆಯಲ್ಲಿ ಪ್ಯಾಲೆಸ್ತೀನ್ ಧ್ವಜ ಪ್ರದರ್ಶನಕ್ಕೆ ಪ್ಲಾನ್ ಮಾಡಲಾಗಿತ್ತಾ ಎಂಬ ಅಂಶಗಳ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇನ್ಸ್ಪೆಕ್ಟರ್ ಗವಿರಾಜ್ ನೇತೃತ್ವದಲ್ಲಿ ತಂಡ ರಚನೆ ಮಾಡಲಾಗಿದೆ. ಪ್ಯಾಲೆಸ್ತೀನ್ ಧ್ವಜ ಪ್ರಕರಣವನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ಈ ಘಟನೆ ಸಂಬಂಧ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ 198ಅಡಿ ಪ್ರಕರಣ ದಾಖಲಾಗಿದೆ.

ಕೋಮು ಸೂಕ್ಷ್ಮ ಚಿಕ್ಕಮಗಳೂರು ನಗರದಲ್ಲಿ ಗಲಭೆಗೆ ಸಂಚು ಎಂದು ಹಿಂದೂ ಸಂಘಟನೆಗಳು ಆಕ್ರೋಶ ಹೊರ ಹಾಕಿವೆ. ಇಂದು 12 ಗಂಟೆಗೆ ಈದ್ ಮಿಲಾದ್ ಮೆರವಣಿಗೆ ಆರಂಭವಾಗಲಿದೆ. ಚಿಕ್ಕಮಗಳೂರು ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಲಿದೆ.

ಫ್ರೀ ಪ್ಯಾಲೆಸ್ತೀನ್: ಕೊಪ್ಪಳದಲ್ಲಿ ಈದ್ ಮಿಲಾದ್ ಬ್ಯಾನರ್‌ನಲ್ಲಿ ಫ್ರೀ ಪ್ಯಾಲೆಸ್ತೀನ್ ಬರಹ– ಕೊಪ್ಪಳ ಜಿಲ್ಲೆ ಗಂಗಾವತಿಯ ಕಿಲ್ಲಾ ಏರಿಯಾದಲ್ಲಿ ಈದ್ ಮಿಲಾದ್ ಹಬ್ಬ ಆಚರಣೆ ಹಿನ್ನೆಲೆ ಬ್ಯಾನರ್ ಅಳವಡಿಸಲಾಗಿತ್ತು. ಆ ಬ್ಯಾನರ್‌ನ ಒಂದು ಭಾಗದಲ್ಲಿ ಫ್ರೀ ಪ್ಯಾಲೆಸ್ತೀನ್ ಎಂದು ಬರೆಯಲಾಗಿತ್ತು. ಇದಕ್ಕೆ ಹಿಂದೂ ಸಂಘಟನೆಗಳು ವಿರೋಧ ವ್ಯಕ್ತಪಡಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದರು. ಇದರಿಂದ ಎಚ್ಚೆತ್ತ ಅಧಿಕಾರಿಗಳು ಮೊದಲಿಗೆ ಫ್ರೀ ಪ್ಯಾಲೆಸ್ತೀನ್ ಬರಹಕ್ಕೆ ಬಿಳಿ ಬಣ್ಣ ಬಳಿದು ಪ್ಯಾಚ್ ಹಾಕಿದ್ದರು. ಸದ್ಯ ಇದೀಗ ಬ್ಯಾನರ್ ಅನ್ನು ಬದಲಾಯಿಸಿ ಹೊಸ ಬ್ಯಾನರ್ ಅಳವಡಿಸಲಾಗಿದೆ. ಈದ್ ಮಿಲಾದ್ ಹಬ್ಬಕ್ಕೆ ಶುಭ ಕೋರುವ ಬ್ಯಾನರ್ ಹಾಕಲಾಗಿದೆ.

# ನಮೋ ಭಾರತ್ ರ್‍ಯಾಪಿಡ್ ರೈಲಿಗೆ ಹಸಿರು ನಿಶಾನೆ

**ಅಹ್ಮದಬಾದ್, ಸೆ.16:** ದೇಶದ ಮೊದಲ ವಂದೇ ಮೆಟ್ರೋ ರೈಲುಸೇವೆಗೆ ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ ತೋರಿದ್ದಾರೆ. ಪಶ್ಚಿಮ ರೈಲ್ವೆಯ ಅಹಮದಾಬಾದ್ ವಿಭಾಗವು ಈ ವಾರದ ಆರಂಭದಲ್ಲಿ ಯಶಸ್ವಿಯಾಗಿ ಪ್ರಾಯೋಗಿಕ ಚಾಲನೆ ನಡೆಸಿತ್ತು. ಈಗ ಪ್ರಧಾನಿ ಮೋದಿ ವಂದೇ ಮೆಟ್ರೋ ಸೇವೆಗೆ ಚಾಲನೆ ನೀಡಿದ್ದಾರೆ. ವಂದೇ ಮೆಟ್ರೋ ಸೇವೆಯು ಗುಜರಾತ್‌ನ ಭುಜ್ ನಿಂದ ಅಹಮದಾಬಾದ್‌ನೊಂದಿಗೆ ಸಂಪರ್ಕಿಸುತ್ತದೆ.

ಈ ಮೆಟ್ರೋ 360 ಕಿಮೀ ದೂರವನ್ನ 5 ಗಂಟೆ 45 ನಿಮಿಷಗಳಲ್ಲಿ ಕ್ರಮಿಸಲಿದ್ದು, ಗರಿಷ್ಠ 110 ಕಿಮೀ ವೇಗದಲ್ಲಿ ಚಲಿಸುತ್ತದೆ. ಅಂಜಾರ್, ಗಾಂಧಿಧಾಮ್, ಭಚೌ, ಸಮಖಿಯಾಲಿ, ಹಲ್ವಾಡ್, ವಿರಾಮ್‌ಗ ಮ್, ಚಂದ್ಲೋಡಿಯಾ, ಸಬರಮತಿ ಮತ್ತು ಕಲುಪುರ್ ನಿಲ್ದಾಣಗಳಲ್ಲಿ ನಿಲ್ಲಲಿದೆ. ವಾರದಲ್ಲಿ 6 ದಿನಗಳು ಕಾರ್ಯನಿರ್ವಹಿಸುತ್ತದ್ದು, ಶನಿವಾರ ಭುಜ್‌ನಿಂದ ಭಾನುವಾರ ಅಹಮದಾಬಾದ್‌ನಿಂದ ಸೇವೆ ಸ್ಥಗಿತಗೊಳಿಸಲಾಗುತ್ತದೆ.



1,150 ಆಸನಗಳನ್ನು ಹೊಂದಿರುವುದಲ್ಲದೇ ಈ ಮೆಟ್ರೋದಲ್ಲಿ 2,058 ನಿಂತು ಪ್ರಯಾಣಿಸಬಹುದಾಗಿದೆ. ಕುಳಿತುಕೊಳ್ಳಲು ಮೃದು ಸೋಫಾಗಳನ್ನು ಅಳವಡಿಸಲಾಗಿದ್ದು ಮೆಟ್ರೋ ಸಂಪೂರ್ಣ ಹವಾನಿಯಂತ್ರಿತವಾಗಿದೆ. ಎರಡೂ ತುದಿಗಳಲ್ಲಿ ಎಂಜಿನ್ ಮತ್ತು ಎರಡೂ ಬದಿಗಳಲ್ಲಿ ಸ್ವಯಂಚಾಲಿತ ಸ್ಲೈಡಿಂಗ್ ಬಾಗಿಲುಗಳನ್ನು ಒಳಗೊಂಡಿದೆ.

### ಕಡೇ ಕ್ಷಣದಲ್ಲಿ ರೈಲು ಹೆಸರು ಬದಲು

ವಂದೇ ಮೆಟ್ರೋ ರೈಲಿನ ಹೆಸರನ್ನು, ಉದ್ಘಾಟನೆಯ ಕೆಲವೇ ಗಂಟೆಗಳ ಮೊದಲು ರೈಲ್ವೇ ಸಚಿವಾಲಯವು ನಮೋ ಭಾರತ್ ರ್‍ಯಾಪಿಡ್ ರೈಲ್ ಎಂದು ಮರುನಾಮಕರಣ ಮಾಡಿದೆ ಎಂದು ವಕ್ತಾರರು ತಿಳಿಸಿದ್ದಾರೆ. ಮೋದಿ ಹಸಿರು ನಿಶಾನೆ ತೋರುವ ಕೆಲವೇ ಗಂಟೆಗಳ ಮುನ್ನ ಹಸರು ಬದಲಿಸಿದ್ದು ಸಾಕಷ್ಟು ಚರ್ಚೆಗೆ ಕಾರಣವಾಗಿದೆ.

ಕನಿಷ್ಠ ಟಿಕೆಟ್ ದರ 30 ರೂ. ನಿಂದ ಪ್ರಾರಂಭವಾಗುತ್ತದೆ, ಜಿಎಸ್‌ಟಿ ಸೇರಿದಂತೆ, ನಿಖರವಾದ ದರಗಳನ್ನು ಇನ್ನೂ ದೃಢೀಕರಿಸಲಾಗಿಲ್ಲ. ಭುಜ್‌ನಿಂದ ಅಹಮದಾಬಾದ್‌ಗೆ ಏಕಮುಖ ಪ್ರಯಾಣಕ್ಕೆ ಜಿಎಸ್‌ಟಿ ಹೊರತುಪಡಿಸಿ 430 ರೂ. ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ.

# ಬಿಲಾಯ್ ಕನ್ನಡಿಗರ ಮಾತೃಭಾಷಾ ಪ್ರೀತಿಗೆ ಮಾರುಹೋದ ಎಚ್‌ಡಿಕೆ



**ಛತ್ತಿಸಗಢ, ಸೆ.16:** ಇಲ್ಲಿನ ಬಿಲಾಯ್ ಉಕ್ಕು ಕಾರ್ಖಾನೆ ಭೇಟಿಗೆ ಆಗಮಿಸಿದ ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿಯಾದ ಬಿಲಾಯ್ ಕನ್ನಡ ಸಂಘದ ಸದಸ್ಯರು, ಸಚಿವರನ್ನು ಅತ್ಯಂತ ಆತ್ಮೀಯವಾಗಿ ಅಭಿನಂದಿಸಿದರು.

ನಾಗನಾರ್ ಉಕ್ಕು ಸ್ಥಾವರಕ್ಕೆ ಭೇಟಿ ನೀಡಿದ ನಂತರ ಸೋಮವಾರ ಸಂಜೆ ಬಿಲಾಯ್ ಗೆ ಆಗಮಿಸಿದ ಸಚಿವರನ್ನು ಕಾರ್ಖಾನೆಯ ಅತಿಥಿಗೃಹದಲ್ಲಿ ಭೇಟಿಯಾದ ಕನ್ನಡ ಸಂಘದ ಸದಸ್ಯರು, ಕೇಂದ್ರದಲ್ಲಿ ಉಕ್ಕು ಖಾತೆ ಸಚಿವರಾಗಿರುವ ಕನ್ನಡಿಗರೊಬ್ಬರು ಬಿಲಾಯ್‌ಗೆ ಭೇಟಿ ನೀಡಿದ್ದು ನಮಗೆ ಅತೀವ ಸಂತಸ ಉಂಟುಮಾಡಿದೆ ಎಂದು ಹೇಳಿದರು.

ನಿಮ್ಮ ತಂದೆಯವರು ಪ್ರಧಾನಿ ಆಗಿದ್ದರು. ನೀವು ಉಕ್ಕು ಸಚಿವರಾಗಿ ಬಿಲಾಯ್ ಕಾರ್ಖಾನೆಗೆ ಬಂದಿರುವುದು ನಮಗೆ ಹೆಮ್ಮೆ ತಂದಿದೆ. ನಮ್ಮ ಹಿರಿಯರು ಈ ಕಾರ್ಖಾನೆಗೆ ಉದ್ಯೋಗ ಅರಸಿ ಬಂದಿದ್ದರು. ಈಗ ಮೂರನೇ ತಲೆಮಾರಿನ ಕನ್ನಡಿಗರು ಕೂಡ ಬಿಲಾಯ್ ನಲ್ಲಿಯೇ ನೆಲೆಸಿದ್ದಾರೆ ಎಂದು ಸಚಿವರಿಗೆ ತಿಳಿಸಿದರು. ಅಲ್ಲದೆ; ಕನ್ನಡಿಗರನ್ನು ಕಂಡ ಕೂಡಲೇ ಸಚಿವರು ಕೂಡ ಸಂತಸ ವ್ಯಕ್ತಪಡಿಸಿದರು.

ದೇವೇಗೌಡರು ಪ್ರಧಾನಿ ಆಗಿದ್ದು, ನೀವು ಉಕ್ಕು ಸಚಿವರಾಗಿ ಇಲ್ಲಿಗೆ ಬಂದಿದ್ದು ನಮಗೆ ಬಹಳ ಸಂತೋಷ ಉಂಟು ಮಾಡಿದೆ. ನಾವು ಕರ್ನಾಟಕದಿಂದ ಬಹಳ ದೂರ ಇದ್ದರೂ ಕನ್ನಡ, ಕನ್ನಡತನದಿಂದ ವಿಮುಖರಾಗಿಲ್ಲ. ಮನೆಯಲ್ಲಿ ಕನ್ನಡವನ್ನೇ ಮಾತನಾಡುತ್ತೇವೆ. ನಮ್ಮ ಮಕ್ಕಳು ಈಗ ಇಲ್ಲಿ ಮೂರನೇ ತಲೆಮಾರು. ಅವರಿಗೂ ಕನ್ನಡ ಕಲಿಸಿದ್ದೇವೆ. ಮೊದಲ ತಲೆಮಾರಿನ ನಂತರ ಎರಡನೇ ತಲೆಮಾರು, ಮೂರನೇ ತಲೆಮಾರು ಕೂಡ ಬಿಲಾಯ್ ನಲ್ಲಿಯೇ ನೆಲೆಸಿದೆ ಎಂದು ಕನ್ನಡ ಸಂಘದ ಸದಸ್ಯರು ಸಚಿವರಿಗೆ ಹೇಳಿದರು.

**ಕನ್ನಡ ಸಂಘಕ್ಕೆ ಆಹ್ವಾನ:**

ಕನ್ನಡ ಸಂಘಕ್ಕೆ ಆಗಮಿಸಬೇಕು ಎಂದು ಇದೇ ವೇಳೆ ಕನ್ನಡ ಸದಸ್ಯರು ಸಚಿವರನ್ನು ಆಹ್ವಾನಿಸಿದರು. ಅನೇಕ ವರ್ಷಗಳಿಂದ ಸಂಘವು ಕ್ರಿಯಾಶೀಲವಾಗಿದೆ. ನಿರಂತರವಾಗಿ ಕನ್ನಡ ಸೇವೆ ಮಾಡಿಕೊಂಡು ಬರುತ್ತಿದೆ ಎಂದು ಸದಸ್ಯರು ಸಚಿವರಿಗೆ ವಿವರಿಸಿದರು. ಬಿಡುವು ಮಾಡಿಕೊಂಡು ಸಂಘಕ್ಕೆ ಭೇಟಿ ಕೊಡುವುದಾಗಿ ಸಚಿವರು ಭರವಸೆ ನೀಡಿದರು.

ಸಂಘದ ಸದಸ್ಯರಾದ ಶಶಿಭೂಷಣ್, ವೆಂಕಟೇಶ್ ಕಾರಂತ್, ಶ್ರೀಧರ್, ನಾಗೇಂದ್ರ ಧನ, ಅನುರಾಧ ಧನ, ವೆಂಕಟೇಶ್ ಬಾಬು, ನಂದಕುಮಾರ್, ಸುಚಿತ್ರಾ, ರೀಟಾ, ಚಂದ್ರಲತಾ ಅವರು ಸಚಿವರನ್ನು ಭೇಟಿಯಾದ ನಿಯೋಗದಲ್ಲಿ ಇದ್ದರು.

# ಆರ್.ಜಿ.ಕರ್ ಬಿಕ್ಕಟ್ಟು ಪರಿಹರಿಸಲು ಕಿರಿಯ ವೈದ್ಯರಿಗೆ ಮಮತಾ ಬ್ಯಾನರ್ಜಿ ಅಂತಿಮ ಆಹ್ವಾನ



**ಕೋಲ್ಕತ್ತಾ, ಸೆ.16:** ಪ್ರತಿಭಟನಾನಿರತ ವೈದ್ಯರೊಂದಿಗೆ ಎರಡು ಬಾರಿ ನಡೆದ ಮಾತುಕತೆ ವಿಫಲಗೊಂಡ ನಂತರವೂ, ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ವೈದ್ಯೆಯ ಅತ್ಯಾಚಾರ ಮತ್ತು ಹತ್ಯೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಪಶ್ಚಿಮ ಬಂಗಾಳ ಸರ್ಕಾರವು ಮತ್ತೊಮ್ಮೆ ವೈದ್ಯರನ್ನು ಸಂಪರ್ಕಿಸಿದೆ. ಮುಖ್ಯ ಕಾರ್ಯದರ್ಶಿ ಮನೋಜ್ ಪಂಥ್ ಅವರು ಕಿರಿಯ ವೈದ್ಯರಿಗೆ ಇಮೇಲ್ ಕಳುಹಿಸಿದ್ದು, ಸಭೆಗೆ ಇದು ಸರ್ಕಾರದ ಕಡೆಯಿಂದ ಅಂತಿಮ ಪ್ರಯತ್ನವಾಗಿದೆ ಎಂದು ತಿಳಿಸಿದ್ದಾರೆ. ಕಾಳಿಘಾಟ್‌ನಲ್ಲಿರುವ ಮುಖ್ಯಮಂತ್ರಿ ನಿವಾಸದಲ್ಲಿ ಸಂಜೆ 5 ಗಂಟೆಗೆ ಸಭೆ ನಿಗದಿಯಾಗಿದೆ.

ಆದರೆ ಸಭೆಯನ್ನು ವೀಡಿಯೊಗ್ರಾಫ್ ಮಾಡಲು ಅಥವಾ ಲೈವ್-ಸ್ಟ್ರೀಮ್ ಮಾಡಲು ಸಾಧ್ಯವಿಲ್ಲ ಎಂದು ಮುಖ್ಯ ಕಾರ್ಯದರ್ಶಿ ಪತ್ರದಲ್ಲಿ ಸೂಚಿಸಿದ್ದಾರೆ. ಇದೇ ಕಾರಣಕ್ಕೆ ಹಿಂದಿನ ಸಭೆಗಳು ರದ್ದಾಗಿದ್ದವು.

ಇದು ಐದನೇ ಮತ್ತು ಕೊನೆಯ ಬಾರಿಗೆ ಮುಖ್ಯಮಂತ್ರಿಗಳು ಮತ್ತು ನಿಮ್ಮ ಪ್ರತಿನಿಧಿಗಳ ನಡುವಿನ ಸಭೆಗಾಗಿ ನಾವು ನಿಮ್ಮನ್ನು ಸಂಪರ್ಕಿಸುತ್ತಿದ್ದೇವೆ. ಹಿಂದಿನ ದಿನದ ನಮ್ಮ ಚರ್ಚೆಗೆ ಅನುಗುಣವಾಗಿ, ನಾವು ಮತ್ತೊಮ್ಮೆ ಮಾನ್ಯ ಮುಖ್ಯಮಂತ್ರಿಗಳೊಂದಿಗಿನ ಸಭೆಗೆ ನಿಮ್ಮನ್ನು ಆಹ್ವಾನಿಸುತ್ತಿದ್ದೇವೆ. ಅವರು ಕಾಳಿಘಾಟ್ ನಿವಾಸದಲ್ಲಿ ಮುಕ್ತ ಮನಸ್ಸಿನಿಂದ ಚರ್ಚೆ ನಡೆಸಲಿದ್ದಾರೆ ಎಂದು ಪತ್ರದಲ್ಲಿ ಆಹ್ವಾನಿಸಲಾಗಿದೆ.

ಏತನ್ಮಧ್ಯೆ, ಪಶ್ಚಿಮ ಬಂಗಾಳದ ಕಿರಿಯ ವೈದ್ಯರು ಸೋಮವಾರ ಕೂಡಾ ತಮ್ಮ ಮುಷ್ಕರವನ್ನು ಮುಂದುವರೆಸಿದ್ದಾರೆ. ವೈದ್ಯರ ಪ್ರತಿಭಟನೆಯು ಎಂಟನೇ ದಿನಕ್ಕೆ ಕಾಲಿಟ್ಟಿದ್ದು, ತಮ್ಮ ಕೆಲಸ ತೊರೆದು ನಡೆಸುತ್ತಿರುವ 36 ನೇ ದಿನದ ಮುಷ್ಕರವನ್ನು ಆರೋಗ್ಯ ಇಲಾಖೆಯ ಪ್ರಧಾನ ಕಛೇರಿಯಾದ ಸ್ವಾಸ್ಥ್ಯ ಭವನದ ಹೊರಗೆ ತಮ್ಮ ಧರಣಿ ನಡೆಸುವ ಮೂಲಕ ಮುಂದುವರೆಸಿದ್ದಾರೆ. ಅವರು ತಮ್ಮ ಬೇಡಿಕೆಗಳಾದ ಕೋಲ್ಕತ್ತಾ ಪೊಲೀಸ್ ಕಮಿಷನರ್ ಮತ್ತು ಹಿರಿಯ ರಾಜ್ಯ ಆರೋಗ್ಯ ಅಧಿಕಾರಿಗಳನ್ನು ವಜಾಗೊಳಿಸುವವರೆಗೂ ಮುಂದುವರಿಯುವುದಾಗಿ ಪ್ರತಿಜ್ಞೆ ಮಾಡಿದ್ದಾರೆ.

ನಮ್ಮ ಬೇಡಿಕೆಗಳು ಈಡೇರುವವರೆಗೂ ಮುಷ್ಕರ ಮುಂದುವರಿಸುತ್ತೇವೆ. ರಾಜ್ಯ ಸರಕಾರ ಬಿಕ್ಕಟ್ಟನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ಧರಣಿ ನಿರತ ಕಿರಿಯ ವೈದ್ಯರೊಬ್ಬರು ತಿಳಿಸಿದ್ದಾರೆ. ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಶನಿವಾರ ಪ್ರತಿಭಟನಾ ಸ್ಥಳಕ್ಕೆ ದಿಢೀರ್ ಭೇಟಿ ನೀಡಿ ವೈದ್ಯರಿಗೆ ಅವರ ಸಮಸ್ಯೆಗಳನ್ನು ಪರಿಹರಿಸುವುದಾಗಿ ಭರವಸೆ ನೀಡಿದ್ದಾರೆ.

ಆಗಸ್ಟ್ 9 ರಂದು ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸೆಮಿನಾರ್ ಹಾಲ್ನಿಂದ ಸ್ನಾತಕೋತ್ತರ ಮಹಿಳಾ ವೈದ್ಯರ ಶವ ಪತ್ತೆಯಾಗಿತ್ತು. ಅವರನ್ನು ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ ಎಂದು ವರದಿಯಾಗಿದೆ. ಕಲ್ಕತ್ತಾ ಹೈಕೋರ್ಟ್ ಆದೇಶದ ಮೇರೆಗೆ ಕೇಂದ್ರೀಯ ತನಿಖಾ ದಳ (ಸಿಬಿಐ) ಮಹಿಳಾ ವೈದ್ಯೆಯ ಅತ್ಯಾಚಾರ ಮತ್ತು ಹತ್ಯೆಯ ತನಿಖೆ ನಡೆಸುತ್ತಿದೆ.

## ಒಂದು ರಾಷ್ಟ್ರ, ಒಂದು ಚುನಾವಣೆ ಸಾಧ್ಯವಿಲ್ಲ: ಚಿದಂಬರಂ

**ನವದೆಹಲಿ, ಸೆ. 16:** ಒಂದು ರಾಷ್ಟ್ರ, ಒಂದು ಚುನಾವಣೆ ವಿಷಯದ ಕುರಿತು ಕೇಂದ್ರದ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ಕಾಂಗ್ರೆಸ್ ನಾಯಕ ಪಿ ಚಿದಂಬರಂ ವಾಗ್ದಾಳಿ ನಡೆಸಿದ್ದು, ಪ್ರಸ್ತುತ ಸಂವಿಧಾನದ ಅಡಿಯಲ್ಲಿ ಇದು ಸಾಧ್ಯವಿಲ್ಲ, ಕನಿಷ್ಠ ಐದು ಸಾಂವಿಧಾನಿಕ ತಿದ್ದುಪಡಿಗಳ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ತನ್ನ ಪ್ರಸ್ತುತ ಅಧಿಕಾರಾವಧಿಯಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆಯನ್ನು ಜಾರಿಗೆ ತರಲಿದೆ ಎಂಬ ವರದಿಗಳ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಆ ಸಾಂವಿಧಾನಿಕ ತಿದ್ದುಪಡಿಗಳನ್ನು ಲೋಕಸಭೆ ಅಥವಾ ರಾಜ್ಯಗಳಲ್ಲಿ ಮಂಡಿಸಲು ಪ್ರಧಾನಿ ನರೇಂದ್ರ ಮೋದಿ ಅವರ ಬಳಿ ಸಂಖ್ಯೆ (ಬಹುಮತ) ಇಲ್ಲ ಎಂದು ಹೇಳಿದರು.

ಕಳೆದ ತಿಂಗಳು ತಮ್ಮ ಸ್ವಾತಂತ್ರ್ಯ ದಿನದ ಭಾಷಣದಲ್ಲಿ ಮಾತನಾಡಿದ್ದ ಪ್ರಧಾನಿಯವರು, ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತು ಮಾತನಾಡಿದ್ದರು. ಆಗಾಗ್ಗೆ ಚುನಾವಣೆಗಳು ದೇಶದ ಪ್ರಗತಿಯಲ್ಲಿ ಅಡಚಣೆಗಳನ್ನು ಸೃಷ್ಟಿಸುತ್ತಿವೆ ಎಂದು ಅವರು ಪ್ರತಿಪಾದಿಸಿದ್ದರು. ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಚಿದಂಬರಂ, ಒಂದು ರಾಷ್ಟ್ರ, ಒಂದು ಚುನಾವಣೆ ಪ್ರಸ್ತುತ ಸಂವಿಧಾನದ ಅಡಿಯಲ್ಲಿ ಸಾಧ್ಯವಿಲ್ಲ. ಇದಕ್ಕೆ ಕನಿಷ್ಠ ಐದು ಸಾಂವಿಧಾನಿಕ ತಿದ್ದುಪಡಿಗಳ ಅಗತ್ಯವಿದೆ. ಲೋಕಸಭೆ ಅಥವಾ ರಾಜ್ಯಸಭೆಯಲ್ಲಿ ಸಾಂವಿಧಾನಿಕ ತಿದ್ದುಪಡಿಗಳನ್ನು ಹಾಕಲು ಮೋದಿಗೆ ಬಹುಮತವಿಲ್ಲ ಎಂದು ಮಾಜಿ ಕೇಂದ್ರ ಸಚಿವರು ಹೇಳಿದರು.

ಒಂದು ರಾಷ್ಟ್ರ, ಒಂದು ಚುನಾವಣೆಗೆ ಹೆಚ್ಚಿನ ಸಾಂವಿಧಾನಿಕ ಅಡೆತಡೆಗಳಿವೆ ಎಂದು ಅವರು ಪ್ರತಿಪಾದಿಸಿದರು. ಅದು ಸಾಧ್ಯವಿಲ್ಲ; ಇಂಡಿಯಾ ಬಣವು ಒಂದು ರಾಷ್ಟ್ರ, ಒಂದು ಚುನಾವಣೆಯನ್ನು ಸಂಪೂರ್ಣವಾಗಿ ವಿರೋಧಿಸುತ್ತದೆ. ಶೇ.50 ರಷ್ಟು ಮೀಸಲಾತಿ ಮಿತಿಯನ್ನು ತೆಗೆದುಹಾಕಬೇಕು ಎಂದರು.

## ವೈದ್ಯೆ ಅತ್ಯಾಚಾರ ಕೇಸ್: ಆತ್ಮಹತ್ಯೆ ಎಂದು ಬಿಂಬಿಸಲು ಯತ್ನ

**ಕೋಲ್ಕತ್ತಾ, ಸೆ.16:** ಆರ್.ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಟ್ರೈನಿ ವೈದ್ಯೆ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಆತ್ಮಹತ್ಯೆ ಅಂತ ಬಿಂಬಿಸಲು ಪ್ರಯತ್ನಿಸಿದ್ದರು. ಅದಕ್ಕಾಗಿ ಸಾಕ್ಷಿ ನಾಶಕ್ಕೆ ಯತ್ನಿಸಿದ್ದಾರೆ ಎಂಬುದಾಗಿ ಸಿಬಿಐ ಕೋರ್ಟ್‌ಗೆ ಸಲ್ಲಿಸಿದ ತನ್ನ ರಿಮ್ಯಾಂಡ್ ಕಾಪಿಯಲ್ಲಿ ತಿಳಿಸಿದೆ.

ಆರ್.ಜಿ ಕರ್ ಆಸ್ಪತ್ರೆಯಲ್ಲಿ ನಡೆದ ಹಣಕಾಸು ಅವ್ಯವಹಾರ ಮತ್ತು ಅತ್ಯಚಾರ ಪ್ರಕರಣದಲ್ಲಿ ಸಾಕ್ಷ್ಯಾಧಾರ ನಾಶ ಆರೋಪದ ಮೇಲೆ ಸಂದೀಪ್ ಘೋಷ್‌ನನ್ನು ಸಿಬಿಐ ಬಂಧಿಸಿದೆ. ಈ ಕೇಸ್ನಲ್ಲಿ ಎಫ್‌ಐಆರ್ ದಾಖಲಿಸಲು ವಿಳಂಬ ಮಾಡಿದ್ದಕ್ಕಾಗಿ ತಲಾ ಠಾಣೆಯ ಪೊಲೀಸ್ ಅಧಿಕಾರಿ ಅಭಿಜಿತ್ ಮೊಂಡಲ್ ಅವರನ್ನೂ ಸಹ ಬಂಧಿಸಲಾಗಿದೆ.

ಈ ಪ್ರಕರಣದ ಕುರಿತು ಸಿಬಿಐ ಕೋರ್ಟ್‌ಗೆ ಸಲ್ಲಿಸಿದ ರಿಮ್ಯಾಂಡ್ ಕಾಪಿಯಲ್ಲಿ ಹಲವು ವಿಚಾರಗಳು ಬೆಳಕಿಗೆ ಬಂದಿವೆ. ಡಾ. ಸಂದೀಪ್ ಘೋಷ್ ಆಗಸ್ಟ್ 9ರಂದು ಬೆಳಗ್ಗೆ 9:58ರ ವೇಳೆಗೆ ನಡೆದ ಘಟನೆ ಬಗ್ಗೆ ಮಾಹಿತಿ ಪಡೆದುಕೊಂಡರೂ ತಕ್ಷಣ ಆಸ್ಪತ್ರೆ ತಲುಪಲಿಲ್ಲ. ಪೊಲೀಸರಿಗೆ ದೂರು ಸಹ ದಾಖಲಿಸಲಿಲ್ಲ. ಸಂತ್ರಸ್ತೆಯ ದೇಹದ ಮೇಲೆ ಗಾಯದ ಗುರುತುಗಳಿದ್ದರೂ ಅದನ್ನು ಆತ್ಮಹತ್ಯೆ ಅಂತ ಬಿಂಬಿಸಲು ಹೊರಟಿದ್ದರು. ಆಸ್ಪತ್ರೆಯಿಂದ ಸಂತ್ರಸ್ತೆ ಪೋಷಕರಿಗೆ ದೂರವಾಣಿ ಕರೆ ಮಾಡಿ ಆತ್ಮಹತ್ಯೆ ಅಂತ ತಿಳಿಸಿದ್ದರು ಎಂದು ಸಿಬಿಐ ತನ್ನ ರಿಮ್ಯಾಂಡ್ ಕಾಪಿಯಲ್ಲಿ ಉಲ್ಲೇಖಿಸಿದೆ.

ಮುಂದುವರಿದು, ಟ್ರೈನಿ ವೈದ್ಯೆಯ ಅತ್ಯಾಚಾರ ಮತ್ತು ಕೊಲೆಯಾದ ನಂತರ ಘೋಷ್ ಪೊಲೀಸ್ ಅಧಿಕಾರಿ ಮತ್ತು ವಕೀಲರೊಂದಿಗೆ ಸಂಪರ್ಕದಲ್ಲಿದ್ದರು. ಸಂತ್ರಸ್ತೆ ಪೋಷಕರು ಆಸ್ಪತ್ರೆಗೆ ಬಂದಾಗಲೂ ಅವರನ್ನು ಭೇಟಿಯಾಗಲಿಲ್ಲ. ಘಟನೆ ನಂತರ ಮುಂದಿನ ವೈದ್ಯಕೀಯ ಪ್ರಕ್ರಿಯೆಗಳ ಬಗ್ಗೆ ಗಮನ ಹರಿಸಲಿಲ್ಲ. ಮೃತದೇಹವನ್ನು ತಕ್ಷಣವೇ ಶವಾಗಾರಕ್ಕೆ ಕಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದರು ಎಂದು ಸಿಬಿಐ ಕೋರ್ಟ್‌ಗೆ ತಿಳಿಸಿದೆ.

ಇನ್ನೂ ಪೊಲೀಸ್ ಅಧಿಕಾರಿ ಮೊಂಡಲ್ ಸಹ ಮಾಹಿತಿ ಪಡೆದ ಒಂದು ಗಂಟೆ ನಂತರ ಘಟನಾ ಸ್ಥಳಕ್ಕೆ ತಲುಪಿದರು. ಘೋರ ಸ್ವರೂಪದಲ್ಲಿ ಕೊಲೆಯಾಗಿರುವುದು ಕಂಡುಬಂದರೂ ಸೂಕ್ತ ಸಮಯಕ್ಕೆ ಎಫ್‌ಐಆರ್ ದಾಖಲಿಸಲಿಲ್ಲ. ತಡರಾತ್ರಿ ಎಫ್‌ಐಆರ್ ದಾಖಲಿಸಲಾಗಿದೆ, ಸುಪ್ರೀಂ ಕೋರ್ಟ್ ಮತ್ತು ಕೋಲ್ಕತ್ತಾ ಹೈಕೋರ್ಟ್ ಪದೇ ಪದೇ ಹೇಳಿದರೂ ಪ್ರಕರಣದ ಕುರಿತು ತಲೆ ಕೆಡಿಸಿಕೊಂಡಿಲ್ಲ. ಕುಟುಂಬದ ಸದಸ್ಯರು ಮತ್ತೆ ಶವಪರೀಕ್ಷೆಗೆ ಒತ್ತಾಯಿಸಿದರೂ ಶವದ ಅಂತ್ಯಸಂಸ್ಕಾರಕ್ಕೆ ತರಾತುರಿಯಲ್ಲಿ ಅನುಮತಿ ನೀಡಿದ್ದಾರೆ ಎಂದು ಘಟನಾ ವಿವರವನ್ನು ಸಿಬಿಐ ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಸದ್ಯ ಕೋಲ್ಕತ್ತಾ ಹೈಕೋರ್ಟ್ ಡಾ.ಘೋಷ್ ಮತ್ತು ಪೊಲೀಸ್ ಅಧಿಕಾರಿ ಮೊಂಡಲ್ ಇಬ್ಬರನ್ನು ಎರಡು ದಿನಗಳ ಸಿಬಿಐ ಕಸ್ಟಡಿಗೆ ನೀಡಿದೆ. ಪ್ರಕರಣದ ವಿಚಾರಣೆ ನಡೆಯುತ್ತಿದೆ.

### ಮುಂಬಯಿ; ಪೇಜಾವರ ಮಠದ ಮಧ್ವ ಭವನಕ್ಕೆ ಚಿತ್ತೈಸಿದ ಉತ್ತರಾದಿ ಮಠಾಧೀಶರು

# ವಿಶ್ವಕಲ್ಯಾಣವೇ ಭಗವಂತನ ಪೂಜೆಯ ಉದ್ದೇಶ: ಶ್ರೀ ಸತ್ಯಾತ್ಮತೀರ್ಥ ಸ್ವಾಮೀಜಿ

**ಮುಂಬಯಿ, ಸೆ.16:** ಶ್ರೀಸತ್ಯಾತ್ಮತೀರ್ಥ ಶ್ರೀಪಾದರು ಭಕ್ತಾದಿಗಳನ್ನು ಆಶೀರ್ವದಿಸಿ ನಮ್ಮ ಪೂಜೆ ಭಗವಂತ ಮತ್ತು ವಿಶ್ವ ಕಲ್ಯಾಣಕ್ಕಾಗಿಯೇ ನಡೆಯಬೇಕು. ವಿಶ್ವ ಕಲ್ಯಾಣವೇ ಭಗವಂತನ ಪೂಜೆಯ ಉದ್ದೇಶ. ನಾವೆಲ್ಲರೂ ಎಲ್ಲಾ ಸತ್ಕರ್ಮಗಳನ್ನು ತಿಳಿದು ಆಚರಿಸಬೇಕು. ತಂದೆ ತಾಯಿಯರು ನಮಗೆ ಜನ್ಮ ನೀಡಿದ್ದಾರೆ, ಅದಕ್ಕೆ ಕಾರಣವಾದವನು ಭಗವಂತನು. ಈ ಸಾಧನಾ ಶರೀರಕ್ಕೆ ಮುಖ್ಯ ಕಾರಣನೇ ಭಗವಂತ ಎಂದು ಅರಿತು ನಾವು ಪುಣ್ಯಾಧಿ ಕೆಲಸಗಳನ್ನು ಮಾಡಬೇಕು ಎಂದು ಉಡುಪಿ ಶ್ರೀ 108 ಶ್ರೀ ಉತ್ತರಾದಿ ಮಠಾಧೀಶರಾದ ಸತ್ಯಾತ್ಮತೀರ್ಥ ಶ್ರೀಪಾದರು ತಿಳಿಸಿದರು.



ಸೋಮವಾರ ಮುಂಬಯಿ ಸಾಂತಕ್ರೂಜ್ ಪೂರ್ವದ ಪ್ರಭಾತ್ ಕಾಲೋನಿ ಇಲ್ಲಿನ ಶ್ರೀ ಪೇಜಾವರ ಮಠ ಮುಂಬಯಿ ಇಲ್ಲಿಗೆ ಆಗಮಿಸಿ ಶ್ರೀ ಪೇಜಾವರ ಮಠದಲ್ಲಿನ ಶಿಲಾಮಯ ಮಂದಿರದಲ್ಲಿನ ಶ್ರೀಕೃಷ್ಣ ದೇವರಿಗೆ ಪೂಜಿಸಿ ಬಳಿಕ ಪೇಜಾವರ ಮಠದ (ಮಧ್ವ ಭವನ) ಶ್ರೀ ವಿಶ್ವೇಶ ತೀರ್ಥ ಸಭಾಗೃಹದಲ್ಲಿ ಸತ್ಯಾತ್ಮತೀರ್ಥರು ಭಕ್ತರನ್ನು ಅನುಗ್ರಹಿಸಿದರು. ಶ್ರೀಪಾದರನ್ನು ಭಕ್ತರು ಕುಂಭಸ್ವಾಗತದೊಂದಿಗೆ ಬರಮಾಡಿ ಕೊಂಡರು. ಸತ್ಯಧ್ಯಾನ ವಿದ್ಯಾಪೀಠ ಕುಲಪತಿ ಮಾಹುಲಿ ವಿದ್ಯಾಸಿಂಹಾಚಾರ್ಯರು ಪ್ರಸ್ತಾವಿಕವಾಗಿ ಮಾತನಾಡಿ ಸತ್ಯಾತ್ಮತೀರ್ಥರ ಸಾಧನೆಗಳನ್ನು ತಿಳಿಸಿದರು. ಎಲ್ಲಿಲ್ಲೆಯೂ ಸ್ವಾಮೀಜಿ ನಿಂತು ಜನರಲ್ಲಿಂದ ದುಷ್ಟ ಚಟಗಳನ್ನು ಬಿಡಿಸಿದ್ದಾರೆ. ಮಕ್ಕಳಿಗೆ ತತ್ವಜ್ಞಾನದ ಬಗ್ಗೆ ಮಾಹಿತಿ ಕಲಿಸಿ ಕೊಟ್ಟಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಡಾ। ಎಂ.ಎಸ್.ಆಳ್ವ, ವಿದ್ವಾನ್ ಪ್ರಕಾಶ್ ಆಚಾರ್ಯ ರಾಮಕುಂಜ, ವಿದ್ವಾನ್ ಶ್ರೀಹರಿ ಭಟ್, ನಿರಂಜನ್ ಜೆ.ಗೋಗ್ಟೆ, ಪೂರ್ಣಪ್ರಜ್ಞ ವಿದ್ಯಾಪೀಠ ಪ್ರತಿಷ್ಠಾನ ಟ್ರಸ್ಟ್ ಮುಂಬಯಿ ಇದರ ಆಡಳಿತ ಮಂಡಳಿ ಸದಸ್ಯರು ಮತ್ತು ಮಠದ ಇತರ ಪುರೋಹಿತರು ಉಪಸ್ಥಿತರಿದ್ದು ಭಕ್ತಾದಿಗಳು ಶ್ರೀಪಾದಂಗಳವರ ಪಾದಪೂಜೆ ನೆರವೇರಿಸಿದರು.

ಗಣ್ಯರು ಶ್ರೀಗಳವರನ್ನು ಫಲಪುಷ್ಪಗಳುಂದಿಗೆ ಗೌರವಿಸಿದರು. ಪೇಜಾವರ ಮಠದ ಮುಂಬಯಿ ಶಾಖೆಯ ಮುಖ್ಯ ಆಡಳಿತಾಧಿಕಾರಿ ವಿದ್ವಾನ್ ಡಾ। ರೆಂಜಾಳ ರಾಮದಾಸ ಉಪಾಧ್ಯಾಯ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ ಧನ್ಯವಾದಗೈದರು.

### ಕರ್ನಾಟಕ ವಿಶ್ವಕರ್ಮ ಅಸೋಸಿಯೇಶನ್ ನೆರವೇರಿದ ವಿಶ್ವಕರ್ಮ ಮಹೋತ್ಸವ

# ವಿಶ್ವಕರ್ಮರು ಹುಟ್ಟು ಪ್ರತಿಭಾನ್ವಿತರು: ರವೀಶ್ ಜಿ.ಆಚಾರ್ಯ



(ಚಿತ್ರ/ವರದಿ: ರೋನ್ಸ್ ಬಂಟ್ವಾಳ್)

**ಮುಂಬಯಿ, ಸೆ.16:** ವಿಶ್ವಕರ್ಮರು ಹುಟ್ಟು ಪ್ರತಿಭಾನ್ವಿತರು ಆಗಿದ್ದು ತಾಂತ್ರಿಕತೆಯಿಂದಲೂ ಮುಂದುವರಿದಿದ್ದೇವೆ. ನಮ್ಮಲ್ಲಿನ ಯುವಜನತೆ ಜಾಗತೀಕರಣಕ್ಕೆ ಸ್ಪಂದಿಸುತ್ತಿರುವುದು ಸ್ತುತ್ಯರ್ಹ. ಆದ್ದರಿಂದ ನಮ್ಮ ಮಕ್ಕಳನ್ನು ಪ್ರೋತ್ಸಾಹಿಸಿದಾಗ ಪ್ರತಿಭಾನ್ವಿತರು ಇನ್ನಷ್ಟು ಬೆಳಕಿಗೆ ಬರುತ್ತಾರೆ. ಸಮುದಾಯದ ಜನಬಲ ದೊರೆತಾಗಲೇ ಸಮಾಜವು ಸದೃಢಗೊಳ್ಳುವುದು. ಸಮಾಜ ಬಾಂಧವರ ಪ್ರೋತ್ಸಾಹ ದೊರೆತಾಗ ಹೆಚ್ಚು ಹೆಚ್ಚು ಸಂಘಟಿತರಾಗಲು ಸಾಧ್ಯವಾಗುವುದು ಎಂದು ಕರ್ನಾಟಕ ವಿಶ್ವಕರ್ಮ ಅಸೋಸಿಯೇಶನ್‌ನ ಅಧ್ಯಕ್ಷ ರವೀಶ್ ಜಿ.ಆಚಾರ್ಯ ತಿಳಿಸಿದರು.

ಬೃಹನ್ಮುಂಬಯಿಲ್ಲಿನ ಕರ್ನಾಟಕ ವಿಶ್ವಕರ್ಮ ಅಸೋಸಿಯೇಶನ್ (ರಿ.) ಮುಂಬಯಿ ಸಂಸ್ಥೆಯು ವರ್ಷಂಪ್ರತಿಯಂತೆ ಈ ಬಾರಿಯೂ ದಿನಪೂರ್ತಿಯಾಗಿಸಿ ಶ್ರೀವಿಶ್ವಕರ್ಮ ಮಹೋತ್ಸವವನ್ನು ಇಂದಿಲ್ಲಿ ಸೋಮವಾರ ಮಲಾಡ್ ಪೂರ್ವದ ಶ್ರೀ ಸ್ವಾಮಿ ನಾರಾಯಣ ಮಂದಿರದ ಸಭಾಗೃಹದಲ್ಲಿ ಶಾಸ್ತ್ರೋಕ್ತ ವಾಗಿ ಶದ್ಧಾಭಕ್ತಿಯಿಂದ ಸಂಭ್ರಮಿಸಿದ್ದು, ಸಭಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ರವೀಶ್ ಆಚಾರ್ಯ ಮಾತನಾಡಿದರು.

ಮುಂಜಾನೆ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವಾರ್ಷಿಕ ಮಹೋತ್ಸವ ಮೊದಲ್ಗೊಂಡಿದ್ದು, ಸೂರ್ಯೋದ ಯಕ್ಕೆ ಶ್ರೀ ವಿಶ್ವಕರ್ಮ ಹೋಮ ಬಳಿಕ ಕಲಶ ಪ್ರತಿಷ್ಠಾಪನೆ ಬೆಳಗ್ಗೆಯಿಂದ ಭಜನಾ ಮಹೋತ್ಸವ, ಮಧ್ಯಾಹ್ನ ಅನ್ನಸಂತರ್ಪಣೆ, ಸೂರ್ಯಾಸ್ತಮಕ್ಕೆ ಮಹಾಮಂಗಳಾರತಿಯೊಂದಿಗೆ ನೇರವೇರಿಸಲ್ಪಟ್ಟಿತು. ಬ್ರಹ್ಮಶ್ರೀ ಪುರೋಹಿತ ಶಂಕರನಾಥ ಆಚಾರ್ಯ ತನ್ನ ವೈದಿಕತ್ವದಲ್ಲಿ ಶ್ರೀ ವಿಶ್ವಕರ್ಮ ಹೋಮ ನೆರವೇರಿಸಿ ನೆರೆದ ಸದ್ಭಕ್ತರನ್ನು ಅನುಗ್ರಹಿಸಿದರು. ಅಶೋಕ್ ಕೊಡ್ಯಡ್ಕ ರೂಪಿಸಿದ ಭವ್ಯ ದೇವರ ಮಂಟಪದಲ್ಲಿ ಶ್ರೀದೇವರನ್ನು ಪ್ರತಿಷ್ಠಾಪಿಸಲಾಗಿ ಅಲಂಕರಿಸಿದ್ದು, ರೀನಾ ಭಾಸ್ಕರ್ ಆಚಾರ್ಯ ದಂಪತಿ ಯಜ್ಞ, ಪೂಜಾಧಿಗಳ ಯಜಮಾನತ್ವ ವಹಿಸಿದ್ದರು.

ಗೋಪಾಲಕೃಷ್ಣ ಆಚಾರ್ಯ, ಪ್ರಸನ್ನ ಆಚಾರ್ಯ, ಪ್ರಶಾಂತ್ ಆಚಾರ್ಯ, ಚೇತನ್ ಆಚಾರ್ಯ, ಸಂತೋಷ್ ಆಚಾರ್ಯ ಮತ್ತಿತರ ಪುರೋಹಿತರು ಪೂಜಾಧಿಗಳಿಗೆ ಸಹಕರಿಸಿದರು.

ವಿಶ್ವಕರ್ಮ ಅಸೋಸಿಯೇಶನ್‌ನ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ, ಮಹಿಳಾ ವಿಭಾಗ, ಯುವ ವಿಭಾಗ, ಶೈಕ್ಷಣಿಕ ಮತ್ತು ಸಮಾಜ ಕಲ್ಯಾಣ ಸಮಿತಿ, ವಿಶ್ವಕರ್ಮ ಮಹಿಳಾ ಬಳಗ ಡೊಂಬಿವಲಿ, ಶ್ರೀ ಲಲಿತಾಂಬಾ ಭಜನಾ ಮಂಡಳಿ ಬೊರಿವಲಿ, ಶ್ರೀ ವಿಶ್ವಕರ್ಮ ಕಾಳಿಕಾಂಬಾ ಭಜನಾವೃಂದ ಗೋರೆಗಾಂವ್ ಇವರುಗಳ ಪಾಲ್ಗೊಳ್ಳುವಿಕೆಯಲ್ಲಿ ಭಜನಾ ಮಹೋತ್ಸವ ಸಂಪನ್ನಗೊಂಡಿತು. ಅಪರಾಹ್ನ ಪದ್ಮನಾಭ ಸಸಿಹಿತ್ಲು ಸಾರಥ್ಯದ ಕಲಾ ಸೌರಭ ಮುಂಬಯಿ ತಂಡವು ಸಂಗೀತ ರಸಸಂಜೆ ಹಾಗೂ ಅಸೋಸಿಯೇಶನ್‌ನ ಸದಸ್ಯರು ಮತ್ತು ಮಕ್ಕಳು ಸಾಂಸ್ಕೃತಿಕ ವೈವಿಧ್ಯತೆಯನ್ನು ಪ್ರಸ್ತುತ ಪಡಿಸಿದರು.

ಸಂಜೆ ಸಭಾ ಕಾರ್ಯಕ್ರಮ ನಡೆಸಲ್ಪಟ್ಟಿತು. ಅಧ್ಯಕ್ಷ ರವೀಶ್ ಆಚಾರ್ಯ, ಉಪಾಧ್ಯಕ್ಷ ಗಣೇಶ್ ಕುಮಾರ್, ಕೋಶಾಧಿಕಾರಿ ಬಾಬುರಾಜ್ ಎಂ.ಆಚಾರ್ಯ, ಮಹಿಳಾ ವಿಭಾಗಧ್ಯಕ್ಷೆ ಸುಜತಾ ಜಿ.ಆಚಾರ್ಯ, ಯುವ ವಿಭಾಗದ ಕಾರ್ಯಾಧ್ಯಕ್ಷ ಸಂದೇಶ್ ಜೆ.ಆಚಾರ್ಯ, ಮಾಜಿ ಅಧ್ಯಕ್ಷ ಪಾದೂರು ಜನಾರ್ದನ ಆಚಾರ್ಯ ಮತ್ತು ಪ್ರಫುಲ್ಲಾ ಆಚಾರ್ಯ ದಂಪತಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸುಜತಾ ಜಿ.ಆಚಾರ್ಯ ಮಾತನಾಡಿ ಪೂಜೆಯು ವಿಜೃಂಭನೆಯಿಂದ ನೇರವೇರಿಸಲು ಸದಸ್ಯರ, ಹಿರಿ-ಕಿರಿಯರ ಪ್ರೋತ್ಸಾಹ ಪ್ರೇರಕವಾಗಿದೆ. ಈ ಮಹೋತ್ಸವವು ಸಮಾಜ ಬಾಂಧವರ ಬಾಂಧವ್ಯತ್ವಕ್ಕೆ ನಾಂದಿಯಾಡಿದೆ. ಮುಂದೆಯೂ ಸಾಂಘಿಕವಾಗಿ ಇಂತಹ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುತ್ತಾ ಮಕ್ಕಳಲ್ಲೂ ಸಂಸ್ಕಾರ ತುಂಬಬೇಕು. ಅದಕ್ಕಾಗಿ ಮೊದಲಾಗಿ ಭಜನೆಯನ್ನು ರೂಢಿಸಿಕೊಳ್ಳಬೇಕು. ಮಕ್ಕಳಿಗೆ ಮಾತಾಪಿತರ ಸೇವೆ ಮಾಡುವ ಭಾಗ್ಯ ದೊರೆಯಲಿ ಎಂದು ಶ್ರೀವಿಶ್ವಕರ್ಮನಲ್ಲಿ ಪ್ರಾರ್ಥಿಸುವೆ ಎಂದರು. ಈ ಸಂದರ್ಭದಲ್ಲಿ ಅಸೋಸಿಯೇಶನ್‌ನ ಗೌರವ ಕಾರ್ಯದರ್ಶಿಗಳಾದ ಪ್ರಸಾದ್ ಆಚಾರ್ಯ ಹಾಗೂ ಶರತ್ ಕುಮಾರ್ ಜಿ.ಆಚಾರ್ಯ, ಜೊತೆ ಕೋಶಾಧಿಕಾರಿ ರವೀಂದ್ರ ಐ.ಪಿ ಆಚಾರ್ಯ, ಶೈಕ್ಷಣಿಕ ಮತ್ತು ಸಮಾಜಕಲ್ಯಾಣ ಸಮಿತಿ ಕಾರ್ಯಾಧ್ಯಕ್ಷ ಡಾ। ಕೆ.ಮೋಹನ್, ವಿಶೇಷ ಆಮಂತ್ರಿತ ಸದಸ್ಯರು ಕೆ.ಪಿ ಚಂದ್ರಯ್ಯ ಆಚಾರ್ಯ, ಸುರೇಶ ಆಚಾರ್ಯ, ನಿತೇಶ್ ಆಚಾರ್ಯ, ವಿಠ್ಠಲ ಬಿ.ಆಚಾರ್ಯ, ಸ್ವರೂಪ್ ಆಚಾರ್ಯ, ಲೆಕ್ಕ ಪರಿಶೋಧಕ ಹರೀಶ್ ಜಿ.ಆಚಾರ್ಯ, ಮಾಜಿ ಅಧ್ಯಕ್ಷರಾದ ಮಹಾಬಲ ಎ.ಆಚಾರ್ಯ, ನಿಟ್ಟೆ ದಾಮೋದರ ಆಚಾರ್ಯ, ಸದಾನಂದ ಎನ್.ಆಚಾರ್ಯ, ಹಿರಿಯ ಮುತ್ಸದ್ಧಿಗಳಾದ ಕೃಷ್ಣ.ವಿ ಆಚಾರ್ಯ, ಸುಂದರ ಆಚಾರ್ಯ, ಶ್ರೀಧರ ವಿ.ಆಚಾರ್ಯ ಹಾಗೂ ಸಕ್ರಿಯ ಸದಸ್ಯ ಅರುಣ್ ಪಿ.ಆಚಾರ್ಯ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಗಣೇಶ್ ಕುಮಾರ್ ಪ್ರಸ್ತಾವಿಕ ನುಡಿಗಳನ್ನಾಡಿದರು. ರವೀಶ್ ಆಚಾರ್ಯ ಅತಿಥಿಗಳಿಗೆ ಪುಷ್ಪಗುಚ್ಛಗಳನ್ನಿಡಿ ಗೌರವಿಸಿದರು. ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಸಮಾಜದ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ವಿಜೇತರಿಗೆ ಬಹುಮಾನಗಳನ್ನು ವಿತರಿಸಿ ಅಭಿನಂದಿಸಿದರು. ಹರೀಶ್ ಜಿ.ಆಚಾರ್ಯ ಪ್ರತಿಭಾನ್ವಿತರ ಪಟ್ಟಿ ವಾಚಿಸಿದರು. ಪ್ರಸಾದ್ ಆಚಾರ್ಯ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿ ವಂದನಾರ್ಪಣೆಗೈದರು. ವಾರ್ಷಿಕ ಪವಿತ್ರ ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಸದಸ್ಯರು, ವಿಶ್ವಕರ್ಮ ಬಂಧುಗಳು ಪಾಲ್ಗೊಂಡು ಶ್ರೀ ವಿಶ್ವಕರ್ಮ, ಶ್ರೀ ಕಾಳಿಕಾಂಬಾ ದೇವರನ್ನು ಸ್ತುತಿಸಿ ತೀರ್ಥಪ್ರಸಾದ ಸ್ವೀಕರಿಸಿ ಶ್ರೀದೇವರ ಕೃಪೆಗೆ ಪಾತ್ರರಾದರು.

## ಯಾವುದೇ ತಕರಾರು ಇಲ್ಲದೇ ರೈತರಿಗೆ 10 ಲಕ್ಷ ಬೆಳೆ ಸಾಲ: ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ



**ಬೆಂಗಳೂರು, ಸೆ. 16 :** ಯಾವುದೇ ತಕರಾರು ಇಲ್ಲದೇ ರೈತರಿಗೆ 10 ಲಕ್ಷ ರೂಪಾಯಿವರೆಗೆ ಬೆಳೆಸಾಲ ನೀಡಲು ಆರ್.ಬಿ.ಐ ಮಾರ್ಗಸೂಚಿಗಳಿವೆ. ಇದನ್ನು ಬ್ಯಾಂಕ್ ಸಿಬ್ಬಂದಿ ಪಾಲನೆ ಮಾಡಬೇಕು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಧಾರವಾಡ ಜಿಲ್ಲಾ ಸಲಹಾ ಸಮಿತಿ ಸಭೆಯ ಮಾತನಾಡಿದ ಅವರು, ಈಗ ರೈತರು ಸಂಕಷ್ಟದಲ್ಲಿದ್ದು, ಅನಗತ್ಯವಾಗಿ ಕೆಲವು ಬ್ಯಾಂಕ್‌ಗಳು ಬೆಳೆಸಾಲ ನೀಡಲು ರೈತರಿಗೆ ಸಿಬಿಲ್ ರೇಟ್ ಕಡ್ಡಾಯ ಮಾಡುತ್ತಿವೆ. ಇದರಿಂದ ರೈತರಿಗೆ ಮತ್ತು ರೈತರು ಉತ್ಪಾದಿಸುವ ಆಹಾರದ ಮೇಲೆ ನೇರ ಪ್ರಭಾವ ಬೀರುತ್ತದೆ.

ಬ್ಯಾಂಕ್ ಸಿಬ್ಬಂದಿ ಅನ್ವಯವಾಗದ ಕಾಯ್ದೆ, ನಿಯಮಗಳನ್ನು ಹೇಳಿ ರೈತರಿಗೆ ಬೆಳೆ ಸಾಲ ನೀಡುವಲ್ಲಿ ವಿನಾಕಾರಣ ತೊಂದರೆ ಕೊಡಬಾರದು ಎಂದರು.

## ಬೆಂಗಳೂರಿನಲ್ಲಿ 3,000 ರಸ್ತೆಗುಂಡಿ ದುರಸ್ತಿ, ಬಿಬಿಎಂಪಿ ಕಾರ್ಯಾಚರಣೆ

**ಬೆಂಗಳೂರು, ಸೆ. 16 :** ಮಹಾನಗರದಲ್ಲಿ ಉಂಟಾಗಿರುವ ರಸ್ತೆಗುಂಡಿಗಳನ್ನು ಮುಚ್ಚುವಲ್ಲಿ ನಿರತವಾಗಿರುವ ಬಿಬಿಎಂಪಿ, ಶುಕ್ರವಾರದೊಳಗೆ (ಸೆ.20) ಎಲ್ಲೆಡೆ ದುರಸ್ತಿ ಕಾರ್ಯವನ್ನು ಪೂರ್ಣಗೊಳಿಸಲು ಗಡುವು ವಿಧಿಸಲಾಗಿದೆ. ಕಳೆದ ವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನಗರ ಪ್ರದಕ್ಷಿಣೆ ಕೈಗೊಂಡಿದ್ದ ವೇಳೆ ಕಾಲಮಿತಿಯೊಳಗೆ ಗುಂಡಿಗಳನ್ನು ಮುಚ್ಚುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದ್ದರು. ಜತೆಗೆ ಡಿಸಿಎಂ ಕೂಡ ಅಮೆರಿಕ ಪ್ರವಾಸಕ್ಕೆ ತೆರಳುವ ಮುನ್ನ ಗಡುವಿನೊಳಗೆ ಗುಂಡಿಗಳಿಗೆ ಮುಕ್ತಿ ನೀಡುವಂತೆ ನಿರ್ದೇಶಿಸಿದ್ದರು.



ಪ್ರಮುಖ ರಸ್ತೆಗಳಲ್ಲಿ 3,000 ಗುಂಡಿಗಳನ್ನು ಮುಚ್ಚಿದ್ದು, ಇನ್ನೂ 1 ಸಾವಿರ ಬಾಕಿ ಇವೆ. ಭಾನುವಾರ ರಜಾದಿನವಿದ್ದರೂ ದಾಸರಹಳ್ಳಿ ವಲಯದಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕೆಲಸವನ್ನು ದೊಡ್ಡಪ್ರಮಾಣದಲ್ಲಿ ಕೈಗೊಳ್ಳಲಾಯಿತು. ಸ್ವತ: ವಲಯ ಆಯುಕ್ತ, ಉಪ ಆಯುಕ್ತರು ಹಾಗೂ ಇತರ ಅಧಿಕಾರಿಗಳು ಗುಂಡಿ ಮುಚ್ಚುವ ಸ್ಥಳಗಳಿಗೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.ಈ ವೇಳೆ ಮಾತನಾಡಿದ ವಲಯ ಆಯುಕ್ತ ಗಿರೀಶ್, ಡಿಸಿಎಂ ಹಾಗೂ ಮುಖ್ಯ ಆಯುಕ್ತರ ನಿರ್ದೇಶನದಂತೆ ದಾಸರಹಳ್ಳಿ ವಲಯದ ಪ್ರಮುಖ ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚಲಾಗುತ್ತಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಅತಿ ಚಿಕ್ಕ ವಲಯವಾಗಿರುವ ದಾಸರಹಳ್ಳಿ 27.82 ಚದರ ಕಿ.ಮೀ. ವ್ಯಾಪ್ತಿಯನ್ನು ಹೊಂದಿದೆ. ಆದರೂ, ಬಹಳಷ್ಟು ಗುಂಡಿಗಳು ಉಂಟಾಗಿದ್ದು, ಅವುಗಳನ್ನು ಮುಚ್ಚುವ ಕಾರ್ಯವನ್ನು ತೀವ್ರಗೊಳಿಸಲಾಗಿದೆ ಎಂದರು.

ದಾಸರಹಳ್ಳಿ ವಲಯದಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ಅಂದಾಜು 20 ಲೋಡ್ ಡಾಂಬರಿನ ಅವಶ್ಯಕತೆ ಇದೆ. ರಸ್ತೆಗುಂಡಿ ಗಮನ ತಂತ್ರಾಂಶದಲ್ಲಿ ಬರುವ ನಾಗರಿಕರ ದೂರುಗಳು ಹಾಗೂ ಇಂಜಿನಿಯರ್‌ಗಳು ಗುರುತಿಸುವ ರಸ್ತೆಗುಂಡಿಗಳನ್ನು ಶೀಘ್ರ ಮುಚ್ಚುವ ಕೆಲಸ ಮಾಡಲಾಗುತ್ತಿದೆ. ಆರ್ಟಿರಿಯಲ್ ಹಾಗೂ ಸಬ್ ಆರ್ಟಿರಿಯಲ್ ಸೇರಿ ಒಟ್ಟು 46.62 ಕಿ.ಮೀ. ಪ್ರಮುಖ ರಸ್ತೆಗಳಿದ್ದು, ಬಹುತೇಖ ಗುಂಡಿಗಳನ್ನು ಮುಚ್ಚಲಾಗಿದೆ. ವಿವಿಧ ಇಲಾಖೆಗಳು ಕೈಗೊಂಡಿರುವ ಕಾಮಗಾರಿಯಿಂದ ಉಂಟಾಗಿರುವ ರಸ್ತೆ ಅಗೆತದ ಭಾಗವನ್ನು ಆಯಾ ಇಲಾಖೆಗಳಿಂದ ಮುಚ್ಚಿಸುವ ಉಪಕ್ರಮ ತೆಗೆದುಕೊಳ್ಳಲಾಗಿದೆ ಎಂದು ಗಿರೀಶ್ ವಿವರಿಸಿದರು.ಈ ವೇಳೆ ವಲಯ ಜಂಟಿ ಆಯುಕ್ತೆ ಪಲ್ಲವಿ, ಮುಖ್ಯ ಅಭಿಯಂತರ ರವಿ ಸೇರಿ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

## ಒಕ್ಕಲಿಗ ಸಮುದಾಯವನ್ನು ಅವಾಚ್ಯವಾಗಿ ನಿಂದಿಸಿರುವ ಶಾಸಕ ಮುನಿರತ್ನ ವಿರುದ್ಧ ಕ್ರಮ

**ಬೆಂಗಳೂರು, ಸೆ. 16 :** ಬೆಂಗಳೂರು–ಜಾತಿ ನಿಂದನೆ ಆರೋಪ ಎದುರಿಸುತ್ತಿರುವ ಬಿಜೆಪಿ ಶಾಸಕ ಮುನಿರತ್ನ ಅವರ ವಿರುದ್ಧ ಒಕ್ಕಲಿಗ ರಾಜಕಾರಣಿಗಳು ಸಿಡಿದೆದ್ದಿದ್ದಾರೆ. ಕಾಂಗ್ರೆಸ್ ಪಕ್ಷದ ಒಕ್ಕಲಿಗ ಸಮುದಾಯದ ಶಾಸಕರು ಹಾಗೂ ಸಚಿವರು ನೇರವಾಗಿ ಇಂದು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮುನಿರತ್ನ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ.ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್, ಶಾಸಕರಾದ ಎಚ್.ಸಿ.ಬಾಲಕೃಷ್ಣ, ಶರತ್ ಬಚ್ಚೇಗೌಡ ಸೇರಿದಂತೆ ಒಕ್ಕಲಿಗ ಸಮುದಾಯ ನಾಯಕರ ನಿಯೋಗವು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದೆ. ಒಕ್ಕಲಿಗ ಸಮುದಾಯವನ್ನು ಅವಾಚ್ಯವಾಗಿ ನಿಂದಿಸಿರುವ ಶಾಸಕ ಮುನಿರತ್ನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಿಎಂಗೆ ಮನವಿ ಮಾಡಿದ್ದಾರೆ. ಒಂದು ಜಾತಿಯ ಬಗ್ಗೆ ಮುನಿರತ್ನ ಅವರು ಕೀಳಾಗಿ ಮಾತನಾಡಿದ್ದು, ಇದರಿಂದ ಒಕ್ಕಲಿಗ ಸಮುದಾಯಕ್ಕೆ ಭಾರಿ ನೋವುಂಟಾಗಿದೆ. ಈ ಬಗ್ಗೆ ತನಿಖೆ ನಡೆಸಿ, ಕೂಡಲೇ ಮುನಿರತ್ನ ವಿರುದ್ಧ ಸೂಕ್ತ ಜರುಗಿಸಬೇಕು ಎಂದು ಕೇಳಿಕೊಂಡಿದ್ದಾರೆ.



ಗುತ್ತಿಗೆದಾರ ಚೆಲುವರಾಜು ಎಂಬುವರಿಗೆ ಕೊಲೆ ಬೆದರಿಕೆ ಹಾಗೂ ಜಾತಿ ನಿಂದನೆ ಆರೋಪದಲ್ಲಿ ರಾಜರಾಜೇಶ್ವರಿ ನಗರದ ಬಿಜೆಪಿ ಶಾಸಕ ಮುನಿರತ್ನ ಅವರನ್ನು ಪೊಲೀಸರು ಈಗಾಗಲೇ ಬಂಧಿಸಿದ್ದಾರೆ. ಬಳಿಕ ಅವರನ್ನು ನ್ಯಾಯಾಧೀಶರ ಎದುರು ಹಾಜರುಪಡಿಸಲಾಗಿದ್ದು, ಎರಡು ದಿನಗಳವರೆಗೆ ಕಸ್ಟಡಿಗೂ ಒಪ್ಪಿಸಲಾಗಿದೆ.ಮುನಿರತ್ನ ಹಾಗೂ ಗುತ್ತಿಗೆದಾರ ಚೆಲುವರಾಜು ನಡುವೆ ನಡೆದಿದೆ ಎನ್ನಲಾದ ಸಂಭಾಷಣೆಯ ಆಡಿಯೋವೊಂದು ಎಲ್ಲೆಡೆ ಹರಿದಾಡಿತ್ತು. ಇದನ್ನು ಪತ್ರಿಕಾಗೋಷ್ಠಿಯಲ್ಲೂ ಗುತ್ತಿಗೆದಾರ ಬಿಡುಗಡೆ ಮಾಡಿದ್ದರು.

> ನಾಳೆ ಎರಡು ಆಡಿಯೋಗಳನ್ನು ರಿಲೀಸ್ ಮಾಡುತ್ತೇನೆ ಹನುಮಂತರಾಯಪ್ಪ ಜೊತೆ ಮಾತನಾಡಿದ ಆಡಿಯೋ ಹಾಗೂ 30% ಕಮಿಷನ್ ವಿಚಾರದ ಆಡಿಯೋ ಬಿಡುಗಡೆ ಮಾಡುತ್ತೇನೆ ನಾಳೆ ಎರಡು ಆಡಿಯೋಗಳನ್ನು ರಿಲಿಸ್ ಮಾಡುತ್ತೇನೆ ಎಂದು ಚೆಲುವರಾಜು ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಇದರಲ್ಲಿ ಮುನಿರತ್ನ ಅವರು ಒಕ್ಕಲಿಗರು ಹಾಗೂ ದಲಿತ ಸಮುದಾಯಗಳ ಬಗ್ಗೆ ಕೆಟ್ಟ ಪದಗಳಿಂದ ನಿಂದಿಸಿದ್ದಾರೆ ಎಂದು ಆರೋಪಿಸಲಾಗಿದೆ.ಇದರ ಬೆನ್ನಲ್ಲೇ ಗುತ್ತಿಗೆದಾರ ಚಲುವರಾಜು, ಮುನಿರತ್ನ ಅವರ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದರು. ಬಳಿಕ ಮುನಿರತ್ನ ಅವರ ಪತ್ತೆಗೆ ಪೊಲೀಸರು ಮುಂದಾದಾಗ ಅವರು ಕೋಲಾರ ಜಿಲ್ಲೆಯಲ್ಲಿ ಇರುವ ಮಾಹಿತಿ ಸಿಕ್ಕಿತ್ತು. ಕೊನೆಗೆ ಮುಳಬಾಗಿಲು ತಾಲ್ಲೂಕಿನ ನಂಗಲಿ ಗ್ರಾಮದ ಬಳಿ ಮುನಿರತ್ನ ಅವರನ್ನು ಪೊಲೀಸರು ಲಾಕ್ ಮಾಡಿದ್ದರು.

ಕೋಲಾರದಿಂದ ಆಂಧ್ರದ ಚಿತ್ತೂರು ಕಡೆಗೆ ಹೋಗಲು ಶಾಸಕ ಮುನಿರತ್ನ ಮುಂದಾಗಿದ್ದರು. ಮುನಿರತ್ನ ಅವರ ಮೊಬೈಲ್ ಲೊಕೇಶನ್ ಟ್ರ್ಯಾಕ್ ಮಾಡಿ ಅವರಿದ್ದ ಸ್ಥಳವನ್ನು ಪೊಲೀಸರು ಪತ್ತೆ ಹಚ್ಚಿ ಬಂಧಿಸಿದ್ದರು.ಇದಕ್ಕೂ ಮುನ್ನ ವಿಡಿಯೋ ಬಿಡುಗಡೆ ಮಾಡಿದ್ದ ಶಾಸಕ ಮುನಿರತ್ನ, ರಾಜಕೀಯ ಪಿತೂರಿಯಿಂದಾಗಿ ಈ ರೀತಿಯ ಆರೋಪಗಳನ್ನು ನನ್ನ ಮೇಲೆ ಮಾಡಿದ್ದಾರೆ. ನಾನೆಲ್ಲೂ ನಾಪತ್ತೆಯಾಗಿಲ್ಲ ಎಂದಿದ್ದರು. ಅಲ್ಲದೆ, ಆ ಆಡಿಯೋ ನನ್ನದೇ ಎಂದು ಸಾಬೀತಾದರೆ, ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ಹೇಳಿದ್ದರು.

ಇದಾದ ಕೆಲವೇ ಹೊತ್ತಿನಲ್ಲಿ ಪೊಲೀಸರು ಮುನಿರತ್ನ ಅವರನ್ನು ವಶಕ್ಕೆ ಪಡೆದಿದ್ದರು.ಮುನಿರತ್ನ ಅವರು ನಿಂದಿಸಿದ್ದಾರೆ ಎನ್ನಲಾದ ಆಡಿಯೋ ವೈರಲ್ ಆದ ಬೆನ್ನಲ್ಲೇ ರಾಜ್ಯಾದ್ಯಂತ ದಲಿತರು ಹಾಗೂ ಒಕ್ಕಲಿಗ ಸಮುದಾಯದವರು ಪ್ರತಿಭಟನೆ ನಡೆಸುತ್ತಿದ್ದಾರೆ. ನಿನ್ನೆ ಮಹಿಳಾ ಕಾಂಗ್ರೆಸ್ ವತಿಯಿಂದಲೂ ರಾಜ್ಯಾದ್ಯಂತ ಪ್ರತಿಭಟನೆ ನಡೆಯಿತು. ಮಹಿಳೆಯರ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ಮುನಿರತ್ನ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದ್ದರು.

## ಹೇಮಾ ಸಮಿತಿ ವರದಿ ಸಂಚಲನ

**ಬೆಂಗಳೂರು, ಸೆ. 16 :** ಮಲಯಾಳಂ ಚಿತ್ರರಂಗದಲ್ಲಿ ರಚಿಸಲಾದ ಹೇಮಾ ಸಮಿತಿ ವರದಿ ಸಂಚಲನ ಸೃಷ್ಟಿಸಿದೆ. ಕೇರಳದ ಹೇಮಾ ಕಮಿಟಿಯಂತೆ ಕನ್ನಡದ ಸ್ಯಾಂಡಲ್ವುಡ್ನಲ್ಲೂ ಲೈಂಗಿಕ ಕಿರುಕುಳ ತಡೆಗೆ ಸಮಿತಿ ರಚಿಸಬೇಕು ಎಂಬ ಆಗ್ರಹ ಕೇಳಿ ಬಂದ ಬೆನ್ನಲ್ಲೇ ಕನ್ನಡ ಚಿತ್ರರಂಗದಲ್ಲಿ ಪಾಶ್ ಕಮಿಟಿ ಮಾಡುವ ಬಗ್ಗೆ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಮಾತನಾಡಿದ್ದಾರೆ.

ಸೋಮವಾರ ಫಿಲ್ಮ್ ಚೇಂಬರ್‌ನಲ್ಲಿ ರಾಕ್‌ಲೈನ್ ವೆಂಕಟೇಶ್ ನೇತೃತ್ವದಲ್ಲಿ ನಡೆದ ಮಹಿಳೆಯ ಸುರಕ್ಷೆಯ ಕುರಿತಾದ ಸಭೆಯಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಮಾತನಾಡಿದ ಅವರು, ಚಿತ್ರರಂಗಕ್ಕೆ ಹೆಣ್ಣು ಮಕ್ಕಳು ಬರುತ್ತಾರೆ ಎಂದರೆ ಪೋಷಕರು ಸುಲಭದಲ್ಲಿ ಕಳುಹಿಸಬೇಕು. ಆ ರೀತಿ ಚಿತ್ರರಂಗ ಆಗಬೇಕು. ಕೆಲವೇ ಕೆಲವರು ಮಾತ್ರ ನಟನೆಗೆ ಹೋಗಿ ಎಂದು ಪೋಷಕರು ಹೇಳುತ್ತಾರೆ. ಇದರಿಂದ ಚಿತ್ರರಂಗದಲ್ಲಿ ಹೆಣ್ಣು ಮಕ್ಕಳು ಸುರಕ್ಷಿತವಾಗಿ ಇರುತ್ತಾರಾ ಎಂಬ ಪ್ರಶ್ನೆ ಮೂಡುವಂತೆ ಆಗಿದೆ ಎಂದಿದ್ದಾರೆ.

ವಾಣಿಜ್ಯ ಮಂಡಳಿ ತಾಯಿ ಸಂಸ್ಥೆಯಾಗಿದೆ. ಕೆಲಸ ಮಾಡುವ ಜಾಗದಲ್ಲಿ ಕೆಲವು ಅಗತ್ಯತೆಯನ್ನು ಪೂರೈಸಬೇಕು. ಮಹಿಳೆಯರ ಸುರಕ್ಷತೆಯ ಪರವಾಗಿ ಸರ್ವೇ ಮಾಡ್ತೀವಿ ಯಾರ ಹೆಸರು ಬೇಕಾದರೂ ಬರಬಹುದು. ಅದು ಕಾನ್ಫಿಡೆನ್ಷಿಯಲ್ ಎಂದಿದ್ದಾರೆ. ಮಹಿಳೆಯರ ಸುರಕ್ಷತೆಗಾಗಿ ಪಾಶ್ ಕಮಿಟಿ ರಚನೆ ಮಾಡಲು ಮತ್ತೊಂದು ಸಭೆ ಕರೆಯಲಾಗುತ್ತದೆ.

## ಈದ್ ಮಿಲಾದ್ ಅಂಗವಾಗಿ ಬಿಗಿ ಪೊಲೀಸ್ ಬಂದೋಬಸ್ತ್

**ಬೆಂಗಳೂರು, ಸೆ. 16 :** ಗಣೇಶಮೂರ್ತಿ ವಿಸರ್ಜನಾ ಮೆರವಣಿಗೆ ವೇಳೆ ಗಲಭೆ ಉಂಟಾಗಿದ ಮಂಡ್ಯ ಜಿಲ್ಲೆಯ ನಾಗಮಂಗಲ ಪಟ್ಟಣದಲ್ಲಿ ಈದ್ ಮಿಲಾದ್ ಅಂಗವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಈದ್ಮಿಲಾದ್ ಹಿನ್ನಲೆಯಲ್ಲಿ ಮುಸ್ಲಿಂ ಬಾಂಧವರು ಇಂದು ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಿರುವ ಹಿನ್ನಲೆಯಲ್ಲಿ ಮೆರವಣಿಗೆ ಮೂಲಕ ಸಾಗಲಿದ್ದು, ಈ ಪ್ರದೇಶದಲ್ಲಿ ಮತ್ತೆ ಘರ್ಷಣೆಯಾಗದಂತೆ ಪಟ್ಟಣದಾದ್ಯಂತ ಪೊಲೀಸ್ ಸರ್ಪಗಾವಲು ಹಾಕಲಾಗಿದ್ದು, ಹೈ ಅಲರ್ಟ್ ಮಾಡಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಇಂದು ನಾಗಮಂಗಲ ಪಟ್ಟಣದಲ್ಲಿ ಗಣೇಶ ಮೂರ್ತಿ ವಿಸರ್ಜನೆ ಹಾಗೂ ಮೆರವಣಿಗೆಗೆ ಅನುಮತಿ ನೀಡದಿರಲು ಜಿಲ್ಲಾಡಳಿತ ನಿರ್ಧರಿಸಿದೆ.


ಸರ್ಕಾರದ ಖಡಕ್ ಸೂಚನೆ ಅನ್ವಯ ಎಸ್ಪಿ ಮಲ್ಲಿಕಾರ್ಜುನ್ ಬಾಲದಂಡಿ ಅವರು ನಾಗಮಂಗಲದಲ್ಲಿ ಖುದ್ದು ಹಾಜರಿದ್ದು, ಭದ್ರತೆ ಹಾಗು ಪರಿಸ್ಥಿತಿ ನಿಯಂತ್ರಣದ ಬಗ್ಗೆ ಅವಲೋಕಿಸುತ್ತಿದ್ದಾರೆ. ನಾಗಮಂಗಲದಲ್ಲಿ ಮೂರು ದಿನಗಳ ಹಿಂದೆ ನಡೆದ ಗಲಭೆ ಹಿನ್ನಲೆಯಲ್ಲಿ ದರ್ಗಾ, ಮಸೀದಿ ಬಳಿ ಹೆಚ್ಚಿನ ಪೊಲೀಸ್ ಭದ್ರತೆ ಮಾಡಲಾಗಿದ್ದು, ಪ್ರಮುಖವಾಗಿ ಮಂಡ್ಯ ಸರ್ಕಲ್, ಈದ್ಗಾ ಮೈದಾನದ ಸುತ್ತ ಪೊಲೀಸರು ಕಣ್ಗಾವಲಿನಲ್ಲಿದ್ದಾರೆ. ಸ್ಥಳದಲ್ಲಿ ಇಬ್ಬರು ಎಸ್ಪಿ, ಇಬ್ಬರು ಎಎಸ್ಪಿ, ನಾಲ್ವರು ಡಿವೈಎಸ್ಪಿ, 20 ಇನ್ಸ್ಪೆಕ್ಟರ್, ಪಿಎಸ್ಐ ಜೊತೆಗೆ ಏಳು ಡಿಎಆರ್, ಕೆಎಸ್ಆರ್ಪಿ ತುಕಡಿ ಸೇರಿದಂತೆ 700ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಬಂದೋಬಸ್ತ್ ನಲ್ಲಿದ್ದಾರೆ. ಇಂದು ಎಲ್ಲೆಡೆ ಈದ್ ಮಿಲಾದ್ ಇರುವುದರಿಂದ ಮುಸ್ಲಿಂ ಬಾಂಧವರು ಮೆರವಣಿಗೆ ಸಾಗುವ ಗಲ್ಲಿ ಗಲ್ಲಿಗಳಲ್ಲಿ, ರಸ್ತೆಗಳಲ್ಲಿ ಪೊಲೀಸರನ್ನು ನಿಯೋಜಿಸಲಾಗಿದೆ.

## ಪದ್ಮಭೂಷಣ ಡಾ. ಶಿವತಾನು ಪಿಳ್ಳೈ ಅವರೊಂದಿಗೆ ವಿಶೇಷ ಅಧಿವೇಶನ

**ಬೆಂಗಳೂರು, ಸೆ. 16 :** ಭಾರತೀಯ ರಾಯಭಾರ ಕಚೇರಿಯ ಅಡಿಯಲ್ಲಿ ಭಾರತೀಯ ಸಾಂಸ್ಕೃತಿಕ ಕೇಂದ್ರವು ಸ್ಪೇಸ್ ಅಂಡ್ ಫ್ಯೂಚರ್ ಆಫ್ ಹ್ಯುಮಾನಿಟಿ ಅನ್ನು ಆಯೋಜಿಸಿತು. ಬ್ರಹ್ಮೋಸ್ ಏರೋಸ್ಪೇಸ್‌ನ ಸ್ಥಾಪಕ ಸಿಇಒ ಮತ್ತು ಎಂಡಿ ಖ್ಯಾತ ಭಾರತೀಯ ವಿಜ್ಞಾನಿ ಪದ್ಮಭೂಷಣ ಡಾ. ಶಿವತಾನು ಪಿಳ್ಳೈ ಅವರು ಅಧಿವೇಶನವನ್ನು ನಡೆಸಿದರು.

ಈ ಕಾರ್ಯಕ್ರಮವನ್ನು ಐಸಿಸಿ ಆವರಣದಲ್ಲಿ ನಡೆಸಲಾಯಿತು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಭಾರತೀಯ ಡಯಾಸ್ಪೊರಾ ಸದಸ್ಯರು, ಮುಖ್ಯವಾಗಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ತಮ್ಮ ಭಾಷಣದಲ್ಲಿ ಡಾ. ಪಿಳ್ಳೈ ಅವರು ಬಾಹ್ಯಾಕಾಶ ಮತ್ತು ಮಾನವೀಯತೆಯ ಭವಿಷ್ಯ ಎಂಬ ವಿಷಯವನ್ನು ವಿವರಿಸಿದರು. ಅವರು ದಿವಂಗತ ಡಾ.ಎ.ಪಿ.ಜೆ ಅವರೊಂದಿಗೆ ಕೆಲಸ ಮಾಡಿದ ಅನುಭವಗಳ ಕುರಿತು ಮಾತನಾಡಿದರು.

ಅಬ್ದುಲ್ ಕಲಾಂ, ಭಾರತದ ಮಾಜಿ ರಾಷ್ಟ್ರಪತಿ. ಅವರ ಪ್ರೇರಕ ಭಾಷಣವನ್ನು ಎಲ್ಲರೂ ಚೆನ್ನಾಗಿ ಸ್ವೀಕರಿಸಿದರು. ಡಾ.ಪಿಳ್ಳೈ ಅವರನ್ನು ಐಸಿಸಿ ಅಧ್ಯಕ್ಷ ಶ್ರೀ



ಎ.ಪಿ.ಮಣಿಕಂಠನ್ ಅವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಐಸಿಸಿಯ ಉಪಾಧ್ಯಕ್ಷ ಸುಬ್ರಹ್ಮಣ್ಯ ಹೆಬ್ಬಾಗಿಲು, ಐಸಿಸಿ ಪ್ರಧಾನ ಕಾರ್ಯದರ್ಶಿ ಮೋಹನ್ ಕುಮಾರ್, ಐಸಿಸಿ ವ್ಯವಸ್ಥಾಪಕ ಸಮಿತಿಯ ಉಳಿದ ಸದಸ್ಯರು, ಐಸಿಸಿ ಸಲಹಾ ಮಂಡಳಿ ಸದಸ್ಯರು ಮತ್ತು ಭಾರತೀಯ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಅಭಿವೃದ್ಧಿ ಕಾಣದ ಕಲ್ಯಾಣ ಕರ್ನಾಟಕ ಡಾ. ಗುರುಪ್ರಸಾದ ರಾವ್ ಹವಾಲ್ದಾರ್

ಭಾರತವು 1947ರ ಆ. 15 ರಂದು ಇಡೀ ದೇಶವೇ ಸ್ವಾತಂತ್ರ್ಯದ ಸಂಭ್ರಮದಲ್ಲಿದ್ದರೆ ಕಲ್ಯಾಣ ಕರ್ನಾಟಕ ಪ್ರದೇಶ ಮಾತ್ರ ಇನ್ನೂ ಗುಲಾಮಗಿರಿ ಎಂಬ ನರಕದಲ್ಲಿ ಇತ್ತು. ಹೈದರಾಬಾದ್ನ ನಿಜಾಮನ ಆಳ್ವಿಕೆ ಈ ಜನರ ಬದುಕನ್ನು ದುರ್ಭರವಾಗಿಳಿಸಿತ್ತು. ವಂದೇ ಮಾತರಂ ಹೇಳುವುದು, ತ್ರಿವರ್ಣ ಧ್ವಜ ಹಾರಿಸುವುದು ಅಪರಾಧವಾಗಿತ್ತು. ಕಲ್ಯಾಣ ಕರ್ನಾಟಕ ಸ್ವಾತಂತ್ರ್ಯ ಚಳವಳಿ ನಿಜಾಮನ ನಿರಂಕುಶ ಪ್ರಭುತ್ವ ಹಾಗೂ ಸ್ವಾತಂತ್ರ್ಯದ ಹೋರಾಟವಾಗಿತ್ತು. 1948ರ ಸೆಪ್ಟೆಂಬರ್ 17ರಂದು ಭಾರತದ ಒಕ್ಕೂಟಕ್ಕೆ ಸೇರಿದಕಕೆ ಇಂದು 76 ವರ್ಷ ತುಂಬುತ್ತದೆ. ಇದರ ಹಿಂದೆ ಸಾವಿರಾರು ದೇಶಭಕ್ತರು ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲರ ಹೋರಾಟದ ಶ್ರಮವಿದೆ. ಸ್ವಾತಂತ್ರ್ಯ ಲಭಿಸಿ 77ವರ್ಷ ಕಳೆದರೂ ಕರ್ನಾಟಕದ ಬೇರೆ ಭಾಗಗಳಿಗೆ ಹೋಲಿಸಿದರೆ ಕಲ್ಯಾಣ ಕರ್ನಾಟಕ ಅಭಿವೃದ್ಧಿಯಲ್ಲಿ ತುಂಬಾ ಹಿಂದಿದೆ.

ಈ ಭಾಗದ ಅನೇಕ ನೀರಾವರಿ ಯೋಜನೆಗಳಿಗೆ ಸಮಯೋಚಿತ ಹಣ ಮಂಜೂರಾಗದೆ ಬಹಳಷ್ಟು ಅಪೂರ್ಣವಾಗಿಯೇ ಉಳಿದಿವೆ. ಈ ಕಾರಣಕ್ಕಾಗಿಯೇ ನೀರಾವರಿಯಿಂದ ಈ ಪ್ರದೇಶ ವಂಚಿತಗೊಂಡು, ಬರದ ನಾಡಾಗಿ ಉಳಿದಿದೆ. ಆಗ ನಿಜಾಮನ ವಿರುದ್ಧ ಹೋರಾಟವಾದರೆ ಈಗ ಬದುಕಿಗಾಗಿ ಆಗಿದೆ. ಸ್ವಾತಂತ್ರ್ಯಪೂರ್ವದಲ್ಲಿ ಮೈಸೂರು ಪ್ರಾಂತಕ್ಕೆ ಹೋಲಿಸಿದರೆ ನಿಜಾಮ ಆಡಳಿತ ಪ್ರಗತಿಗೆ ಪೂರಕ ಮತ್ತು ಜನಾನುರಾಗಿ ಆಗಿರಲಿಲ್ಲ. ಮೈಸೂರು ಮಹಾರಾಜರು ಶಿಕ್ಷಣ, ನೀರಾವರಿ, ರಸ್ತೆ ಸೇರಿದಂತೆ ಕಲ್ಯಾಣ ರಾಜ್ಯಕ್ಕೆ ಹೆಚ್ಚು ಒತ್ತು ಕೊಟ್ಟರು. ಆದರೆ, ಹೈದರಾಬಾದ್ ನಿಜಾಮನ ಆಡಳಿತ ಅಭಿವೃದ್ಧಿ ಕೇಂದ್ರಿತವಾಗಿರಲಿಲ್ಲ. ಮೈಸೂರು ಸಂಸ್ಥಾನಕ್ಕಿಂತಲೂ ಹೈದರಾಬಾದ್ ಸಂಸ್ಥಾನ ಹೆಚ್ಚು ಶ್ರೀಮಂತ ಇದ್ದರೂ, ಜನಕಲ್ಯಾಣ ಯೋಜನೆ ಜಾರಿಯಾಗಲಿಲ್ಲ. ಮೈಸೂರು ಸೀಮೆ ಅರಸರಂಥ ದೂರದೃಷ್ಟಿಯ ದೊರೆಗಳನ್ನೂ ದಿವಾನರನ್ನೂ ಪಡೆದು ಯೋಜನೆಗಳಿಂದ ಪರಿಪುಷ್ಟವಾಗಿ ಶ್ರೀಮಂತವಾದಂತೆ, ಈ ಭಾಗ ಆಗಲಿಲ್ಲ. ಕಲ್ಯಾಣ ಕರ್ನಾಟಕದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ವಿಜಯನಗರ ಸೇರಿ ಏಳು ಜಿಲ್ಲೆಗಳಲ್ಲಿರುವ ಜನಸಂಖ್ಯೆ ಒಟ್ಟು 1.3 ಕೋಟಿಯಷ್ಟು. ಈ ಏಳು ಜಿಲ್ಲೆಗಳಲ್ಲಿ ಸಾಕ್ಷರತೆ ಪ್ರಮಾಣ, ಉನ್ನತ ಶಿಕ್ಷಣಕ್ಕೆ ದಾಖಲಾಗುವವರ ಪ್ರಮಾಣ ನಿರಾಶಾದಾಯಕವಾಗಿಯೇ ಮುಂದುವರಿದಿವೆ. ಅತ್ಯಂತ ಕಷ್ಟಪಟ್ಟು ಪಡೆದ 371(ಜೆ) ಕಲಂ ತಿದ್ದುಪಡಿಯಿಂದ ಪ್ರದೇಶಕ್ಕೆ ಆಗಿರುವ ಪ್ರಯೋಜನಗಳ ಅಷ್ಟಕಷ್ಟೇ. ಈಗಲೂ ಕೆಲಸ ಹುಡುಕಿಕೊಂಡು ಜನರು ಗುಳೇ ಹೋಗುವ ಕಷ್ಟ ತಪ್ಪಿಲ್ಲ. ರಾಜ್ಯದಲ್ಲಿ ಪ್ರಾದೇಶಿಕ ಅಸಮಾನತೆಯನ್ನು ನಿವಾರಿಸಲು ಡಾ. ಡಿ.ಎಂ. ನಂಜುಂಡಪ್ಪ ನೇತೃತ್ವದ ಸಮಿತಿ ರಚನೆಗೊಂಡು ಎರಡು ದಶಕ ಪೂರೈಸುವ ಹೊಸ್ತಿಲಲ್ಲಿದ್ದರೂ, ಅದು ನೀಡಿದ ಶಿಫಾರಸುಗಳ ಅನುಷ್ಠಾನ ಇನ್ನೂ ಪರಿಪೂರ್ಣವಾಗಿ ಆರೂ ಜಿಲ್ಲೆಗಳಲ್ಲಿ ಆಗಿಲ್ಲ. ಸಮಿತಿಯ ಶಿಫಾರಸಿನಂತೆ ಹೈದರಾಬಾದ್ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಬಿಡುಗಡೆಯಾದ ಕೋಟ್ಯಂತರ ರೂಪಾಯಿ ಅನುದಾನದ ಸಮರ್ಪಕ ಬಳಕೆಯಾಗುತ್ತಿಲ್ಲ. ಜನತೆಗೆ ಪ್ರತಿವರ್ಷ ಸಾವಿರಾರು ಕೋಟಿ ರೂಪಾಯಿಗಳು, ವಿಶೇಷ ಅನುದಾನಗಳನ್ನು ರಾಜ್ಯ, ಕೇಂದ್ರ ಸರ್ಕಾರಗಳು ನೀಡುತ್ತಿವೆ, ಅಲ್ಲದೇ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಿದೆ, ಸೂಕ್ತ ಅನುದಾನ ನೀಡುತ್ತಿದ್ದರೂ ಮೂಲಸೌಕರ್ಯ ವಿಸ್ತರಣೆ ವಿಷಯದಲ್ಲಿ ಹೆಚ್ಚೇನು ಸುಧಾರಣೆಯಾಗಿಲ್ಲ. 2013–14ರಿಂದ 2023–24ರವರೆಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ 14,878 ಕೋಟಿ ರೂ. ಅನುದಾನ ಹಂಚಿಕೆ ಮಾಡಲಾಗಿದ್ದು, 10,228 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಬಂಡವಾಳ ಹೂಡಿಕೆ, ಕೈಗಾರಿಕೆಗಳ ಸ್ಥಾಪನೆ, ಉದ್ಯೋಗಸೃಷ್ಟಿ ಕಡತಗಳಿಗೆ ಸೀಮಿತಗೊಂಡಿದೆ. ಪ್ರವಾಸೋದ್ಯಮ ಅಭಿವೃದ್ಧಿಗೆ ಗ್ರಹಣ ಹಿಡಿದಿದೆ. ಸರ್ಕಾರಿ ಹುದ್ದೆಗಳು ಭರ್ತಿಯಾಗದೆ ಆಡಳಿತಯಂತ್ರ ಕುಂಟುತ್ತ ಸಾಗಿದೆ.ಈ ಜಿಲ್ಲೆಗಳಿಂದ ಆ ಅನುದಾನ ಹಲವು ಬಾರಿ ವಾಪಸು ಹೋಗಿದೆ.

ಹಿಂದಿನ ಸಾಲಿನಲ್ಲಿ ವೆಚ್ಚವಾಗದ 2,655.89 ಕೋಟಿ ಕೆಕೆಆರ್‌ಡಿಬಿ ಖಾತೆಯಲ್ಲಿದೆ. ಪ್ರಸಕ್ತ ಸಾಲಿನ ನವೆಂಬರ್ ಅಂತ್ಯದವರೆಗೆ ಈ ವ್ಯಾಪ್ತಿಯ ಏಳು (ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ) ಜಿಲ್ಲೆಗಳಿಗೆ ಒಟ್ಟು 2,113.81 ಕೋಟಿ ಅನುದಾನ ಹಂಚಿಕೆ ಮಾಡಲಾಗಿದ್ದು, ಅದರಲ್ಲಿ 642.33 ಕೋಟಿ (ಶೇ 30) ಮಾತ್ರ ವೆಚ್ಚವಾಗಿದೆ. ಕಳೆದ ಸಾಲಿನಲ್ಲಿ (2022?23) ವೆಚ್ಚ ಮಾಡಲು, ಅದಕ್ಕೂ ಹಿಂದಿನ ಸಾಲಿನ ಬಾಕಿ 783.59 ಕೋಟಿ ಮತ್ತು ಬಿಡುಗಡೆಯಾದ 2,900 ಕೋಟಿ ಸೇರಿ ಒಟ್ಟು 3,683.59 ಕೋಟಿ ಅನುದಾನ ಲಭ್ಯ ಇತ್ತು. ಆ ಸಾಲಿನಲ್ಲಿ ಮೈಕ್ರೋ ಯೋಜನೆಗಳಡಿ ನಿಗದಿಪಡಿಸಿದ್ದ ಕ್ರಿಯಾ ಯೋಜನೆಗಳಿಗೆ ?1,500 ಕೋಟಿಯಲ್ಲಿ 786.09 (ಶೇ 52) ಕೋಟಿ ವೆಚ್ಚವಾಗಿದೆ. ಮ್ಯಾಕ್ರೋ ಯೋಜನೆಗಳಡಿ 1,400 ಕೋಟಿಯಲ್ಲಿ ವೆಚ್ಚವಾಗಿರುವುದು 241.61 ಕೋಟಿ (ಶೇ 17) ಮಾತ್ರ. ಹೀಗೆ ಒಟ್ಟು ಕೇವಲ 1,027.70 ಕೋಟಿ (ಶೇ 27.89) ವೆಚ್ಚವಾಗಿತ್ತು.

ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆಸಲಾಯ್ತಾದರೂ ಉತ್ತರ ಕರ್ನಾಟಕದಲ್ಲಿ ಬರುವ 6 ಜಿಲ್ಲೆಗಳ ವ್ಯಾಪ್ತಿಯ 1.25 ಕೋಟಿ ಜನ ವಸತಿ ಹೊಂದಿರುವ ಕಲ್ಯಾಣ ಕರ್ನಾಟಕವನ್ನೇ ಈ ಸಮಾವೇಶದಲ್ಲಿ ಅಲಕ್ಷಸಿದ್ದು ಯಾಕೆ ಎಂಬುದೇ ಉತ್ತರ ಸಿಗದ ಪ್ರಶ್ನೆ. ಮೊದಲೇ ಕೈಗಾರಿಕೆ ಬರ ಕಾಡುತ್ತಿರುವ ಕಲ್ಯಾಣ ಕರ್ನಾಟಕದಲ್ಲಿ ಬಂಡವಾಳ ಹರಿದು ಬಂದರೆ ತಾನೆ ಈ ಸಮಸ್ಯೆಗೆ ಪರಿಹಾ ದೊರಕೋದು ಬಂಡವಾಳ ಹೂಡಿಕೆದಾರರು ಈ ನೆಲದತ್ತ ಕಣ್ಣು ಹಾಯಿಸಲಿ ಎಂಬ ಕಾರಣಕ್ಕಾಗಿ ಕಲಬುರಗಿ ಬೀದರ್‌ನಲ್ಲಿ ವಿಮಾನಯಾನ ಸೇವೆ ಶುರುವಾಗಿದೆ. ಇದಲ್ಲದೆ ಬೀದರ್ ನ ರಕ್ಷಣಾ ಉದ್ದೇಶದ ವಿಮಾನ ನಿಲ್ದಾಣ ನಾಗರಿಕ ವಿಮಾನಯಾನಕ್ಕೆ ಅನುಮತಿ ನೀಡಿದ್ದರ ಹಿಂದಿನ ಉದ್ದೇಶ ಆಗಿತ್ತು. ವಿಮಾನಯಾನ ಸೇವೆ ಆರಂಭವಾಗಿ ಸ್ಥಗಿತಗೊಂಡಿದೆ. ಇನ್ನೂ ವಿಜಯಪುರ ವಿಮಾನ ನಿಲ್ದಾಣ ಕುಂಟುತ್ತಾ ಸಾಗಿದರೆ, ರಾಯಚೂರಿನಲ್ಲಿ ವಿಮಾನ ನಿಲ್ದಾಣ ಇಲ್ಲವೇ ಇಲ್ಲ, ಇನ್ನೂ ಬಳ್ಳಾರಿ ಕೊಪ್ಪಳದಲ್ಲಿ ಖಾಸಗಿಯವರ ನಿಲ್ದಾಣ ವನ್ನು ನೆಚ್ಚಿಕೊಂಡು ಕೂತಿದೆ. ಇಲ್ಲಿನ ಕೈಗಾರಿಕೆ ಪ್ರವಾಸೋದ್ಯಮಕ್ಕೆ ಉತ್ತೇಜನ ಸಿಗುತ್ತದೆ. ಕಳೆದ ಸಲ ನಡೆದ ವಿಧಾನ ಸಭಾ ಅಧಿವೇಶನದಲ್ಲಿ ಕೈಗಾರಿಕಾ ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕಳೆದ 2 ವರ್ಷಗಳಲ್ಲಿ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿಯಲ್ಲಿ ಹಾಗೂ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯಲ್ಲಿ ಒಟ್ಟು 129 ಬಂಡವಾಳ ಹೂಡಿಕೆ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ, 2022–23ನೇ ಸಾಲಿನಲ್ಲಿ 75 ಯೋಜನೆಗಳಿಗೆ ರೂ 85561 ಕೋಟಿ ಬಂಡವಾಳ ಹೂಡಿಕೆ ಹಾಗೂ 30974 ಜನರಿಗೆ ಉದ್ಯೋಗ ಸೃಷ್ಠಿಗೆ ಮತ್ತು 2023–24ನೇ ಸಾಲಿನಲ್ಲಿ 54 ಯೋಜನೆಗಳಿಗೆ ರೂ 12252 ಕೋಟಿ ಬಂಡವಾಳ ಹೂಡಿಕೆ ಮತ್ತು 9152 ಜನರಿಗೆ ಉದ್ಯೋಗ ಸೃಷ್ಠಿಗೆ ಅನುಮೋದನೆ ನೀಡಲಾಗಿದೆ. ಎರಡು ವರ್ಷಗಳಲ್ಲಿ ಒಂದು ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ಮಾಡಲಾಗಿದ್ದು, 57 ಕಂಪನಿಗಳೊಂದಿಗೆ ರೂ. 5,41,369 ಕೋಟಿ ಬಂಡವಾಳ ಹೂಡಿಕೆ ಒಡಂಬಡಿಕೆಗಳಿಗೆ ಸಹಿ ಮಾಡಿವೆ ಎಂದು ಹೇಳಿದ್ದರು. ಖಾಲಿ ಇರುವ ಹುದ್ದೆಗಳು ಅನುಚ್ಛೇದ 371 (ಜೆ) ಅಡಿ ಇಲಾಖೆವಾರು ಭರ್ತಿ ಮಾಡಲು ಬಾಕಿ ಇರುವ ನೇರ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ 28,023 ಹುದ್ದೆಗಳಿವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ನೇರ ನೇಮಕಾತಿ ಮೂಲಕ 28,023 ಹುದ್ದೆಗಳನ್ನು ಭರ್ತಿ ಮಾಡಬೇಕಿದ್ದು, ಅವುಗಳಲ್ಲಿ 12,945 ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ಲೋಕಸೇವಾ ಆಯೋಗ ಹಾಗೂ ಇನ್ನಿತರ ಸಂಸ್ಥೆಗಳ ಮೂಲಕ ನಡೆಯುತ್ತಿದೆ. ಉಳಿದಂತೆ 15,078 ಹುದ್ದೆಗಳು ಖಾಲಿ ಇದ್ದು ಭರ್ತಿ ಪ್ರಕ್ರಿಯೆ ಆರಂಭಗೊಳ್ಳಬೇಕಿದೆ. ಅವುಗಳಲ್ಲಿ ಎ,ಬಿ,ಸಿ ಹಾಗೂ ಡಿ ವೃಂದದ ಹುದ್ದೆಗಳು ಸೇರಿವೆ.

ಈ ಭಾಗದಲ್ಲಿ 9,905 ವಿವಿಧ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಬೇಕಿದ್ದು, ಈ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಬೇಕಿದೆ.2023ರ ಆಗಸ್ಟ್ 17ರಂದು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ತೆಗೆದುಕೊಳ್ಳಲಾದ ತೀರ್ಮಾನದಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಸ್ಥಳೀಯ ವೃಂದದಲ್ಲಿನ ಮೀಸಲಿರಿಸಿರುವ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡ ಬೇಕಿದೆ. ಕಲಂ 371 ಜೆ ಅನುಷ್ಠಾನಗೊಂಡು ದಶಕ ಕಳೆದಿದೆ ದಿ. ಧರ್ಮಸಿಂಗ್, ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ, ಇನ್ನೂ ಅನೇಕ ಮಹನೀಯರ ಶ್ರಮದಿಂದ ಈ ಸಂವಿಧಾನದ ವಿಶೇಷ ಕಲಂ ನಮಗೆ ದೊರಕಿದೆ. ವೃತ್ತಿ ಶಿಕ್ಷಣ, ಉದ್ಯೋಗ, ಅಭಿವೃದ್ಧಿಗೆ ಸಾಕಷ್ಟು ಅವಕಾಶವಿದೆ. ಅದರೆ ಈ ಅವಕಾಶ ಇಲ್ಲಿನ ಜನರಿಗೆ ದೊರೆತು ಅಭಿವೃದ್ಧಿ ಹೊಂದಿದಾಗ ಮಾತ್ರ ಜನರ ಬದುಕು ಹಸನಾಗಲು ಸಾಧ್ಯ ಕೇಂದ್ರ ಸರ್ಕಾರ 371ಎ ಎಂಬ ವಿಶೇಷ ಸ್ಥಾನಮಾನ ನೀಡಿದೆ,ಇಷ್ಟೆಲ್ಲ ಇದ್ದರೂ ಅಭಿವೃದ್ಧಿ ಎನ್ನುವುದು ಪೂರ್ಣ ಪ್ರಮಾಣದಲ್ಲಿ ಆಗದೇ ಇರುವುದು ದುರದೃಷ್ಟಕರ. ರಾಜ್ಯ ಸರ್ಕಾರ ಇದೇ ಸೆಪ್ಟೆಂಬರ್ 17ರ ಕಲ್ಯಾಣ ಕರ್ನಾಟಕ ವಿಮೋಚನಾ ದಿನದಂದು ಕಲಬುರಗಿಯ ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಸಚಿವ ಸಂಪುಟದ ಸಭೆಯನ್ನು ನಡೆಸಲು ನಿರ್ಧರಿಸಿದೆ. ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯ ವಿಷಯಗಳನ್ನು ವಿಶೇಷವಾಗಿ ಪರಿಗಣಿಸಿ ಈ ಸಭೆ ನಡೆಯಲಿರುವುದು ಸ್ವಾಗತಾರ್ಹ. ಆಡಳಿತಯಂತ್ರ ಬರೀ ಬೆಂಗಳೂರಿಗೆ ಸೀಮಿತಗೊಂಡಿದೆ. ಕಲ್ಯಾಣ ಕರ್ನಾಟಕ ಭಾಗಕ್ಕೆ ಸರ್ಕಾರ ಮಲತಾಯಿ ಧೋರಣೆ ತಳೆಯುತ್ತಿದೆ ಎಂಬ ಆರೋಪ ದಶಕಗಳಿಂದಲೂ ಇದೆ. ಈ ಭಾಗದ ಜನರು ಮೂಲಸೌಕರ್ಯದಿಂದ ಹಿಡಿದು ಯಾವುದೇ ಸವಲತ್ತು ಪಡೆಯಬೇಕಾದರೂ ಅದಕ್ಕೆ ಉಗ್ರ ಹೋರಾಟವನ್ನೇ ಮಾಡಬೇಕು. ಇದಕ್ಕೆ ಇತಿಹಾಸ ಸಾಕ್ಷಿಯಾಗಿದೆ. ಸಂವಿಧಾನದ 371 (ಜೆ) ಕಲಂ ತಿದ್ದುಪಡಿಗಾಗಿ ಹಲವು ವರ್ಷಗಳ ಕಾಲ ಹೋರಾಟ ಮಾಡಬೇಕಾಯಿತು. ಹೈಕೋರ್ಟ್ನ ಪೀಠಸ್ಥಾಪನೆಗೂ ಹೋರಾಟದ ಹಾದಿ ಹಿಡಿಯಬೇಕಾಯಿತು. ಹೀಗೆ, ಮುಖ್ಯಮಂತ್ರಿಗಳು, ಮಂತ್ರಿಗಳು ನಮ್ಮ ಸಮಸ್ಯೆಗೆ ಕಿವಿಯಾಗುವುದು ಯಾವಾಗ ಎಂದು ಇಲ್ಲಿನ ಜನರು ಗಟ್ಟಿಯಾಗಿ ಪ್ರಶ್ನಿಸಿದಾಗ ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ 2009ರಲ್ಲಿ ಸಚಿವ ಸಂಪುಟ ಸಭೆಯನ್ನು ಕಲಬುರಗಿಯಲ್ಲಿ ನಡೆಸಿದ್ದರು. ಬಳಿಕ ಜಗದೀಶ ಶೆಟ್ಟರ್ ಸಿಎಂ ಆಗಿದ್ದಾಗ ಕಲಬುರಗಿಯಲ್ಲಿ ಸಂಪುಟ ಸಭೆ ನಡೆದಿತ್ತು. ಆದರೆ, ಸರ್ಕಾರ ಬದಲಾದ ಬಳಿಕ ವಿಮೋಚನಾ ದಿನದ ಕಾರ್ಯಕ್ರಮಕ್ಕೆ ಮಾತ್ರ ಕಲಬುರಗಿಗೆ ಮುಖ್ಯಮಂತ್ರಿಗಳು ಬರುವಂತಾಯಿತು. ಹಲವು ವರ್ಷಗಳ ಬಳಿಕ ಈಗ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ ನಡೆಸುತ್ತಿದೆ. ಪ್ರಾದೇಶಿಕ ಅಸಮತೋಲನ ನಿವಾರಣೆಯ ಬಗ್ಗೆ ಪ್ರೊ.ನಂಜುಂಡಪ್ಪ ನೇತೃತ್ವದ ಸಮಿತಿ ನೀಡಿರುವ ವರದಿ ಪ್ರಕಾರ ರಾಜ್ಯದಲ್ಲಿ ಅತಿ ಹಿಂದುಳಿದ ತಾಲೂಕುಗಳು ಹೆಚ್ಚಿನ ಸಂಖ್ಯೆಯಲ್ಲಿ ಇರುವುದು ಕಲ್ಯಾಣ ಕರ್ನಾಟಕ ಭಾಗದಲ್ಲೇ. ಹೈದರಾಬಾದ್–ಕರ್ನಾಟಕವನ್ನು ಕಲ್ಯಾಣ ಕರ್ನಾಟಕ ಎಂದು ಮರು ನಾಮಕರಣ ಮಾಡಲಾಗಿದೆ. ಆದರೆ, ಇಲ್ಲಿಯವರ ಬದುಕು ಕಲ್ಯಾಣವಾಗಿಲ್ಲ. ಈ ರೀತಿ ಕೆಲವು ವರ್ಷಗಳಿಗೊಮ್ಮೆ ಇಲ್ಲಿ ಸಂಪುಟ ಸಭೆ ನಡೆಸುವ ಮಾತ್ರದಿಂದಲೇ ಪ್ರಾದೇಶಿಕ ಅಸಮತೋಲನವನ್ನು ಸರಿಪಡಿಸಲಾಗುವುದಿಲ್ಲ ಎಂಬುದನ್ನು ರಾಜ್ಯ ಸರ್ಕಾರ ಅರಿತುಕೊಳ್ಳಬೇಕು ಜೊತೆಗೆ ಇಲ್ಲಿನ ಅಭಿವೃದ್ಧಿಗಾಗಿ ಶಾಸಕರು, ಸಚಿವರು, ಸಂಸದರು ತಮ್ಮ ಇಚ್ಛಾಶಕ್ತಿ ಪ್ರದರ್ಶಿಸಬೇಕಿದೆ, ಬಂಡವಾಳ ಹೂಡಿಕೆ, ಒಡಂಬಡಿಕೆಯಿಂದ ಜನರ ಅಭ್ಯುದಯ ಸಾಧ್ಯವಿಲ್ಲ, ಪ್ರಾಮಾಣಿಕ ಪ್ರಯತ್ನದಿಂದ ಸತತವಾಗಿ ಯೋಜನೆಗಳ ಕಾರ್ಯಗೊಳಿಸುವಿಕೆ ಮುಖ್ಯವಾಗುತ್ತದೆ.

ಮತ್ತು ಸ್ವತಂತ್ರ ನಂತರದ ದಶಕಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿ ಯಾಗಲೇ ಇಲ್ಲ,ಅಭಿವೃದ್ಧಿ ಮೂಲಭೂತ ಸೌಕರ್ಯಗಳಿಗಾಗಿ. ಕೂಗು ಹಲವು ದಶಕಗಳಿಂದಲೂ ಬಲಗೊಳ್ಳುತ್ತಲೇ ಇದೆ. ಈ ಹಿಂದೆ ಪ್ರತ್ಯೇಕ ರಾಜ್ಯದ ಬೇಡಿಕೆಯೂ ಬಲಗೊಂಡಿತ್ತು. ಕಲ್ಯಾಣ ಭಾಗಕ್ಕೆ ಹೆಚ್ಚುವರಿ ಅನುದಾನ ನೀಡಿ ಅಭಿವೃದ್ಧಿಪಡಿಸಿ ಪ್ರಾದೇಶಿಕ ಅಸಮತೋಲನೆ ನಿವಾರಿಸಬೇಕು, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕು, ವಿಶೇಷ ಸಂಪುಟ ಸಭೆ ಭಾಗದಲ್ಲಿ ಮಾಡಿ ಈ ಭಾಗದ ಸಮಸ್ಯೆಗಳ ಬಗ್ಗೆಯೇ ಚರ್ಚಿಸಿ ಪರಿಹಾರ ಕಲ್ಪಿಸಬೇಕು, ಕೈಗಾರಿಕೆ, ಕೃಷಿ, ನೀರಾವರಿ, ಶಿಕ್ಷಣ ಕ್ಷೇತ್ರದಲ್ಲಿ ಸಮೃದ್ಧ ಬದಲಾವಣೆಯಾಗಿ ಪ್ರಾದೇಶಿಕ ಅಸಮತೋಲನೆ ನಿವಾರಣೆಯಾಗಬೇಕು. ಈ ಪ್ರದೇಶದಲ್ಲಿ ಜನರ ಜೀವನಮಟ್ಟ ಬದಲಾಗಬೇಕು. ಮೂಲಸೌಕರ್ಯಗಳ ಕೊರತೆ ನೀಗಿ ಶಿಕ್ಷಣ, ಉದ್ಯೋಗ, ಅಭಿವೃದ್ಧಿ ಪಥದಲ್ಲಿ ಅದು ರಾಜ್ಯದ ಇತರ ಪ್ರದೇಶಗಳಿಗೆ ಸರಿಸಮನಾಗಿ ನಿಲ್ಲಲು ಮಹತ್ವದ, ದೂರದೃಷ್ಟಿಯುಳ್ಳ ಕಾರ್ಯಕ್ರಮಗಳೂ ರೂಪುಗೊಳ್ಳಬೇಕು. ಮುಂದುವರಿಯಬೇಕು.



ಡಾ. ಗುರುಪ್ರಸಾದರಾವ್ ಹವಾಲ್ದಾರ್



ರಾಯಚೂರಿನಲ್ಲಿ ಸೋಮವಾರ ಗಣೇಶನ ಮೆರವಣಿಗೆ ಹಾಗೂ ನಿಮಜ್ಜನ ಜನರನ್ನು ಆಕರ್ಷಿಸಿತು.

# ಸಿಎಂ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ: ಡಾ.ಶರಣಪ್ರಕಾಶ ಪಾಟೀಲ್

**ಕಲಬುರಗಿ, ಸೆ. 16:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದ ಉದ್ಘಾಟನೆಗೆ ಆಗಮಿಸಲಿದ್ದು, ಬೆಳಗ್ಗೆ ಸರ್ದಾರ ವಲಭಭಾಯಿ ಪಟೇಲ್ ಅವರ ಪ್ರತಿಮೆ ಮಾಲಾರ್ಪಣೆ ಮಾಡಿ, ನಂತರ ಡಿಎಆರ್ ಪೊಲೀಸ್ ಪರೇಡ್ ಮೈದಾನದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.

ಇಲ್ಲಿನ ನಗರಾಭಿವೃದ್ಧಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದ ಜನರ ಬಹು ನಿರೀಕ್ಷೆಯಂಗತೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಇಂದು ಸಚಿವ ಸಂಪುಟ ಸಭೆ ಸಂಜೆ 4 ಗಂಟೆಗೆ ನಡೆಯಲಿದೆ. ಈ ಭಾಗದ ಇಲಾಖಾವಾರು ಸಮಗ್ರ ಅಭಿವೃದ್ಧಿಯ ಕುರಿತು ಚರ್ಚಿಸಿ ನೀಲಿ ನಕ್ಷೆ ತಯಾರಿಸುವ ಬಗ್ಗೆಯೂ ಕೂಡಾ ನಿರ್ಧರಿಸಲಾಗಿದ್ದು, ಸಚಿವ ಸಂಪುಟದ ಮುಂದೆ ಇಡಲಾಗುವುದು ಎಂದು ತಿಳಿಸಿದರು.



ನಮ್ಮ ಭಾಗದ ಎಲ್ಲ ಶಾಸಕರ ಬೇಡಿಕೆಯ ಪಟ್ಟಿ ಈಗಾಗಲೇ ತರಿಸಿಕೊಳ್ಳಲಾಗಿದ್ದು, ಅವರ ಬೇಡಿಕೆಗಳನ್ನು ನೋಡಿದರೆ ರಾಜ್ಯದ ಬಜೆಟ್ ಗಾತ್ರದಷ್ಟಾಗುತ್ತದೆ. ಆದರೆ ಮ್ಯಾಕ್ರೋ ಯೋಜನೆಯಡಿಯಲ್ಲಿ ಕಾರ್ಯಕ್ರಮಗಳನ್ನು ತೆಗೆದು ಕೊಳ್ಳಲಾಗುವುದು. ಕೊನೆ ಪಕ್ಷ ಈ ಸಲ ಯೋಜನೆಗಳ ಬಗ್ಗೆ ಚರ್ಚಿಸಿದರೆ ಮುಂದಿನ ವರ್ಷವಾದರೂ ಯೋಜನೆ ಬರುತ್ತವೆ ಎಂದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದ ಸಚಿವರು, ತಮ್ಮ ಸರ್ಕಾರ ಬಂದ ಮೇಲೆ ಈ ಬಗ್ಗೆ ಹೆಚ್ಚಿನ ಆದತ್ಯೆ ನೀಡಲಾಗುತ್ತಿದೆ. ಈಗಾಗಲೇ ನಮ್ಮ ಇಲಾಖೆಯಲ್ಲಿಯೇ 800 ಇಂಜಿನಿಯರ್‌ಗಳ ಹುದ್ದೆ ಭರ್ತಿ ಮಾಡಲಾಗಿದೆ ಎಂದರು.

ಮುಂದಿನ ಎರಡು ವರ್ಷದಲ್ಲಿ ಕಲ್ಯಾಣ ಪಥ ಯೋಜನೆಯಡಿಯಲ್ಲಿ ನಮ್ಮ ಭಾಗದ ರಸ್ತೆಗಳ ರಿಪೇರಿ ಹಾಗೂ ಉನ್ನತಿಕರಣ ಮಾಡಲಾಗುವುದು ಎಂದು ಹೇಳಿದ ಅವರು, ಕಲಬುರಗಿ – ಬೀದರ್ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳ ಬಗ್ಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ನಮ್ಮ ಭಾಗದ ಅಭಿವೃದ್ಧಿ ವಿಚಾರದಲ್ಲಿ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಅವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ, ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಮ್ ಖಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರೈತರ ಹೆಸರಲ್ಲಿ ನಂದಿನಿ ಹಾಲಿನ ದರ ಮತ್ತೆ ಹೆಚ್ಚಳ: ಪ್ರಲ್ಹಾದ್ ಜೋಶಿ ಆಕ್ರೋಶ

**ಹುಬ್ಬಳ್ಳಿ, ಸೆ. 16:** ಹಾಲಿನ ದರ ಏರಿಕೆ ಸುಳಿವು ಕೊಟ್ಟ ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕಿಡಿಕಾರಿದ್ದಾರೆ. ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ. ಸರ್ಕಾರ ಬಂದಾಗಿನಿಂದ ರೈತರಿಗೆ ಪ್ರೋತ್ಸಾಹ ಧನ ನೀಡಿಲ್ಲ. ಈಗ ರೈತರ ಕಾರಣ ಹೇಳಿ ಮತ್ತೆ ಹಾಲಿನ ದರ ಹೆಚ್ಚಿಸುತ್ತಿದ್ದಾರೆ. ಆದರೆ ಅವರಿಗೆ (ರೈತರಿಗೆ) ಕೊಡುತ್ತಾರೋ ಇಲ್ಲವೋ ಎಂಬುದು ಅನುಮಾನ. ವಾಸ್ತವದಲ್ಲಿ ಸರ್ಕಾರ ದಿವಾಳಿಯಾಗಿದೆ. ಈಗಾಗಲೇ ಹಾಲಿನ ದರ ಹೆಚ್ಚಿಸಿ ರೈತರಿಗೂ ಕೊಡದೇ ತನ್ನ ಬೊಕ್ಕಸ ತುಂಬಿಸಿಕೊಳ್ಳಲು ಪ್ರಯತ್ನಿಸಿದ ಸರ್ಕಾರ, ರೈತರು ಪ್ರತಿಭಟಿಸಿದಾಗ ಮತ್ತೆ ಹಾಲಿನ ದರ ಹೆಚ್ಚಿಸಿ ರೈತರಿಗೆ ಕೊಡುತ್ತೇವೆಂದು ಹೇಳುತ್ತಿದ್ದಾರೆ ಆರೋಪಿಸಿದರು.



ನಗರದಲ್ಲಿಂದು ಮಾಧ್ಯಮದ ಜೊತೆಗೆ ಮಾತನಾಡಿದ ಅವರು, ರೈತರಿಗೆ ಸಹಾಯ ಮಾಡುವ ಹೆಸರಲ್ಲಿ ಹಾಲಿನ ದರವನ್ನು ರಾಜ್ಯ ಸರ್ಕಾರ ಏರಿಕೆ ಮಾಡಿದೆ. ಆದರೆ ಪ್ರೋತ್ಸಾಹ ದರವನ್ನು ಎರಡು ಮೂರು ತಿಂಗಳು ಕೊಟ್ಟು ಬಂದ್ ಮಾಡುತ್ತಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಪದೇ ಪದೇ ಹಾಲಿನ ದರ ಏರಿಕೆ ಮಾಡಿರುವುದನ್ನು ನೋಡಿದರೇ ಸರ್ಕಾರ ಸಂಪೂರ್ಣ ದಿವಾಳಿಯಾಗಿದೆ ಎಂಬುವುದಕ್ಕೆ ಇದೊಂದೆ ಸೂಕ್ತ ನಿದರ್ಶನವಾಗಿದೆ. ಮುಡಾ, ವಾಲ್ಮೀಕಿ ನಿತ್ಯವೂ ಒಂದು ಹಗರಣ. ಕಾಂಗ್ರೆಸ್ ಸರ್ಕಾರ ಹಗರಣದ ಸಾಮ್ರಾಜ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ರಾಜ್ಯ ಸರ್ಕಾರ ರಾಜ್ಯದ ಅಭಿವೃದ್ಧಿ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲ. ಭ್ರಷ್ಟಾಚಾರ ಬಿಟ್ಟರೇ ಬೇರೆ ಏನನ್ನೂ ಮಾಡುತ್ತಿಲ್ಲ. ಸರ್ಕಾರದ ವ್ಯವಸ್ಥೆ ಕುಸಿದು ಬಿದ್ದಿದೆ. ಈ ನಿಟ್ಟಿನಲ್ಲಿ ಕೆಎಂಎಫ್ ಕೂಡ ಅದೇ ದಾರಿಯಲ್ಲಿ ಸಾಗುತ್ತಿದೆ ಎಂದು ಅವರು ಹೇಳಿದರು.

ಕಾಂಗ್ರೆಸ್ ಸರ್ಕಾರ ಬಂದಾಗ ದ್ವೇಷ ದ್ರೋಹ ಕೃತ್ಯಗಳು ಸರ್ವೇ ಸಾಮಾನ್ಯವಾಗಿದೆ. ಗಣಪತಿ ಪ್ರತಿಷ್ಠಾಪನೆ ಮಾಡಿದವರನ್ನು ಎ–1 ಆರೋಪಿ ಮಾಡಿದ್ದು, ಎಸ್.ಪಿಗೆ ಹಾಗೂ ಗೃಹ ಸಚಿವರಿಗೆ ನಾಚಿಕೆ ಮಾನ ಮರ್ಯಾದೆಯೇ ಇಲ್ಲವಾಗಿದ್ದು, ರಾಜ್ಯವನ್ನು ಪಾಕಿಸ್ತಾನ ಮಾಡಿದ್ದೀರಾ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆಕ್ರೋಶ ವ್ಯಕ್ತಪಡಿಸಿದರು.

## ಪಾಕಿಸ್ತಾನ ಮಾಡಲು ಹೊರಟಿದ್ದೀರಾ..?

**ರಾಜ್ಯದಲ್ಲಿ ಪಾಕಿಸ್ತಾನ ಮಾದರಿ ಆಡಳಿತ ನಡೆಸ್ತೀದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಕಾಲದಲ್ಲಿ ಇಂತಹ ದೇಶದ್ರೋಹ ಕೃತ್ಯಗಳು ನಡೆಯುವುದು ಸರ್ವೇ ಸಾಮಾನ್ಯವಾಗಿದೆ. ಜನರಿಗೆ ನೆಮ್ಮದಿ ಇಲ್ಲದಂತಾಗಿದೆ. ಕರ್ನಾಟಕ ಪಾಕಿಸ್ತಾನ ಮಾಡಲು ಹೊರಟಿದ್ದೀರಾ? ಎಂದು ಜೋಶಿ ವಾಗ್ದಾಳಿ ನಡೆಸಿದರು.**

# ಪರ್ಸ್ ಮಾರುವ ನೆಪದಲ್ಲಿ ಮಾದಕವಸ್ತು ಮಾರಾಟ; ನೈಜೀರಿಯಾ ಪ್ರಜೆ ಬಂಧನ

**ಧಾರವಾಡ, ಸೆ. 16:** ಕೆಲವು ವರ್ಷಗಳಿಂದ ಧಾರವಾಡದಲ್ಲಿಯೇ ನೆಲೆಸಿ, ಮಾದಕವಸ್ತುಗಳ ಮಾರಾಟದ ಬೃಹತ್ ಜಾಲವನ್ನೇ ನಿರ್ಮಿಸಿಕೊಂಡಿದ್ದ ನೈಜೀರಿಯಾ ದೇಶದ ಪ್ರಜೆಯೊಬ್ಬನನ್ನು ಬಂಧಿಸಲಾಗಿದೆ. ನಿಖರ ಮಾಹಿತಿ ಮೇರೆಗೆ ಧಾರವಾಡ ಮಾಳಮಡ್ಡಿ 3ನೇ ಕ್ರಾಸ್‌ನಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದ ನೈಜಿರಿಯಾ ಪ್ರಜೆಯನ್ನು ಬೆಂಗಳೂರು ನಾರ್ಕೋಟಿಕ್ ಕಂಟ್ರೋಲ್ ಬ್ಯುರೋದಿಂದ ಬಂಧಿಸಲಾಗಿದೆ.

ಕೇಂದ್ರ ಗೃಹ ಇಲಾಖೆ ಅಧೀನದ ನಾರ್ಕೋಟಿಕ್ ಕಂಟ್ರೊಲ್ ಬ್ಯುರೋದವರಿಗೆ ದೊರೆತದ ನಿಖರ ಮಾಹಿತಿ ಮೇರೆಗೆ ದಾಳಿ ನಡೆಸಿ ಆತನ ಬಳಿ ಸಂಗ್ರಹಿಸಿಟ್ಟಿದ್ದ ಹೊರ ರಾಜ್ಯದಿಂದ ತಂದು ಮಾದಕ ವಸ್ತುಗಳನ್ನು ಧಾರವಾಡದಲ್ಲಿ ಮಾರಾಟ ಮಾಡುತ್ತಿದ್ದನೆಂದು ಆತ ವಾಸವಾಗಿದ್ದ ಮನೆಯಲ್ಲಿ ವಶಕ್ಕೆ ಪಡೆದುಕೊಂಡಿದ್ದಾರೆ. ಈ ಕುರಿತು ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರಿದಿದೆ.

ನೈಜೀರಿಯಾ ಪ್ರಜೆ ಧಾರವಾಡದಲ್ಲಿ ನೆಲೆಸಿ ಮಾದಕವಸ್ತುಗಳನ್ನು ಮಾರಾಟ ಮಾಡುತ್ತಿದ್ದ ಮಾಹಿತಿ ಇತ್ತು. ಆತ ಧಾರವಾಡದ ರೈಲ್ವೆ ನಿಲ್ದಾಣದ ಬಳಿಯೇ ಮನೆಯೊಂದನ್ನು ಬಾಡಿಗೆ ಪಡೆದುಕೊಂಡಿದ್ದ. ಗೋವಾ, ಮಹಾರಾಷ್ಟ್ರದ ಜತೆಗೆ ಕರ್ನಾಟಕದ ನಾನಾ ಭಾಗಗಳಲ್ಲಿಯೂ ಆತ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ. ಈ ಮಾಹಿತಿ ಆಧರಿಸಿಯೇ ಬೆಂಗಳೂರು ನಾರ್ಕೋಟಿಕ್ ಕಂಟ್ರೋಲ್ ಬ್ಯುರೋ ಅಧಿಕಾರಿಗಳು ಹಾಗೂ ಸಿಬ್ಬಂದಿ ಕೆಲ ದಿನಗಳಿಂದ ಆತನ ಜಾಡು ಹಿಡಿದಿದ್ದರು.

ಆತ ಎಲ್ಲೆಲ್ಲಾ ಹೋಗುತ್ತಾನೆ. ಆತನ ಕಾರ್ಯಾಚರಣೆ



ಕ್ಷೇತ್ರ ಯಾವುದು, ಗ್ರಾಹಕರು ಎನ್ನುವ ಕುರಿತು ವಿವರವಾದ ಮಾಹಿತಿ ಕಲೆ ಹಾಕಿದ್ದರು. ಕೊನೆಗೂ ಆತನನ್ನು ಬೇರೆ ರಾಜ್ಯದಲ್ಲಿ ಬಂಧಿಸಿಕೊಂಡು ಅಧಿಕಾರಿಗಳು ಧಾರವಾಡಕ್ಕೆ ಭಾನುವಾರ ಕರೆ ತಂದಿದ್ದರು.

ಮಾಳಮಡ್ಡಿ ಮನೆಗೆ ಕರೆ ತಂದಾಗ ಮನೆಯಲ್ಲಿ ಅಪಾರ ಪ್ರಮಾಣದ ಲೇಡಿಜ್ ವ್ಯಾನಿಟಿ ಬ್ಯಾಗ್, ಪರ್ಸ್‌ಗಳು ಪತ್ತೆಯಾಗಿವೆ. ಪರ್ಸ್ ಮಾರಾಟದ ನೆಪದಲ್ಲಿ ಕೊಕೆನ್ ಸಾಗಿಸುತ್ತಿದ್ದ ಶಂಕೆ ವ್ಯಕ್ತವಾಗಿದೆ. ಆತನ ಮನೆಯಲ್ಲಿ ತೂಕದ ಯಂತ್ರ, ಪ್ಯಾಕಿಂಗ್ ಯಂತ್ರಗಳು ಸಹ ಪತ್ತೆಯಾಗಿದ್ದು, ಬಾಡಿಗೆ ಮನೆಯಲ್ಲಿಯೇ ಕೊಕೆನ್ ಪ್ಯಾಕ್ ಮಾಡಿ, ಪರ್ಸ್ ಗಳಲ್ಲಿ ಹಾಕಿ ಸಾಗಿಸುತ್ತಿದ್ದ ಕುರಿತು ಮಾಹಿತಿ ಕಲೆ ಹಾಕಲಾಗುತ್ತಿದೆ.

ಉನ್ನತ ವ್ಯಾಸಂಗ ಮಾಡೋಕೆ ಬಂದಿರೋದಾಗಿ ಹೇಳಿಕೊಂಡು ಬಾಡಿಗೆ ಮನೆ ಪಡೆದು ವಾಸವಾಗಿದ್ದ ಬೇರೆ ಬೇರೆ ರಾಜ್ಯಗಳಲ್ಲಿ ಕೊಕೆನ್ ಮಾರಾಟ ಜಾಲದ ತನಿಖೆ ಮುಂದುವರಿದಿದೆ ಎಂದು ನಾರ್ಕೋಟಿಕ್ ಕಂಟ್ರೋಲ್ ಬ್ಯುರೋ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಇಂದು ಸಿಎಂ ಸಿದ್ದರಾಮಯ್ಯ ಕಲಬುರಗಿ ಜಿಲ್ಲಾ ಪ್ರವಾಸ

**ಕಲಬುರಗಿ, ಸೆ. 16:** ಮಂಗಳವಾರ ಕಲಬುರಗಿಯಲ್ಲಿ ನಡೆಯಲಿರುವ ಕಲ್ಯಾಣ ಕರ್ನಾಟಕ ಉತ್ಸವ ಹಗೂ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಲು ಸಿಎಂ ಸಿದ್ದರಾಮಯ್ಯ ಅವರು ಇಂದು ಸಂಜೆಯೇ ಕಲಬುರಗಿ ಒರವಾಸ ಕೈಕೊಂಡಿದ್ದಾರೆ.



ಕಲಬುರಗಿ ಜಿಲ್ಲಾ ಪ್ರವಾಸ ಕೈಗೊಂಡಿರುವ ಸಿಎಂ ಸಿದ್ದರಾಮಯ್ಯ ಅವರು ಮಧ್ಯಾಹ್ನ ಮೂರು ಗಂಟೆಗೆ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಲ್ಲಿ ಕಲಬುರಿಗೆ ಆಗಮಿಸುವರು. ಸಂಜೆ ನಗರದ ಐವಾನ್ ಶಾಹಿ ಸರ್ಕಾರಿ ಅತಿಥಿ ಗೃಹದಲ್ಲಿ ವಾಸ್ತವ್ಯ ಮಾಡುವರು.

ಸಿಎಂ ಸಿದ್ದರಾಮಯ್ಯ ಮಂಗಳವಾರ ಕಲಬುರಗಿಯಲ್ಲಿ ನಡೆಯುವ ಹೈದರಾಬಾದ ವಿಮೋಚನಾ ದಿನವನ್ನು ಕಲ್ಯಾಣ ಕರ್ನಾಟಕ ಉತ್ಸವವಾಗಿ ಆಚರಿಸುವ ಕಾರ್ಯಕ್ರಮದಂಗವಾಗಿ ನಗರದ ಎಸ್‌ವಿಪಿ ವೃತ್ತದಲ್ಲಿರುವ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡುವರು. ಅನಂತರ ನಗರದ ಡಿಎಆರ್ ಪೊಲೀಸ್ ಅರೇಡ್ ಮೈದಾನದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ಅನಂತರ ನಗರದಲ್ಲಿ ಆಯೋಜಿಸಿದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಂಜೆ 4 ಗಂಟೆಗೆ ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ ಸಚಿವ ಸಂಪುಟ ಸಭೆಯ ನೇತೃತ್ವ ವಹಿಸುವರು. ಸಂಜೆ ವಿಶೇಷ ವಿಮಾನದ ಮೂಲಕ ಮರಳಿ ಬೆಂಗಳೂರಿಗೆ ತೆರಳುವರು.

ಹತ್ತು ವರ್ಷಗಳ ನಂತರ ಕಲಬುರಗಿಯಲ್ಲಿ ನಡೆಯುತ್ತಿರುವ ಕಲಬುರಗಿಯ ಸಚಿವ ಸಂಪುಟ ಸಭೆಗೆ ಇಡೀ ಸಂಪುಟ ಸಹೋದ್ಯೋಗಿಗಳು ಕಲಬುರಗಿಗೆ ಆಗಮಿಸಲಿದ್ದು, ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಬಗ್ಗೆ ಮಹತ್ವದ ನಿರ್ಣಯಗಳನ್ನು ತೆಗೆದುಕೊಳ್ಳುವ ನಿರೀಕ್ಷೆ ಹೊಂದಲಗಿದೆ.

# ಸಚಿವ ಸಂಪುಟಸಭೆ ನಾಮಕೇವಾಸ್ತೆ ಆಗದಿರಲಿ: ಭಗವಂತ ಖೂಬಾ

**ಬೀದರ್, ಸೆ. 16 :** ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವದಂದು ನಡೆಸುತ್ತಿರುವ ಸಚಿವ ಸಂಪುಟ ಸಭೆ ನಾಮಕೇ ವಾಸ್ತೆ ಮಾಡದೆ, ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ನೆನೆಗುದಿಗೆ ಬಿದ್ದಿರುವ ಹಾಗೂ ಪ್ರಾರಂಭವೆ ಆಗದ ಕಾಮಗಾರಿಗಳಿಗೆ ಅಗತ್ಯ ಅನುದಾನ, ಮಂಜೂರಾತಿ ನೀಡುವ ಮೂಲಕ ಕಲ್ಯಾಣ ಕರ್ನಾಟಕ ಉತ್ಸವ ಅರ್ಥಪೂರ್ಣವಾಗುವಂತೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ.



ರೂ. 2152 ಕೋಟಿಯ 155 ಕಿಮೀ ಉದ್ದದ ಬೀದರ–ನಾಂದೇಡ್ ವಾಯಾ ಔರಾದ, ದೇಗಲೂರ ಹೊಸ ರೈಲ್ವೆ ಲೈನ್‌ಗೆ ಕೇಂದ್ರವು 2019ರಲ್ಲಿ ಮಂಜೂರಾತಿ ನೀಡಿದೆ, ಆದರೆ ರಾಜ್ಯ ಸರ್ಕಾರ ಇದಕ್ಕೆ ಉಚಿತ ಭೂಮಿ ಮತ್ತು ನಿರ್ಮಾಣ ವೆಚ್ಚದ 50% ಅನುದಾನ ನೀಡದೆ ಕಾಮಗಾರಿ ನೆನೆಗುದಿಗೆ ಬಿದ್ದಿದೆ, ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ದಿಗೆ ಸಹಕರಿಯಾಗುವ ಸಿಪೆಟ್ ಕೇಂದ್ರಕ್ಕೆ ರಾಜ್ಯ ಸರ್ಕಾರ 50% ಅನುದಾನ ನೀಡಬೇಕಾಗಿದೆ ಇದರ ಅನುದಾನವು ನೀಡದೆ, ಈ ಕಾಮಗಾರಿಯೂ ಕೂಡ ನೆನೆಗುದಿಗೆ ಬಿದ್ದಿರುತ್ತದೆ. ಅನುದಾನ ನೀಡಿ ವಿದ್ಯಾರ್ಥಿಗಳ ಬಗ್ಗೆ ತಮ್ಮ ಕಾಳಜಿ ತೋರಿಸಿ ಎಂದಿದ್ದಾರೆ.

ನಮ್ಮ ಜಿಲ್ಲೆಯ ಸುಮಾರು 16,000 ಯುವಕರಿಗೆ ಉದ್ಯೋಗವಕಾಶ ಸೃಷ್ಟಿಯಾಗುವ, 2500 ಮೆಗಾವ್ಯಾಟ್ ರಿನೀವೇಬಲ್ ಏನರ್ಜಿ ಸಬ್ ಸ್ಟೇಷನ್ ಮತ್ತು ಮೊದಲ ಹಂತದಲ್ಲಿ 500 ಮೆಗಾವ್ಯಾಟ್ ಸೋಲಾರ ಪಾರ್ಕ ನಿರ್ಮಾಣಕ್ಕೆ ಮಂಜೂರಾತಿ ಮಾಡಿಸಿರುವೆ, ಇದಕ್ಕೆ ಅಗತ್ಯವಿರುವ 8,000 ಎಕ್ಕರೆ ಜಮೀನು ರಾಜ್ಯ ಸರ್ಕಾರದಿಂದ ನೀಡಬೇಕಾಗಿದೆ, ತಮ್ಮ ಸರ್ಕಾರದಿಂದ ಜಮೀನು ನೀಡಿ, ಸೋಲಾರ ಯೋಜನೆಗೆ ಸಹಕರಿಸಬೇಕು, ಐತಿಹಾಸಿಕ ಪಾಪನಾಶ ದೇವಸ್ಥಾನಕ್ಕೆ ಕೇಂದ್ರದಿಂದ ಪ್ರಸಾದ ಯೋಜನೆಯಡಿ ರೂ. 22 ಕೋಟಿ ಅನುದಾನ ಮಂಜೂರಿ ಮಾಡಿಸಿರುವೆ, ತಾವುಗಳು ಕೂಡ ರಾಜ್ಯದಿಂದ ಇದರ ಅಭಿವೃದ್ಧಿಗೆ ಇನ್ನು 25 ಕೋಟಿ ಅನುದಾನ ನೀಡಬೇಕೆಂದು ಒತ್ತಾಯಿಸಿದ್ದಾರೆ. ಇದರಿಂದ ಯುವಕರಿಗೆ ಮತ್ತು ಕಾರ್ಮಿಕರಿಗೆ ಉದ್ಯೋಗವಕಾಶ ನೀಡಲು ಸಹಕಾರಿಯಾಗುತ್ತದೆ ಎಂದು

## ಶಿಗ್ಗಾವಿ ಉಪಚುನಾವಣೆಗೆ ಬಿಜೆಪಿ ತಯಾರಿ

# ಉಸ್ತುವಾರಿಯಿಂದ ಸದಸ್ಯತ್ವ ನೋಂದಣಿ ಟಾಸ್ಕ್–57 ಟಿಕೆಟ್‌ಗೆ ಆಕಾಂಕ್ಷಿಗಳ ಅರ್ಜಿ



**ಹಾವೇರಿ, ಸೆ. 16:** ಜಿಲ್ಲೆಯ ಶಿಗ್ಗಾವಿ ಉಪಚುನಾವಣೆಯಲ್ಲಿ ಪಕ್ಷದಿಂದ ಸ್ಪರ್ಧಿಸ ಬಯಸಿ 57 ಆಕಾಂಕ್ಷಿಗಳು ಅರ್ಜಿ ಸಲ್ಲಿಸಿದ್ದಾರೆ ಎಂದು ಬಿಜೆಪಿ ರಾಷ್ಟ್ರೀಯ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಡಾ.ರಾಧಾಮೋಹನದಾಸ ಅಗರವಾಲ್ ತಿಳಿಸಿದರು.

ಜಿಲ್ಲೆಯ ಶಿಗ್ಗಾವಿ ಪಟ್ಟಣದಲ್ಲಿ ಆಯೋಜಿಸಿದ್ದ ಉಪಚುನಾವಣೆಯ ಸಂಘಟನಾತ್ಮಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಆಕಾಂಕ್ಷಿಗಳು ಪ್ರತಿ ಬೂತ್ ನಿಂದ ಕನಿಷ್ಠ ಎರಡುನೂರಕ್ಕೂ ಹೆಚ್ಚು ಜನರನ್ನು ಪಕ್ಷದ ಸದಸ್ಯತ್ವ ಅಭಿಯಾನದಲ್ಲಿ ನೋಂದಣಿ ಮಾಡಿಸಬೇಕು. ಜೊತೆಗೆ ಬಿಜೆಪಿಯ ಸಾಧನೆ ಮತ್ತು ಕ್ಷೇತ್ರದ ಅಭಿವೃದ್ಧಿಯನ್ನು ತಿಳಿಸುವ ಮೂಲಕ ಉಪಚುನಾವಣೆಗೆ ಸಜ್ಜಾಗಬೇಕು ಎಂದು ಖಡಕ್ ಸೂಚನೆ ನೀಡಿದರು.

ಆಕಾಂಕ್ಷಿಗಳು ಶಿಗ್ಗಾವಿ–ಸವಣೂರ ಕ್ಷೇತ್ರದ ಎಲ್ಲ ಬೂತ್‌ಗಳಿಗೂ ಪ್ರವಾಸ ಮಾಡಬೇಕು. ಯಾರು ಹೆಚ್ಚು ಸದಸ್ಯರನ್ನು ಮಾಡಿಸುತ್ತಾರೋ ಅವರ ಹೆಸರು ಮುಂಚೂಣಿಯಲ್ಲಿ ಇರಲಿದೆ ಎಂದು ಟಾಸ್ಕ್ ಕೊಟ್ಟರು.

ಪಕ್ಷದ ವರಿಷ್ಠರು ಅಂತಿಮವಾಗಿ ಕೈಗೊಳ್ಳುವ ನಿರ್ಣಯಕ್ಕೆ ಬದ್ಧರಾಗಿರುವಂತೆ ಪ್ರಮಾಣ ಪಡೆಯಲಾಗಿದ್ದು, ಶಿಗ್ಗಾವಿ ಕ್ಷೇತ್ರದಿಂದ ಕನಿಷ್ಠ ಒಂದು ಲಕ್ಷಕ್ಕೂ ಹೆಚ್ಚು ಸದಸ್ಯತ್ವವನ್ನು ಹೊಂದುವ ಗುರಿಯನ್ನು ಪಕ್ಷ ನಿಗದಿಗೊಳಿಸಿದೆ. ಪಕ್ಷದ ಮಾಜಿ ಸಚಿವರು ಹಾಗೂ ಕೆಲ ಹಾಲಿ ಶಾಸಕರಿಗೆ ಕ್ಷೇತ್ರದ ಆರು ಜಿಪಂ ಕ್ಷೇತ್ರಗಳ ಹೊಣೆಗಾರಿಕೆ ನೀಡಲಾಗಿದೆ. ಇತರ ಶಕ್ತಿ ಕೇಂದ್ರಗಳ ಜವಾಬ್ದಾರಿಯನ್ನು ಪ್ರಮುಖರಿಗೆ ನೀಡಲಾಗಿದೆ. ಆ ಕ್ಷೇತ್ರದ ಸಂಪೂರ್ಣ ಜವಾಬ್ದಾರಿ ಅವರೇ ವಹಿಸಬೇಕು ಎಂದು ಅಗರವಾಲ ತಿಳಿಸಿದರು.

ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ ಮಾತನಾಡಿದ ಅವರು, ಶಿಗ್ಗಾವಿ ಉಪಚುನಾವಣೆಯಲ್ಲಿ ಅರ್ಜಿ ಸಲ್ಲಿಸಿದವರೆಲ್ಲರಿಗೂ ಟಿಕೆಟ್ ಸಿಗುವುದಿಲ್ಲ. ಕಮಲವೇ ನಮ್ಮ ಅಭ್ಯರ್ಥಿ ಎಂದು ಹೇಳಿ ಚುನಾವಣೆ ಮಾಡಬೇಕಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಅರುಣ್ ಕುಮಾರ ಪೂಜಾರ, ಶಾಸಕ ಅರವಿಂದ ಬೆಲ್ಲದ್, ಮಹೇಶ ಟೆಂಗಿನಕಾಯಿ, ಸುಭಾಸ್ ಚೌಹಾಣ್ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಶ್ರೀಕಾಂತ ದುಂಡಿಗೌಡ್ರ ಶಕ್ತಿ ಪ್ರದರ್ಶನ

**ಶಿಗ್ಗಾವಿ ಚನ್ನಮ್ಮ ಸರ್ಕಲ್‌ನಲ್ಲಿ ಬಿಜೆಪಿ ಮುಖಂಡ ಶ್ರೀಕಾಂತ ದುಂಡಿಗೌಡ್ರ ತಮ್ಮ ಅಪಾರ ಬೆಂಬಲಿಗರೊಂದಿಗೆ ರಾಜ್ಯ ಬಿಜೆಪಿ ಕಾರ್ಯದರ್ಶಿ ಪಿ. ರಾಜೀವ ಅವರಿಗೆ ಅರ್ಜಿ ಸಲ್ಲಿಸಿದರು. ನಂತರ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡಿದ ಅವರು, 2000 ಇಸ್ವಿಯಲ್ಲಿ ಬಿಜೆಪಿಯ ಒಬ್ಬ ಸಾಮಾನ್ಯ ಕಾರ್ಯಕರ್ತನಾಗಿ, ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಮಾಡಿದ್ದೇನೆ. ಜೊತೆಗೆ ಕ್ಷೇತ್ರದಲ್ಲಿ ನನ್ನದೇ ಆದ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದೇನೆ. ಬೊಮ್ಮಾಯಿಯವರ ಹಾಗೂ ಜೋಶಿಯವರ ನೇತೃತ್ವದಲ್ಲಿ ಚುನಾವಣೆಯನ್ನು ಎದುರಿಸುತ್ತೇವೆ. ಗೆದ್ದು ಬಿಜೆಪಿ ಭದ್ರಕೋಟೆಯನ್ನ ಉಳಿಸಿಕೊಳ್ಳುತ್ತೇವೆ. ಈ ಬಾರಿ ನನಗೆ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.**

# ಒಕ್ಕೂಟದ ಅಭಿವೃದ್ಧಿಗೆ ನನ್ನ ಶಕ್ತಿಯನ್ನು ಮೀರಿ ಶ್ರಮಿಸುತ್ತೇನೆ- ಶಾಮಲ ಯಾದವ್



**ಬಳ್ಳಾರಿ, ಸೆ. 16 :** ಕರ್ನಾಟಕ ರಾಜ್ಯ ಅಲೆಮಾರಿ ಅರೆ ಅಲೆಮಾರಿ ಜನಾಂಗಗಳ ಹಿಂದುಳಿದ ವರ್ಗ ಪ್ರವರ್ಗ 1 ಒಕ್ಕೂಟದ ನೂತನ ಕಚೇರಿಯ ಉದ್ಘಾಟನೆಯನ್ನು ಬೆಂಗಳೂರಿನಲ್ಲಿ ಇಂದು ನಡೆದಿದೆ. ಈ ಸಮಾರಂಭದಲ್ಲಿ ಗಣ್ಯ ವ್ಯಕ್ತಿಗಳು, ಎಲ್ಲಾ ಜಿಲ್ಲೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕೆ. ರವೀಂದ್ರ ಶೆಟ್ಟಿ ಗೌರವಧ್ಯಕ್ಷರು, ಎಮ್. ಪ್ರಕಾಶ್ ರಾಜ್ಯಾಧ್ಯಕ್ಷರು, ರವಿಕುಮಾರ್ ಎಂಎಲ್‌ಸಿ ವಿಧಾನ ಪರಿಷತ್ ಸದಸ್ಯರು ಕರ್ನಾಟಕ, ಎಂ ಮುನೇಗೌಡರು ರಾಜ್ಯಾ ಕಾರ್ಯಧ್ಯಕ್ಷರು ಚಿಕ್ಕಬಳ್ಳಾಪುರ, ಎಂ.ವಿ ರಾಜೇಶ್ವರಿ ಯಾದವ್ ರಾಜ್ಯ ಮಹಿಳಾ ಘಟಕದ ರಾಜ್ಯಾಧ್ಯಕ್ಷರು ಉಪಸ್ಥಿತಿಯಲ್ಲಿ ಕೆ. ಶಾಮಲ ಯಾದವ್ ವಕೀಲರು ಬಳ್ಳಾರಿ ಇವರನ್ನು ಕರ್ನಾಟಕ ರಾಜ್ಯ ಅಲೆಮಾರಿ, ಅರೆ ಅಲೆಮಾರಿ ಜನಾಂಗಗಳ ಒಕ್ಕೂಟ ಬೆಂಗಳೂರು ರಾಜ್ಯ ಮಹಿಳಾ ಘಟಕದ ಗೌರವಾಧ್ಯಕ್ಷರನ್ನಾಗಿ ಸರ್ವಾನುಮತದಿಂದ ನೇಮಕ ಮಾಡಿರುತ್ತಾರೆ.

ಈ ಸಂದರ್ಭದಲ್ಲಿ ಶಾಮಲ ಯಾದವ್ ಅವರು ಮಾತನಾಡಿದ ಅವರು, ನನ್ನ ಮೇಲೆ ನಂಬಿಕೆಯನ್ನಿಟ್ಟು ಈ ಪದವಿ ನೀಡಲು ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಕೃತಜ್ಞತೆಗಳನ್ನು ಸಲ್ಲಿಸಿದರು. ನಾನು ನನ್ನ ಶಕ್ತಿಯನ್ನು ಮೀರಿ ಒಕ್ಕೂಟವನ್ನು ಅಭಿವೃದ್ಧಿ ಪಥದಲ್ಲಿಕೊಂಡೊಯ್ಯಲು ಶ್ರಮಿಸುತ್ತೇನೆ ಎಂದು ತಿಳಿಸಿದರು.

# ಮದುವೆಯಾಗುವುದಾಗಿ ನಂಬಿಸಿ ಕೈಕೊಟ್ಟ ಯುವಕ

**ಯಾದಗಿರಿ, ಸೆ. 16:** ಜಿಲ್ಲೆಯ ಹುಣಸಗಿ ತಾಲ್ಲೂಕಿನ ಬಪ್ಪರ್ಗಾ ಗ್ರಾಮದಲ್ಲಿ ಮೇಲ್ಜಾತಿಯವರು ದಲಿತ ಕುಟುಂಬಗಳಿಗೆ ಬಹಿಷ್ಕಾರ ಹಾಕಿರುವ ಘಟನೆ ನಡೆದಿದೆ. ಅಪ್ರಾಪ್ತ ವಯಸ್ಸಿನ ತನ್ನ ಮಗಳ ಮೇಲೆ ದೈಹಿಕ ಸಂಬಂಧ ಬೆಳೆಸಿ ಆಕೆ ಗರ್ಭವತಿಯಾಗಲು ಮೇಲ್ಜಾತಿಯ ಯುವಕ ಕಾರಣನಾಗಿದ್ದಾನೆ ಎಂದು ಬಾಲಕಿಯ ತಾಯಿ ಪೋಕ್ಸೋ ಕಾಯ್ದೆಯಡಿ ದೂರು ದಾಖಲಿಸಿದ್ದಾಳೆ.

ಆ. 4ರಂದೇ ನಾರಾಯಣಪುರ ಪೊಲೀಸರಿಗೆ ದೂರು ನೀಡಲಾಗಿದ್ದು, ಯುವಕನನ್ನು ಬಂಧಿಸಲಾಗಿದೆ. ದಲಿತ ಯುವತಿಯನ್ನು ಮದುವೆಯಾಗುವುದಾಗಿ ಭರವಸೆ ನೀಡಿ ಮೇಲ್ಜಾತಿ ಯುವಕ ದೈಹಿಕ ಸಂಬಂಧ ಬೆಳೆಸಿದ್ದ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಬಾಲಕಿ ಗರ್ಭಿಣಿ ಎಂದು ತಿಳಿದ ಬಳಿಕ ಆಕೆಯನ್ನು ಸಂಪರ್ಕಿಸುವುದನ್ನು ನಿಲ್ಲಿಸಿದ್ದಲ್ಲದೆ ಆಕೆಯನ್ನು ಮದುವೆಯಾಗಲು ಇಷ್ಟವಿಲ್ಲ ಎಂದು ಯುವಕ ಬಾಲಕಿ ಮನೆಯವರಿಗೆ



ಸಂದೇಶ ಕಳುಹಿಸಿದ್ದ ಎಂದು ದೂರಿನಲ್ಲಿ ತಿಳಿಸಲಾಗಿದೆ. ಕೆಲವು ದಿನಗಳ ಹಿಂದೆ ಬಪ್ಪರಗಾದಲ್ಲಿ ಮೇಲ್ವರ್ಗದವರನ್ನು ಸಂಪರ್ಕಿಸದೆ ಬಾಲಕಿಯ ಕುಟುಂಬದವರು ದೂರು ದಾಖಲಿಸಿದ್ದರಿಂದ ಮೇಲ್ಜಾತಿ ಸಮುದಾಯದ ಗ್ರಾಮಸ್ಥರು ಸಭೆ ನಡೆಸಿ ದಲಿತರಿಗೆ ಬಹಿಷ್ಕಾರ ಹಾಕಲು ನಿರ್ಧರಿಸಿದ್ದರು.

ಗುರುವಾರ, ಬಾಲಕಿಯ ಕುಟುಂಬಸ್ಥರು ದಿನಸಿ ಖರೀದಿಸಲು ಅಂಗಡಿಗೆ ಹೋದಾಗ, ಮತ್ತೊಬ್ಬ ದಲಿತ ತನ್ನ ಮಕ್ಕಳಿಗೆ ನೋಟ್‌ಬುಕ್ ಮತ್ತು ಪೆನ್ನುಗಳನ್ನು ಖರೀದಿಸಲು ಸ್ಟೇಷನರ್‌ಗೆ ಹೋದಾಗ, ಅಂಗಡಿ ಮಾಲೀಕರು ದಲಿತರಿಗೆ ದಿನಸಿ ಅಥವಾ ಬೇರೆ ಸಾಮಗ್ರಿಗಳನ್ನು ಮಾರಾಟ ಮಾಡಲು ನಿರಾಕರಿಸಿದರು. ಗ್ರಾಮದಲ್ಲಿ ದಲಿತರಿಗೆ ಯಾವುದೇ ಅಗತ್ಯ ವಸ್ತುಗಳನ್ನು ಮಾರಾಟ ಮಾಡಬಾರದು ಎಂದು ನಿರ್ಧರಿಸಿದ್ದಾರೆ ಎಂದು ಪರಶುರಾಮ್ ಹೇಳಿದರು.

ಯಾದಗಿರಿ ಡಿಸಿ ಪಿ. ಸುಶೀಲಾ ಅವರನ್ನು ಈ ಬಗ್ಗೆ ಕೇಳಿದಾಗ, ಹುಣಸಗಿ ತಹಶೀಲ್ದಾರ್ ಬಸಲಿಂಗಪ್ಪ ನಾಯ್ಕೋಡ್ ಹಾಗೂ ಅಧಿಕಾರಿಗಳ ತಂಡವನ್ನು ಗ್ರಾಮಕ್ಕೆ ಕಳುಹಿಸಿ ಎರಡೂ ಸಮುದಾಯದವರೊಂದಿಗೆ ಮಾತನಾಡಿದ ಅವರು, ಸಮಸ್ಯೆ ಬಗೆಹರಿಸಲು ಸೂಚಿಸಲಾಗಿದೆ ಎಂದರು.

ಅತ್ಯಾಚಾರವೆಸಗಿದ ಸವರ್ಣಿಯ ಯುವಕನ ವಿರುದ್ಧ ದೂರು, ದಲಿತ ಕುಟುಂಬಕ್ಕೆ ಸಾಮಾಜಿಕ ಬಹಿಷ್ಕಾರ ನಾಯ್ಕೋಡೆ ಅವರು ಭಾನುವಾರ ಗ್ರಾಮಕ್ಕೆ ಭೇಟಿ ನೀಡಿ ಎರಡೂ ಸಮುದಾಯದ ಮುಖಂಡರೊಂದಿಗೆ ಪ್ರತ್ಯೇಕವಾಗಿ ಚರ್ಚಿಸಿದ್ದು, ಶೀಘ್ರವೇ ಸಮಸ್ಯೆ ಬಗೆಹರಿಯಲಿದೆ ಎಂದರು.

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿಕೆ ನೀಡಿ, ದಲಿತರಿಗೆ ಬಹಿಷ್ಕಾರವನ್ನು ತೀವ್ರವಾಗಿ ಖಂಡಿಸಿದ್ದಾರೆ. ಗ್ರಾಮಕ್ಕೆ ಭೇಟಿ ನೀಡಿ ದಲಿತರೊಂದಿಗೆ ಮಾತುಕತೆ ನಡೆಸುತ್ತೇನೆ ಎಂದು ತಿಳಿಸಿದರು.

# ಹಿಂದಿ ದಿನಾಚರಣೆ ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರತಿಭಟನೆ



**ಬೀದರ್, ಸೆ. 16:** ಹಿಂದಿ ದಿನಾಚರಣೆ ಖಂಡಿಸಿ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಕರ್ನಾಟಕ ರಕ್ಷಣಾ ವೇದಿಕೆಯಿಂದ ಪ್ರತಿಭಟನೆ ನಡೆಸಲಾಯಿತು. ಕಪ್ಪು ಪಟ್ಟಿ ಧರಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಕರವೇ ಜಿಲ್ಲಾಧ್ಯಕ್ಷ ಸೋಮನಾಥ ಮುಧೋಳ್ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಬಳಿಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಕೇಂದ್ರ ಸರ್ಕಾರದ ಸೌಮ್ಯದ ಕಚೇರಿ ಮತ್ತು ಸಂಸ್ಥೆಗಳಲ್ಲಿ ಕಳೆದ 25 ವರ್ಷಗಳಿಂದ ಸೆ. 14 ರಂದು ಹಿಂದಿ ದಿವಸ್ ಆಚರಿಸಲಾಗುತ್ತಿದೆ. ಹಿಂದಿ ಅಧಿಕೃತ ರಾಷ್ಟ್ರ ಭಾಷೆ ಅಲ್ಲ. ಆದರೂ ಉತ್ತರ ಭಾರತದ ರಾಜ್ಯಗಳನ್ನು ಓಲೈಸಿಕೊಳ್ಳಲು ದ್ರಾವಿಡ ಭಾಷೆಗಳ ಮೇಲೆ ಒತ್ತಾಯ ಪೂರ್ವಕವಾಗಿ ಹೇರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಕರವೇ ಪ್ರಮುಖರಾದ ವಿಶ್ವನಾಥ ಗೌಡ, ವೀರಶೆಟ್ಟಿ ಗೌಸಪುರ್ ಮತ್ತು ವಿರೇಶ ರೆಡ್ಡಿ ಮತ್ತಿತರರು ಭಾಗವಹಿಸಿದ್ದರು.

# ರಾಜ್ಯದಲ್ಲಿ ಒಟ್ಟು 2.5 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ: ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ, ಸೆ. 16:** ರಾಜ್ಯದಲ್ಲಿ ಒಟ್ಟು 2.5 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ ಇದ್ದು, ಸರ್ಕಾರದ ಆಡಳಿ ಯಂತ್ರ ಸುರಳೀತವಾಗಿ ನಡೆಯುವಂತೆ ಖಾಲಿ ಹುದ್ದೆಗಳನ್ನು ಹಂತಹಂತವಾಗಿ ತುಂಬಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರಾಭಿವೃದ್ಧಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ, ಕಲಬುರಗಿಯಲ್ಲಿ ಮಂಗಳವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಅಗತ್ಯ ಕ್ರಮ ವಹಿಸಲಾಗುವುದು ಎಂದ ಸಚಿವರು, ತಮ್ಮ ಸರ್ಕಾರ ಬಂದ ಮೇಲೆ ಈ ಬಗ್ಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಈಗಾಗಲೇ ನಮ್ಮ ಇಲಾಖೆಯಲ್ಲಿಯೇ 800 ಇಂಜಿನಿಯರ್‌ಗಳ ಹುದ್ದೆ ಭರ್ತಿ ಮಾಡಲಾಗಿದೆ ಎಂದರು.

ಮುಂದಿನ ಎರಡು ವರ್ಷದಲ್ಲಿ ಕಲ್ಯಾಣ ಪಥ ಯೋಜನೆಯಡಿಯಲ್ಲಿ ನಮ್ಮ ಭಾಗದ ರಸ್ತೆಗಳ ರಿಪೇರಿ ಹಾಗೂ ಉನ್ನತಿಕರಣ ಮಾಡಲಾಗುವುದು ಎಂದು ಹೇಳಿದ ಖರ್ಗೆ, ಕಲಬುರಗಿ–ಬೀದರ್ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳ ಬಗ್ಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ನಮ್ಮ ಭಾಗದ ಅಭಿವದ್ಧಿ ವಿಚಾರದಲ್ಲಿ ಅನ್ಯಾಯವಾಗಲು ಬಿಡುವುದಿಲ್ಲ. ನಗರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಣಯಗಳನ್ನು ಕೈಕೊಳ್ಳಲಾಗುವುದು ಎಂದು ಅವರು ಭರವಸೆ ನೀಡಿದರು.

ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದ ಉದ್ಘಾಟನೆಗೆ ಸಿಎಂ ಸಿದ್ದರಾಮಯ್ಯ ಆಗಮಿಸಲಿದ್ದು, ಬೆಳಿಗ್ಗೆ ಸರ್ದಾರ ವಲಭಭಾಯಿ ಪಟೇಲ್ ಅವರ ಪ್ರತಿಮೆ ಮಾಲಾರ್ಪಣೆ ಮಾಡಿ ನಂತರ ಡಿಎಆರ್ ಮೈದಾನದಲ್ಲಿ ಧ್ವಜಾರೋಹಣ ನೆರವೇರಿಸಿ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ಜನರ ಬಹು ನಿರೀಕ್ಷೆಯಂತೆ ಸಿಎಂ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಇಂದು ಸಚಿವ ಸಂಪುಟ ಸಭೆ ನಡೆಸಲಾಗುತ್ತಿದೆ. ಈ ಭಾಗದ ಇಲಾಖಾವಾರು ಸಮಗ್ರ ಅಭಿವೃದ್ಧಿಯ ಕುರಿತು ಚರ್ಚಿಸಿ ನೀಲಿ ನಕ್ಷೆ ತಯಾರಿಸುವ ಬಗ್ಗೆಯೂ ಕೂಡಾ ನಿರ್ಧರಿಸಲಾಗುವುದು ಎಂದು ಅವರು ಹೇಳಿದರು. ನಮ್ಮ ಭಾಗದ ಎಲ್ಲ ಶಾಸಕರ ಬೇಡಿಕೆಯ ಪಟ್ಟಿ ತರಿಸಿಕೊಳ್ಳಲಾಗಿದೆ. ಮ್ಯಾಕ್ರೋ ಯೋಜನೆಯಡಿಯಲ್ಲಿ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ಈ ಸಲ ಯೋಜನೆಗಳ ಬಗ್ಗೆ ಚರ್ಚಿಸಿದರೆ ಮುಂದಿನ ವರ್ಷವಾದರೂ ಯೋಜನೆ ಬರುತ್ತವೆ ಎಂದರು.

## ಖರ್ಗೆ ಗಾಂಧಿ ಕುಟುಂಬದ ವಾಚ್‌ಮ್ಯಾನ್ ಅಲ್ಲ ಎಂದು ಸಾಬೀತು ಮಾಡಲಿ: ಛಲವಾದಿ



**ಬೀದರ್, ಸೆ. 16:** ಮೀಸಲಾತಿ ರದ್ದುಪಡಿಸುವ ಕುರಿತು ಹೇಳಿಕೆ ನೀಡಿರುವ ರಾಹುಲ್ ಗಾಂಧಿಯನ್ನು ಕಾಂಗ್ರೆಸ್ ಪಕ್ಷದಿಂದ ಉಚ್ಚಾಟಿಸುವ ಧೈರ್ಯವನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತೋರಿಸಲಿ. ಆ ಮೂಲಕ ತಾವು ಗಾಂಧಿ ಕುಟುಂಬದ ವಾಚ್ ಮ್ಯಾನ್ ಅಲ್ಲ ಎಂಬುದನ್ನು ಸಾಬೀತು ಮಾಡಲಿ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ರಾಹುಲ್ ಗಾಂಧಿ ಹೇಳಿಕೆ ವಿರುದ್ಧ ನಗರದ ಜಿಲ್ಲಾ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮೀಸಲಾತಿಯ ಸೌಲಭ್ಯದಲ್ಲಿ ಐದು ದಶಕಗಳಿಂದ ಅಧಿಕಾರವನ್ನು ಅನುಭವಿಸುತ್ತ ಬಂದಿರುವ ಮಲ್ಲಿಕಾರ್ಜುನ ಖರ್ಗೆ, ಈಗ ಎಐಸಿಸಿ ಅಧ್ಯಕ್ಷರೂ ಆಗಿದ್ದಾರೆ. ಒಂದು ಗಾಂಧಿ ಪರಿವಾರದ ಮರ್ಜಿಯಲ್ಲಿ ನೀವು ಇಲ್ಲ ಎನ್ನುವುದಾದರೇ, ರಾಹುಲ್ ಹೇಳಿಕೆಗೆ ಖಂಡನೆಯನ್ನಾದರೂ ವ್ಯಕ್ತಪಡಿಸಿ, ಸಮಸ್ತ ದಲಿತ ಜನಾಂಗ ನಿಮ್ಮ ವ್ ೀ ಲಿ ಟ್ಟ ರ್ ಂ ವ್ ವಿಶ್ವಾಸವನ್ನು ದೃಢಪಡಿಸಿ ಎಂದು ಆಗ್ರಹಿಸಿದರು.

ದ್ ೀ ಶ್ ದ್ ಲ್ಲಿ ಮೀಸಲಾತಿ ಸೌಲಭ್ಯ ತಂದದ್ದು ರಾಹುಲ್ ಅವರ ತಂದೆ ಅಥವಾ ಅವರ ಮುತ್ತಜ್ಜ ನೆಹರು ಅವರಲ್ಲ. ನಮ್ಮ ತಂದೆ ಡಾ. ಅಂಬೇಡ್ಕರ ಅವರ ಹೋರಾಟದ ಪ್ರತಿಫಲದಿಂದ ಇದು ಸಿಕ್ಕಿರುವುದು. ದಲಿತ, ಹಿಂದುಳಿದವರ ವಿರೋಧಿ ಗಾಂಧಿ ಕುಟುಂಬದ ಮತ್ತು ಕಾಂಗ್ರೆಸ್‌ನ ಪರಂಪರೆಯಾಗಿದೆ. ಮೀಸಲಾತಿಯಿಂದ ದೇಶದ ಉದ್ಧಾರ ಆಗುವುದಿಲ್ಲ ಎಂದು ಜವಾಹರಲಾಲ್ ನೆಹರು ಹೇಳಿದ್ದರು. ಮುಂದೆ ಪ್ರಧಾನಿಯಾಗಿದ್ದ ಇಂದಿರಾ ಗಾಂಧಿ, ರಾಜೀವ್ ಗಾಂಧಿ ಸಹ ಇದನ್ನೇ ಮುಂದುವರೆಸಿಕೊಂಡು ಬಂದಿದ್ದರು. ಈಗ ರಾಹುಲ್ ಈ ರೀತಿ ಹೇಳುವುದರಲ್ಲಿ ಹೊಸದೇನು ಅಲ್ಲ ಎಂದರು.

ಫಾಸ್ಟ್ ಟ್ರಾಕ್ ಕೋರ್ಟ್ ಆಗಬೇಕಿರುವುದು ಬಿಜೆಪಿ ಹಗರಣದ ಬಗ್ಗೆ ವಿಚಾರಣೆ ನಡೆಸಲು ಹೊರತು ದರ್ಶನ್ ಕೇಸ್ ಬಗ್ಗೆ ವಿಚಾರಣೆ ನಡೆಸಲು ಅಲ್ಲ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರತಿಭಟನೆ ಮಾಡುವುದಿದ್ದರೆ ಶಾಸಕ ಮುನಿರತ್ನ ವಿರುದ್ಧ ಮಾಡಲಿ ಅದಕ್ಕೂಮೊದಲು ಶಿಕ್ಷಣ ಸಂಸ್ಥೆಗಾಗಿ ಪಡೆದ ಜಾಗದಲ್ಲಿ ಬಿರಿಯಾನಿ ಹೋಟೆಲ್ ನಡೆಸುತ್ತಿರುವುದರ ಬಗ್ಗೆ ಸ್ಪಷ್ಟನೆ ನೀಡಲಿ. ಅದು ಬಿಟ್ಟು ಇಲ್ಲಿ ಬಂದು ಡ್ರಾಮಾ ಮಾಡಬಾರದು ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ



ಬೆಂಗಳೂರಿನಲ್ಲಿ ಸೋಮವಾರ ಕೆ.ಆರ್. ಮಾರ್ಕೆಟ್ ಮೂಲಕ ಈದ್ ಮಿಲಾದ್ ಮೆರವಣಿಗೆ.

# ಕೈದಿಗಳಿಗೆ ಕಂಪ್ಯೂಟರ್ ತರಬೇತಿ




**ಕಲಬುರಗಿ, ಸೆ. 16:** ಇಲ್ಲಿನ ಕೇಂದ್ರ ಕಾರಾಗೃಹ, ಅದಾನಿ ಗ್ರೂಪ್‌ನ ಸಕ್ಷಮ ಕೌಶಲ್ಯ ತರಬೇತಿ ಕೇಂದ್ರ ಮತ್ತು ಶೃಂಗೇರಿ ಶಾರದಾ ಪೀಠದ ಸೋಕೇರ್ ಇಂಡ್ ಸಂಸ್ಥೆ ಇವರ ಸಹಯೋಗದೊಂದಿಗೆ ಕೈದಿಗಳಿಗೆ ಉಚಿತವಾಗಿ ಕಂಪ್ಯೂಟರ್ ತರಬೇತಿ ನೀಡಿದ್ದು, ತರಬೇತಿ ಪಡೆದ ಕೇಂದ್ರ ಕಾರಾಗೃಹದ ಬಂದಿಗಳಿಗೆ ಕಾರಾಗೃಹದಲ್ಲಿ ಪ್ರಮಾಣ ಪತ್ರವನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕಂಪ್ಯೂಟರ್ ತರಬೇತಿ ಪಡೆದ ಕೈದಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದ ಅವರು, ಕೇಂದ್ರ ಕಾರಾಗೃಹದ ಪ್ರಭಾರ ಅಧೀಕ್ಷಕ ಬಿ. ಸುರೇಶ, ಕೈದಿಗಳ ಸುಧಾರಣೆ ನಮ್ಮ ಕರ್ತವ್ಯ. ಪುನರ್ವಸತಿ ಸಂಸ್ಥೆಗಳಿಂದ ತರಬೇತಿ ಪಡೆದ ಕೈದಿಗಳು ಬಿಡುಗಡೆಯಾದ ನಂತರ ಕೆಲಸಕ್ಕೆ ಸೇರಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾರಾಗೃಹ ಆಡಳಿತಾಧಿಕಾರಿ ಭೀಮಾಶಂಕರ ಡಾಂಗೆ, ಶೃಂಗೇರಿ ಶಾರದಾ ಪೀಠದ ಪ್ರತಿನಿಧಿ ಉಮೇಶ್ ಹರಿಹರ, ಕಲಬುರಗಿ ಸೋಕೇರ್ ಇಂಡ್ ಅಧ್ಯಕ್ಷ ಪ್ರಕಾಶ್ ಕುಲಕರ್ಣಿ ಹಾಗೂ ಅದಾನಿ ಗ್ರೂಪ್ಸ್ ಕೌಶಲ್ಯ ತರಬೇತಿ ಕೇಂದ್ರದ ಆಪರೇಷನಲ್ ಮ್ಯಾನೇಜರ್ ಅಶೋಕ್ ಕುಮಾರ್ ಎಚ್., ಕಂಪ್ಯೂಟರ್ ಶಿಕ್ಷಕ ಹರೀಶ್ ದತ್ತಾತ್ರೇಯ ಗೌಳಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಜೈಲರ್‌ಗಳಾದ ಪರಮಾನಂದ ಹರವಾಳ, ಶೈನಾಜ್ ನಿಗೆವಾನ್, ಶೃಗೇರಿ ಪೀಠದ ವಿನೀತ್ ಉಪಸ್ಥಿತರಿದ್ದರು. ಕಾರಾಗೃಹದ ಶಿಕ್ಷಕ ನಾಗರಾಜ ಮೂಲಗೆ ಕಾರ್ಯಕ್ರಮ ನಿರೂಪಿಸಿದರು.

# ವಿಶ್ವಕ್ಕೆ ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿದ ಪುಣ್ಯಭೂಮಿ ಬಸವಕಲ್ಯಾಣ



**ಬೀದರ್, ಸೆ. 16:** ವಿಶ್ವದಲ್ಲೇ ಮೊಟ್ಟ ಮೊದಲ ಬಾರಿಗೆ ಪ್ರಜಾಪ್ರಭುತ್ವಕ್ಕೆ ಬುನಾದಿ ಹಾಕಿದ ಬಸವಾದಿ ಶರಣರ ಕಾಯಕ ಭೂಮಿ ಬಸವಕಲ್ಯಾಣ. ಇದು ಅಂದು ಪ್ರಪಂಚದ ಅತ್ಯಂತ ದೊಡ್ಡ ಸಾಮಾಜಿಕ ಸಮಾನತೆಯ ಕ್ರಾಂತಿಯಾಗಿತ್ತು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.


ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದಿಂದ ಚಾಮರಾಜನಗರದ ವರೆಗೆ ರಾಜ್ಯ ಸರ್ಕಾರದಿಂದ ಹಮ್ಮಿಕೊಂಡ ಮಾನವ ಸರಪಳಿ ನಿರ್ಮಾಣಕ್ಕೆ ಇಲ್ಲಿಯ ನೂತನ ಅನುಭವ ಮಂಟಪದ ಪರಿಸರದಲ್ಲಿ ಚಾಲನೆ ನೀಡಿ ಮಾತನಾಡಿದ ಅವರು, ಜಗತ್ತಿನಲ್ಲಿ ಶ್ರೇಷ್ಠ ಸಂವಿಧಾನ ಹಾಗೂ ದೊಡ್ಡ ಪ್ರಜಾಪ್ರಭುತ್ವದ ರಾಷ್ಟ್ರ ನಮ್ಮದಾಗಿದೆ. ಸಂವಿಧಾನ ಆಶಯಗಳು, ವಿಚಾರಗಳು, ತತ್ವಗಳು ಮುಂದಿನ ಭವಿಷ್ಯದ ಪೀಳಿಗೆಗೆ ಪರಿಚಯಿಸಿಕೊಡವಂತದ್ದು. ಈ ದೇಶದಲ್ಲಿ, ಸಮಾಜದಲ್ಲಿ ಸ್ವಾತಂತ್ರ, ಸಮಾನತೆ, ಸಹೋದರತ್ವ ಸಹಬಾಳ್ವೆಯ ತಳಹದಿಯ ಮೇಲೆ ಇನ್ನೂ ಗಟ್ಟಿಯಾದ ರಾಷ್ಟ್ರ ನಿರ್ಮಿಸಿ ಈ ದೇಶದ ಏಕತೆ, ಅಖಂಡತೆ, ಸಮಗ್ರತೆ ಕಾಪಾಡಲು ನಾವೆಲ್ಲರು ಕಟಿ ಬದ್ಧರಾಗಬೇಕು ಎಂಬುದು ನಮ್ಮ ಸರ್ಕಾರದ ಉದ್ದೇಶವಾಗಿದೆ ಎಂದರು.

ನಮ್ಮ ಸರ್ಕಾರ ಅಧಿಕಾರ ಬಂದ ಮೇಲೆ ಸಂವಿಧಾನದ ಪೀಠಿಕೆ ಓದುವ ಮೂಲಕ ನಾವು ಅದಕ್ಕೆ ಚಾಲನೆ ನೀಡಲಾಗಿದೆ. ಈ ವರ್ಷ ಸಂವಿಧಾನದ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಗುತ್ತಿದೆ. ಇದಕ್ಕೆ ಸಚಿವ ಸಂಪುಟದ ಸಚಿವರು ಸೇರಿ ಚರ್ಚಿಸಿ ಯಾವ ಕಾಲದಲ್ಲಿ ಅಸಮಾನತೆ, ಮಹಿಳೆಯರಿಗೆ ಇರದ ಸ್ವಾತಂತ್ರ ಅಂತಹ ಸಂದರ್ಭದಲ್ಲಿ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ಸಮಾಜೋಧಾರ್ಮಿಕ ಕಾರ್ಯ ಮಾಡಿದ ಬಸವಾದಿ ಶಿವಶರಣರಿಂದ ನಿರ್ಮಿಸಿದ ಜಗತ್ತಿನ ಪ್ರಪ್ರಥಮ ಸಂಸತ್ತು ಆಗಿರುವ ಅನುಭವ ಮಂಟಪದಿಂದ ಚಾಮರಾಜನಗರದ ವರೆಗೆ 2500 ಕಿ.ಮಿ ಈ ಐತಿಹಾಸಿಕ ಮಾನವ ಸರಪಳಿ ನಿರ್ಮಿಸಲಾಗಿದೆ. ಜಿಲ್ಲೆಯಲ್ಲಿ 45 ಕಿ.ಮಿ. ಜರುಗಲಿದ್ದು, ಸುಮಾರು 35 ಸಾವಿರ ಜನರು ಪಾಲ್ಗೊಂಡಿದ್ದಾರೆ ಎಂದು ತಿಳಿಸಿದರು.

ಇವತ್ತು ಪ್ರಜಾಪ್ರಭುತ್ವದ ಉಗಮವಾಗಿದೆ. ಇಡೀ ವಿಶ್ವಕ್ಕೆ ಮೊದಲು ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿದ ಪುಣ್ಯಭೂಮಿ ಬಸವಕಲ್ಯಾಣವಾಗಿದೆ. ಹೀಗಾಗಿ ನೂತನ ಅನುಭವ ಮಂಟಪ ನಿರ್ಮಿಸಲಾಗುತ್ತಿದೆ. ಸಮಾಜದಲ್ಲಿ, ರಾಜ್ಯದಲ್ಲಿ, ರಾಷ್ಟ್ರದಲ್ಲಿ ಜಾತಿ–ಜಾತಿಗಳಲ್ಲಿ ಧರ್ಮಧ ಮರ್ಗಗಳಲ್ಲಿ ಹೊಡೆದಾಡುವ ನೀತಿ ಅ ನ್ ು ಸ ರಿ ಸ್ ು ತ್ತಿ ರ್ ು ವ ದ್ ು ನೋಡುತ್ತಿದ್ದೇವೆ. ಭಾವನಾತ್ಮಕ ವಿಷಯಗಳನ್ನು ಬಿತ್ತಲಾಗುತ್ತಿದೆ. ಸಮಾಜ ಒಡೆಯುವುದರಿಂದ ಕಲುಷಿತ ವಾತಾವರಣ ನಿರ್ಮಾಣವಾಗುತ್ತಿದೆ. ಸ್ವಾತಂತ್ರ ಬಂದ ಮೇಲೆ ಅನೇಕ ಅಭಿವೃದ್ಧಿ ಆಗಿದೆ. ಆದರೆ ಇನ್ನೂ ಜಗತ್ತಿಗೆ ಬಲಾಢ್ಯ ರಾಷ್ಟ್ರವಾಗಬೇಕು ಎಂದರೆ ಸಂವಿಧಾನದ ಸದಾಶ್ರಯಗಳು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನವಾಗಬೇಕಿದೆ. ಆ ನಿಟ್ಟಿನಲ್ಲಿ ನಮ್ಮ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದೆ ಎಂದರು.

ಅನುಭವ ಮಂಟಪದ ಅಧ್ಯಕ್ಷರು ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಶ್ರೀ ಗುರುಬಸವ ಪಟ್ಟದ್ದೇವರು, ಮಂತ್ರಿ ರಹೀಂ ಖಾನ್, ಶಾಸಕ ಶರಣು ಸಲಗರ, ಎಮ್‌ಎಲ್‌ಸಿ ಮಾರುತಿರಾವ ಮುಳೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಓ ಡಾ. ಗಿರೀಶ ಬದೋಲೆ, ಎಸ್ಪಿ ಪ್ರದೀಪ ಗುಂಟಿ, ಕಾರ್ಯಕ್ರಮದ ರಾಜ್ಯ ನೋಡಲ್ ಅಧಿಕಾರಿ ಪ್ರವೀಣ ಎನ್ ಪಾಟೀಲ್, ಡಿಸಿಎಫ್ ವಾನತಿ ಎಂ.ಎಂ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನಗರಾದ್ಯಂತ ಸಂಭ್ರಮದ ಈದ್ ಮಿಲಾದ್



**ಬಳ್ಳಾರಿ. ಸೆ. 16 :** ಹಜರತ್ ಮಹಮ್ಮದ್ ಫೈಗಂಬರ್ ಜನ್ಮ ವಾರ್ಷಿಕೋತ್ಸವವನ್ನು ಸ್ಮರಿಸುವ ದಿನವಾದ ಇಂದು ಈದ್ ಮೀಲಾದ್ ಹಬ್ಬವನ್ನು ಕೌಲ ಬಜಾರ್‌ನ ಖೂನಿಟಾನಿ ಮಸೀದಿಯಿಂದ ದಿವಾನ್ ಮಸ್ತಾನ್ ದರ್ಗಾದವರೆಗೆ ನಗರದ ನೂರಾರು ಮಸೀದಿಗಳಿಂದ ವಾಹನಗಳಲ್ಲಿ ಮೆಕ್ಕಾ ಮದೀನದ ಪ್ರತಿಕೃತಿಯನ್ನು ಇಟ್ಟುಕೊಂಡು ಸಾವಿರಾರು ಮುಸ್ಲೀಮ್ ಬಾಂಧವರು (ಜಲೂಸ್) ಮೆರವಣಿಗೆ ನಡಸಿದರು. ಮೆರವಣಿಗೆಯಲ್ಲಿ ಸಾವಿರಾರು ಮಸ್ಲೀಂ ಬಾಂಧವರು ಭಾಗವಹಿಸಿ ಹನ್ನೆರಡನೇ ದಿನದ ರಬ್ಬಿಲ್ ಅವ್ವಲ್ ಜಲೂಸ್ ನಡೆಸಲಾಯಿತು. ಸಮಾಜದಲ್ಲಿ ಶಾಂತಿ ಭಾವೈಕ್ಯತೆ ಮತ್ತು ಎಲ್ಲರೂ ಸಮವಾಗಿ ಜೀವನ ನಡೆಸಬೇಕೆನ್ನುವುದೇ ಈ ಹಬ್ಬದ ಆಚರಣೆಯ ವಿಶೇಷವಾಗಿದೆ, ಅದರಂತೆ ಮುಸ್ಲೀಮ್ ಜನಾಂಗದವರೊಂದಿಗೆ ಇತರರು ಸೇರಿ ಶಾಂತಿ ಸಹಬಾಳ್ವೆಯಿಂದ ಈದ್ ಮೀಲಾದ್ ಮೆರವಣಿಗೆ ನಡೆಸಿದರು.

**ಈದ್ ಮೀಲಾದ್ ವಿಶೇಷತೆ:** ಸೋಮವಾರ ಮುಸ್ಲಿಂ ಬಾಂಧವರು ಈದ್–ಈ–ಮಿಲಾದ್–ಉನ್–ನಬಿ ಎಂದು ಕರೆಯುವ ಈದ್ ಮಿಲಾದ್ ಹಬ್ಬವನ್ನು ಬಹಳ ಅದ್ದೂರಿಯಾಗಿ ಆಚರಿಸುತ್ತಿದ್ದಾರೆ. ಇಸ್ಲಾಂ ಧರ್ಮದ ಪ್ರವಾದಿ ಮುಹಮ್ಮದ್ ಅವರ ಜನ್ಮದಿನವಾಗಿದೆ. ಇಸ್ಲಾಂನ ಕೊನೆಯ ಪ್ರವಾದಿ ಹಜರತ್ ಮುಹಮ್ಮದ್ ಅವರು ಈ ದಿನದಂದೇ ಜನಿಸಿದ್ದು, ಅದಲ್ಲದೇ ಜನಿಸಿದ ಅದೇ ದಿನದಂದು ಅವರು ಮರಣವನ್ನು ಹೊಂದಿದ್ದರು ಎನ್ನಲಾಗಿದೆ. ಈ ಈದ್–ಈ–ಮಿಲಾದ್–ಉನ್–ನಬಿ ಹಬ್ಬವನ್ನು ಈದ್–ಈ–ಮಿಲಾದ್ ಎಂದು ಕೂಡ ಕರೆಯುತ್ತಾರೆ. ಈ ಬಾರಿ ಇಂದು ಸೆಪ್ಟೆಂಬರ್ 16 ರಂದು ಭಾರತ ಸೇರಿದಂತೆ ವಿವಿಧ ದೇಶಗಳಲ್ಲಿ ಮುಸ್ಲಿಂ ಸಮುದಾಯದ ಜನರು ಬಹಳ ವಿಜೃಂಭಣೆಯಿಂದ ಈ ಹಬ್ಬ ಆಚರಿಸುತ್ತಿದ್ದಾರೆ.

ಈದ್– ಇ–ಮಿಲಾದ್ ಹಬ್ಬದ ಮಹತ್ವ–ಈದ್–ಇ–ಮಿಲಾದ್ ಹಬ್ಬವನ್ನು ಪ್ರಪಂಚದಾದ್ಯಂತದ ಎಲ್ಲಾ ಮುಸ್ಲಿಮರು ಬಹಳ ಉತ್ಸಾಹ ಮತ್ತು ಸಂತೋಷದಿಂದ ಆಚರಿಸುತ್ತಾರೆ. ಈದ್ ಮಿಲಾದ್ ಉನ್ ನಬಿಯನ್ನು ಇಸ್ಲಾಮಿಕ್ ಕ್ಯಾಲೆಂಡರ್ ನ ಮೂರನೇ ತಿಂಗಳಾದ ರಬಿ ಉಲ್ ಅವ್ವಾಲ್ ನ 12 ನೇ ದಿನದಂದು ಆಚರಿಸಲಾಗುತ್ತದೆ. ಈ ದಿನವು ಪ್ರವಾದಿ ಮೊಹಮ್ಮದ್ ಅವರ ಜನ್ಮದಿನವಾಗಿದೆ. ಈ ಹಬ್ಬವನ್ನು ಸುನ್ನಿ ಮುಸ್ಲಿಮರು ಇಸ್ಲಾಮಿಕ್ ಧರ್ಮದ 12 ನೇ ದಿನದಂದು ಈ ದಿನವನ್ನು ಆಚರಿಸಿದರೆ, ಶಿಯಾ ಮುಸ್ಲಿಮರು ರಬಿ ಉಲ್ ಅವ್ವಾಲ್ ನ 17 ನೇ ದಿನದಂದು ಈ ದಿನವನ್ನು ಆಚರಿಸುತ್ತಾರೆ.

ಈದ್–ಇ–ಮಿಲಾದ್ ಹಬ್ಬದ ಆಚರಣೆ ಹೇಗೆ –ಈದ್–ಇ ಮಿಲಾದ್ ಹಬ್ಬಕ್ಕೆ ಒಂದು ದಿನಾಲ್ಕೇ ಮುಂಚಿತವಾಗಿ ತಯಾರಿಯನ್ನು ಪ್ರಾರಂಭಿಸುತ್ತಾರೆ. ಮನೆ ಹಾಗೂ ಸುತ್ತಲಿನ ಪರಿಸರವನ್ನು ಬಣ್ಣ ಬಣ್ಣದ ದೀಪಗಳಿಂದ ಅಲಂಕರಿಸುವುದಲ್ಲದೆ, ಹಬ್ಬದ ದಿನ ಹೊಸ ಬಟ್ಟೆಗಳನ್ನು ಧರಿಸುವುದು, ಸಿಹಿ ತಿಂಡಿಗಳನ್ನು ವಿತರಿಸಲಾಗುತ್ತದೆ. ಮಸೀದಿಗೆ ಭೇಟಿ ನೀಡಿ ಈ ದಿನ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸುತ್ತಾರೆ. ಮಹಿಳೆಯರು ಶೀರ್ ಖುರ್ಮಾ ಮತ್ತು ಸೇವಾಯನ್ ನಂತಹ ವಿವಿಧ ರೀತಿಯ ಭಕ್ಷ್ಯಗಳನ್ನು ತಯಾರಿಸಿ ಮನೆ ಮಂದಿಯೆಲ್ಲಾ ಜೊತೆ ಸೇರಿ ಹಬ್ಬವನ್ನು ಆಚರಿಸುತ್ತಾರೆ.

# ಮ್ಯಾಕ್ ಸಂಸ್ಥೆಯಿಂದ ಮಿಲಾದ್ ಕಪ್ ಕ್ರಿಕೆಟ್ ಪಂದ್ಯಾವಳಿ– ವಿಜೇತ ತಂಡಕ್ಕೆ ಬಹುಮಾನ ವಿತರಿಸಿದ ಮೆಹಫೂಜ್ ಅಲಿಖಾನ್




**ಬಳ್ಳಾರಿ. ಸೆ. 16 :** ಬಳ್ಳಾರಿ ನಗರದ ಕೌಲ್ ಬಜಾರ್ ಪ್ರದೇಶದಲ್ಲಿರುವ ಈದ್ಗಾ ಮೈದಾನದಲ್ಲಿ ಕಳೆದ ಹತ್ತು ದಿನಗಳ ಕಾಲ ಸೀಮಿತ ಓವರ್ ಗಳ ಕ್ರಿಕೆಟ್ ಪಂದ್ಯಾವಳಿಯ್ನು ಮ್ಯಾಕ್ ಸಮಾಜ ಸೇವಾ ಸಂಸ್ಥೇವತಿಯಿಂದ ನಡೆಸಲಾಯಿತು ಎಂದು ಮ್ಯಾಕ್ ಸಂಸ್ಥೆ ಸಂಸ್ಥಾಪಕ ಮೆಹಫೂಜಾ ಅಲಿಖಾನ್ ರವರು ತಿಳಿಸಿದ್ದಾರೆ. ಈ ಪಂದಾವಳಿಯಲ್ಲಿ ನಗರದ ಸುಮಾರು 12 ತಂಡಗಳು ಭಾಗವಹಿಸಿದ್ದವು, ಇದರಲ್ಲಿ ಫೈನಲ್ ಗೆ ಜೈಹಿಂದ್ ತಂಡ ಮತ್ತು ರಾಯಲ್ ತಂಡಗಳು ಸೆಣಸಿ ಕೊನೆಗೆ ರಾಯಲ್ ಟೈಗರ್ ತಂಡವು ವಿಜಯಶಾಲಿಯಾಯಿಗಿ ಒಂದು ಲಕ್ಷ ರೂಪಾಯಿಗಳ ನಗದನ್ನು ಮತ್ತು ಟ್ರೂಫಿಯ ವಿನ್ನರ್ ಪ್ರಶಸ್ತಿಯನ್ನು ಪಡೆಯಿತು, ನಂತರ ಜೈಹಿಂದ್ ತಂಡವು ರನ್ನರ್ ಅಪ್ ಆಗಿ ಐವತ್ತು ಸಾವಿರ ರೂಪಾಯಿಗಳ ನಗದು ಬಹುಮಾನ ಮತ್ತು ಟ್ರೋಫಿಯನ್ನು ಪಡೆದುಕೊಂಡಿತು.

ಟ್ರೂಪಿ ಮತ್ತು ಬಹುಮಾನವನ್ನು ವಿತರಿಸಿ ಮಾತನಾಡಿದ ಮ್ಯಾಕ್ ಸಂಸ್ಥೆಯ ಅಧ್ಯಕ್ಷ ಅಲಿಖಾನ್ ಯುವಕರಲ್ಲಿ ಕ್ರೀಡಾ ಮನೋಭಾವವನ್ನು ಬೆಳೆಸಿ ಪೋಷಿಸುವ ಸಲುವಾಗಿ ಈ ಕ್ರಿಕೆಟ್ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿದೆ, ಕ್ರೀಡೇಯಲ್ಲಿ ಭಾಗವಹಿಸುವುದರಿಂದ ಯುವಕರು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಡರಾಗಲು ಸಹಕಾರಿಯಾಗಲಿದೆ, ಮತ್ತು ಯುವಕರು ಕೆಲವೊಂದು ಮಾದಕ ವಸ್ತುಗಳಿಗೆ ಬಲಿಯಾಗಿ ಸಮಯವನ್ನು ಹಾಳು ಮಾಡುತ್ತಾರೆ. ಅವರು ಈ ರೀತಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ಇಂತ ದುಶ್ಚಟಗಳಿಂದ ದೂರ ಉಳಿಯಲು ಸಾಧ್ಯವಾಗಲಿದೆ ಎಂದರು.

# ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿ ಯೋಜನೆ ಜಾರಿ: ಮಹರೋಜ್ ಖಾನ್



ರಾಯಚೂರಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್. ಮೆಹರೋಜ್ ಖಾನ್ ಅವರು ಕರೆದ ಸಭೆಯಲ್ಲಿ ಭಾಗವಹಿಸಿದ ಫಲಾನುಭವಿಗಳು.

**ರಾಯಚೂರು, ಸೆ. 16:** ಮಹಿಳಾ ಸಬಲೀಕರಣ ಮತ್ತು ಯುವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಅರ್ಹ ಫಲಾನುಭವಿಗಳಿಗೆ ಇದರ ಲಾಭ ದೊರಕಿಸುವಂತೆ ರಾಜ್ಯ ಗ್ಯಾರಂಟಿ ಯೋಜನೆಗಳು ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್. ಮಹರೋಜ್ ಖಾನ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ ಜಿಲ್ಲಾ ಪಂಚಾಯತ್ ಜಲ ನಿರ್ಮಲ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳು ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆ, ಅನ್ನಭಾಗ್ಯ ಯೋಜನೆ, ಗೃಹಜ್ಯೋತಿ ಯೋಜನೆ ಹಾಗೂ ಗೃಹ ಲಕ್ಷ್ಮೀ ಯೋಜನೆಯಡಿ ಹೆಚ್ಚಿನ ಪ್ರಗತಿ ಸಾಧಿಸಿರುವುದಕ್ಕೆ ಅಧಿಕಾರಿಗಳಿಗೆ ಅಭಿನಂದಿಸಿದ ಅವರು ಯುವನಿಧಿ ಯೋಜನೆ ಅಡಿಯ ಕೆಲವು ತೊಡಕುಗಳನ್ನು ನಿವಾರಿಸಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ 53 ಸಾವಿರ ಕೋಟಿ ರೂಗಳನ್ನು ಮೀಸಲಿಟ್ಟಿದ್ದು, 4.25 ಕೋಟಿ ಜನ ಇದರ ಲಾಭ ಪಡೆಯುತ್ತಿದ್ದಾರೆ. ಮಹಿಳೆಯರಿಗೆ ಶಕ್ತಿ ತುಂಬುವ ಕಾರ್ಯವನ್ನು ಸರ್ಕಾರ ಮಾಡಿದ್ದು, ಫಲಾನುಭವಿಗಳಿಗೆ ಇದರ ಲಾಭ ದೊರಕಿಸಲು ಸಂಬಂಧಿಸಿದ ಅಧಿಕಾರಿಗಳು ಇನ್ನಷ್ಟು ಪ್ರಯತ್ನ ಮಾಡುವಂತೆ ಸಲಹೆ ನೀಡಿದರು.

ಗೃಹಲಕ್ಷ್ಮೀ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಟ್ಟು 4,46,122 ಪಡಿತರ ಚೀಟಿಗಳನ್ನು ಹೊಂದಿರುವ ಫಲಾನುಭವಿಗಳಿದ್ದು, 4,18,186 ಮನೆ ಯಜಮಾನಿಯರು ಗೃಹಲಕ್ಷ್ಮೀ ಯೋಜನೆಗೆ ನೊಂದಣಿಯಾಗಿದ್ದಾರೆ. ಈ ಮನೆ ಯಜಮಾನಿಯರಿಗೆ ಪ್ರತಿ ಮಾಹೆ 2,000/– ರೂ.ಗಳಂತೆ ಆಗಸ್ಟ್–2023 ರಿಂದ ಆಗಸ್ಟ್–2024ರವರೆಗೆ ಡಿ.ಬಿ.ಟಿ. ಮೂಲಕ ಒಟ್ಟು ರೂ. 867,40,58,000ರೂ.ಗಳನ್ನು ಪಾವತಿಸಲಾಗಿರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಉಪಾಧ್ಯಕ್ಷರಾದ ಗಮನಕ್ಕೆ ತಂದರು.

ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 306349 ಫಲಾನುಭವಿಗಳು ಈ ಯೋಜನೆಯಡಿಯಲ್ಲಿ ನೊಂದಣಿಗೊಂಡು ಫಲಾನುಭವಿಗಳಾಗಿರುತ್ತಾರೆ. ಆಗಸ್ಟ್ – 2024ರ ಅಂತ್ಯಕ್ಕೆ ಸಬ್ಸಿಡಿ ಮೂಲಕ ಒಟ್ಟು 166.52 ಕೋಟಿ ಈ ಯೋಜನೆಗೆ ಪಾವತಿಸಲಾಗಿರುತ್ತದೆ ಜೆಸ್ಕಾಂ ಅಧಿಕಾರಿಗಳು ತಿಳಿಸಿದರು.

ಯುವನಿಧಿ ಯೋಜನೆಯು ಜನವರಿ–2024ರಿಂದ ಜಾರಿಯಾಗಿದ್ದು, ಜನವರಿ–2024ರಿಂದ ಆಗಸ್ಟ್–2024ರವರೆಗೆ ಒಟ್ಟು 5006 ಫಲಾನುಭವಿಗಳಿಗೆ ಡಿ.ಬಿ.ಟಿ, ಮೂಲಕ ಹಣ ಪಾವತಿಸಲಾಗಿರುತ್ತದೆ. ಇದರಲಿ, 4978 ಪದವಿಧರರಿಗೆ ತಿಂಗಳಿಗೆ 3,000/– ರೂ.ಗಳ ಹಾಗೂ 28 ಡಿಪ್ಲೊಮ ವಿದ್ಯಾರ್ಥಿಗಳಿಗೆ ತಿಂಗಳಿಗೆ 1,500/– ರೂ.ಗಳಂತೆ ಒಟ್ಟು 5006 ವಿದ್ಯಾರ್ಥಿಗಳಿಗೆ ಒಟ್ಟು ಮೊತ್ತ 5.65 ಕೋಟಿ ರೂ.ಗಳನ್ನು ಪಾವತಿಸಲಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 45,52,910 ಪಡಿತರ ಚೀಟಿಗಳ ಫಲಾನುಭವಿಗಳು ಅರ್ಹರಿದ್ದು, ಇದರಲ್ಲಿ 45,45,756 ಫಲಾನುಭವಿಗಳಿಗೆ ಜುಲೈ–2023ರಿಂದ ಜೂನ್–2024ರವರೆಗೆ ಒಟ್ಟು ರೂ. 180,31,50,090 ಗಳಲ್ಲಿ ವೆಚ್ಚ ಭರಿಸಲಾಗಿರುತ್ತದೆ ಆಹಾರ ಇಲಾಖೆಯ ಉಪ ನಿರ್ದೇಶಕರು ಸಭೆಗೆ ತಿಸಿದರು.

ಶಕ್ತಿ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಟ್ಟು 5.21ಕೋಟಿ ರೂ.ಗಳ ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯಡಿ ಉಚಿತವಾಗಿ ಪ್ರಯಾಣಿಸಿದ್ದು, ಇದರಿಂದ ಸಾರಿಗೆ ಆದಾಯ 193.43 ಕೋಟಿ ರೂಪಾಯಿಗಳು ಆಗಿರುತ್ತವೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಉಪಾಧ್ಯಕ್ಷರಿಗೆ ಮಾಹಿತಿ ನೀಡಿದರು.

**ಫಲಾನುಭವಿಗಳೊಂದಿಗೆ ಸಂವಾದ :** ರಾಜ್ಯ ಸರಕಾರದ ಮಹತ್ವಕಾಂಕ್ಷಿ ಪಂಚಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಅರ್ಹ ಫಲಾನುಭವಿಗಳಿಗೆ ಮುಟ್ಟಿಸಿ ಪುಣ್ಯ ಸಂಪಾದನೆ ಮಾಡಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್. ಮೆಹರೋಜ್ ಖಾನ್ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸೋಮವಾರ ಪಂಚಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು. ಸರಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ಫಲಾನುಭವಿಗಳಿಗೆ ಉಪಯೋಗವಾಗಬೇಕು ಎಂದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳು ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾ ಉಪಾಧ್ಯಕ್ಷರಾದ ನಾಗೇಂದ್ರ, ಗಫ್ಲೂರ ಸಾಬ್, ಹನುಮಂತ ಜಾಲಿಬೆಂಚಿ, ಶಂಕರಗೌಡ ತುರುವಿಹಾಳ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ. ರೋಣ, ಗ್ಯಾರಂಟಿ ಯೋಜನೆಗಳು ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಹಾಗೂ ತಾಲ್ಲೂಕು ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು, ಸದಸ್ಯರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಫಲಾನುಭವಿಗಳು ಸಭೆಯಲ್ಲಿ ಇದ್ದರು.

# ಅಫ್ಘಾನಿಸ್ತಾನದಲ್ಲಿ ಪೋಲಿಯೊ ಲಸಿಕೆ ಸ್ಥಗಿತ



**ಅಫ್ಘಾನಿಸ್ತಾನ, ಸೆ.16:** ಪೋಲಿಯೊ ಲಸಿಕೆ ಅಭಿಯಾನವನ್ನು ಅಫ್ಘಾನಿಸ್ತಾನ ಆಡಳಿತ ನಡೆಸುತ್ತಿರುವ ತಾಲಿಬಾನ್ ಸ್ಥಗಿತಗೊಳಿಸಿದೆ ಎಂದು ವಿಶ್ವಸಂಸ್ಥೆ ಸೋಮವಾರ ತಿಳಿಸಿದೆ. ಸೆಪ್ಟೆಂಬರ್ ವೇಳೆ ನಡೆಯಲಿದ್ದ ಲಸಿಕೆ ಅಭಿಯಾನವು ಪ್ರಾರಂಭವಾಗುವ ಮೊದಲು ಈ ಲಸಿಕೆ ಅಭಿಯಾನ ಸ್ಥಗಿತಗೊಳಿಸುವಿಕೆಯ ಬಗ್ಗೆ ವಿಶ್ವಸಂಸ್ಥೆ ಏಜೆನ್ಸಿಗಳಿಗೆ ತಿಳಿಸಲಾಗಿದೆ ಎಂದು ವರದಿಯಾಗಿದೆ.

ಸ್ಥಗಿತಗೊಳಿಸುವಿಕೆಗೆ ಯಾವುದೇ ಕಾರಣವನ್ನು ನೀಡಲಾಗಿಲ್ಲ ಮತ್ತು ತಾಲಿಬಾನ್ ನಿಯಂತ್ರಿತ ಸರ್ಕಾರ ಈ ಬಗ್ಗೆ ತಕ್ಷಣಕ್ಕೆ ಯಾರೂ ಪ್ರತಿಕ್ರಿಯೆ ನೀಡಿಲ್ಲ ಎಂದು ವರದಿಗಳು ಹೇಳಿವೆ.

ದೇಶದ ಮನೆ-ಮನೆಗೆ ಲಸಿಕೆಗಳಿಂದ ದೂರವಿರಲು ಮತ್ತು ಧಾರ್ಮಿಕ ಸ್ಥಳಗಳಲ್ಲಿ ಲಸಿಕೆಯ ಬಗ್ಗೆ ಚರ್ಚೆ ನಡೆದಿತ್ತು ಎಂದು ವಿಶ್ವ ಆರೋಗ್ಯ ಸಂಸ್ಥೆಯ ಉನ್ನತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೇಶದ ದಕ್ಷಿಣದ ಭಾಗದಲ್ಲಿ ಎರಡು ಪ್ರಕರಣಗಳನ್ನು ಹೊರತುಪಡಿಸಿ, ವಿಶ್ವ ಆರೋಗ್ಯ ಸಂಸ್ಥೆ ಈ ವರ್ಷ ಅಫ್ಘಾನಿಸ್ತಾನ ದೇಶದಲ್ಲಿ 18 ಪೋಲಿಯೊ ಪ್ರಕರಣಗಳನ್ನು ದೃಢಪಡಿಸಿದೆ. 2023 ರಲ್ಲಿ ಅಫ್ಘಾನಿಸ್ಥಾನದಲ್ಲಿ ಆರು ಪ್ರಕರಣಗಳು ಪತ್ತೆಯಾಗಿದ್ದವು ಎಂದು ವರದಿಗಳು ಹೇಳಿವೆ.

ಜಾಗತಿಕ ಪೋಲಿಯೊ ನಿರ್ಮೂಲನೆ ಮಾಡುವ ಈ ಉಪಕ್ರಮವು ಅಫ್ಘಾನಿಸ್ತಾನದ ಕೆಲವು ಭಾಗಗಳಲ್ಲಿ ಮನೆ-ಮನೆಗೆ ಪೋಲಿಯೊ ಲಸಿಕೆ ಅಭಿಯಾನದಿಂದ ಸೈಟ್-ಟು-ಸೈಟ್ ಲಸಿಕೆಗೆ ಬದಲಾಯಿಸುವ ಬಗ್ಗೆ ಇತ್ತೀಚೆಗೆ ಚರ್ಚೆಯಾಗಿದೆ. ಅಭಿಯಾನದಲ್ಲಿ ಒಳಗೊಂಡಿರುವವರು ಪ್ರಸ್ತುತ ನೀತಿಯಲ್ಲಿನ ಯಾವುದೇ ಬದಲಾವಣೆಯ ವ್ಯಾಪ್ತಿ ಮತ್ತು ಪ್ರಭಾವವನ್ನು ಚರ್ಚಿಸುವ ಮತ್ತು ಅರ್ಥಮಾಡಿಕೊಳ್ಳುವ ಪ್ರಕ್ರಿಯೆಯಲ್ಲಿದ್ದಾರೆ ಎಂದು ಡಾ. ಹಮೀದ್ ಜಾಫಾರಿ ಹೇಳಿದ್ದಾರೆ.

ನೆರೆಯ ಪಾಕಿಸ್ತಾನದಲ್ಲಿ ಪೋಲಿಯೊ ವಿರೋಧಿ ಅಭಿಯಾನಗಳು ನಿಯಮಿತವಾಗಿ ಹಿಂಸಾಚಾರದಿಂದ ಸ್ಥಗಿತಗೊಳ್ಳುತ್ತಿವೆ. ಜನರಿಗೆ ಮಕ್ಕಳಾಗದಂತೆ ಮಾಡುವ ಪಾಶ್ಚಿಮಾತ್ಯ ರಾಷ್ಟ್ರಗಳ ಪಿತೂರಿ ಇದಾಗಿ ಎಂದು ಪೋಲೀಯೊ ಲಸಿಕೆಯನ್ನು ತಪ್ಪಾಗಿ ಅರ್ಥೈಸಿ, ಲಸಿಕೆ ತಂಡಗಳು ಮತ್ತು ಅವರನ್ನು ರಕ್ಷಿಸಲು ನಿಯೋಜಿಸಲಾದ ಪೊಲೀಸರನ್ನು ಉಗ್ರಗಾಮಿಗಳು ಗುರಿಮಾಡುತ್ತಾರೆ.

## ನಾಲ್ವರು ಗಗನಯಾತ್ರಿಗಳು ಭೂಮಿಗೆ ವಾಪಸ್



ವಿಶ್ವದ ಮೊದಲ ಖಾಸಗಿ ಬಾಹ್ಯಕಾಶ ನಡಿಗೆ ಯಶಸ್ವಿಯಾಗಿದೆ. ಪೊಲಾರಿಸ್ ಡಾನ್ ಯೋಜನೆಯಡಿ ಬಾಹ್ಯಾಕಾಶಕ್ಕೆ ಹೋಗಿದ್ದ ನಾಲ್ವರು ಗಗನಯಾತ್ರಿಗಳು ಸುರಕ್ಷಿತವಾಗಿ ಮರಳಿ ಆಗಮಿಸಿದ್ದಾರೆ.

ಇಬ್ಬರು ನಾಸಾ ಪೈಲಟ್‌ಗಳು, ಒಬ್ಬ ಸ್ಪೇಸ್‌ಎಕ್ಸ್ ಉದ್ಯೋಗಿ ಹಾಗೂ ಬಿಲಿಯನೇರ್ ಜರೇಡ್ ಐಸಾಕ್ಮನ್ ಈ ಖಾಸಗಿ ಬಾಹ್ಯಕಾಶ ನಡಿಗೆ ತಂಡದಲ್ಲಿದ್ದರು. ಇವರನ್ನು ಹೊತ್ತಿದ್ದ ನೌಕೆ ಯಶಸ್ವಿಯಾಗಿ ಮೆಕ್ಸಿಕೋ ಕೊಲ್ಲಿಯಲ್ಲಿ ಇಳಿದಿದೆ. ಭೂಮಿಯಿಂದ ಸುಮಾರು 740 ಕಿ.ಮೀ. ದೂರದಲ್ಲಿ ಯಶಸ್ವಿಯಾಗಿ ಬಾಹ್ಯಕಾಶ ನಡಿಗೆ ನಡೆದಿತ್ತು.

ಸ್ಪೇಸ್ ಎಕ್ಸ್ ಮಾಲೀಕ ಎಲಾನ್ ಮಸ್ಕ್ ಎಕ್ಸ್‌ನಲ್ಲಿ ನಾಲ್ವರ ಫೋಟೋ ಹಾಕಿ ಸಂಭ್ರಮಿಸಿದ್ದಾರೆ. ಅಷ್ಟೇ ಅಲ್ಲದೇ 18 ವರ್ಷದ ಹಿಂದೆ ಫಾಲ್ಕನ್ ಫೈಟ್ ರಾಕೆಟ್ ಫೇಲ್ ಆದ ಸಂದರ್ಭದ ಫೋಟೋವನ್ನು ಅಪ್ಲೋಡ್ ಮಾಡಿದ್ದಾರೆ.

## ಕೊಲೆ ಆರೋಪ: ಹಸೀನಾ ವಿರುದ್ಧ 155ನೇ ಪ್ರಕರಣ

**ಢಾಕಾ, ಸೆ.16:** ದಂಗೆ ಹಿನ್ನೆಲೆಯಲ್ಲಿ ಬಾಂಗ್ಲಾ?ದೇಶದಿಂದ ಪಲಾಯನ ಮಾಡಿರುವ ಮಾಜಿ ಪ್ರಧಾನಿ ಶೇಖ್ ಹಸೀನಾ ವಿರುದ್ಧ ಹೊಸದಾಗಿ ಮತ್ತೊಂದು ಕೇಸು ದಾಖಲಾಗಿದೆ.

ವಿದ್ಯಾರ್ಥಿಯೊಬ್ಬನನ್ನು ಕೊಲೆಗೈಯ್ಯಲು ಪ್ರಯತ್ನಿಸಿರುವ ಆರೋಪದಲ್ಲಿ ಹಸೀನಾ ಮತ್ತು ಇತರ 58 ಮಂದಿ ವಿರುದ್ಧ ಕೇಸು ದಾಖಲಿಸಲಾಗಿದೆ. ಫಾಹೀಮ್ ಫೈಸಲ್ ಎಂಬ ವಿದ್ಯಾರ್ಥಿ ನೀಡಿರುವ ದೂರಿನ ಮೇರೆಗೆ ಕೇಸು ದಾಖಲಾಗಿದೆ. ಸರಕಾರದ ವಿರುದ್ಧದ ಪ್ರತಿಭಟನೆ ವೇಳೆ ಆತನ ಮೇಲೆ ಗುಂಡು ಹಾರಿಸಲಾಗಿತ್ತು. ಅದ?ರಿಂದ ಆತ ಗಾಯಗೊಂಡಿದ್ದಾಗಿ ದೂರಿನಲ್ಲಿ ತಿಳಿಸಿದ್ದಾನೆ. ಮಾಜಿ ಪ್ರಧಾನಿ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ 155ಕ್ಕೆ ಏರಿಕೆಯಾಗಿದೆ. ಈ ಪೈಕಿ



136 ಕೊಲೆಗೆ ಸಂಬಂಧಿಸಿದ್ದಾಗಿದೆ. 7 ನರಮೇಧ, 8 ಅಪಹರಣ, 1 ಬಿಎನ್‌ಪಿ ಪಕ್ಷದ ಮೇಲಿನ ದಾಳಿಗೆ ಸಂಬಂಧಿಸಿದೆ ಎಂದು ವರದಿಗಳು ತಿಳಿಸಿವೆ.

## ಬಾಂಗ್ಲಾ: ಸೂಫಿ ಕೇಂದ್ರಗಳ ಮೇಲೆ ದಾಳಿ

**ಢಾಕಾ. ಸೆ.16:** ಬಾಂಗ್ಲಾದೇಶದಲ್ಲಿ ಸೂಫಿ ಮಸೀದಿಗಳನ್ನು ಅಲ್ಲಿನ ಮೂಲಭೂತವಾದಿಗಳು ಗುರಿಯಾಗಿಸಿ ದಾಳಿ ನಡೆಸಿರುವುದು ವರದಿಯಾಗಿದೆ. ಜಾತಿ-ಧರ್ಮಗಳನ್ನು ಮೀರಿ ಧಾರ್ಮಿಕ ಕೇಂದ್ರಗಳಾಗಿ ಗುರುತಿಸಿಕೊಂಡಿರುವ ಸೂಫಿ ಕೇಂದ್ರಗಳ ಧ್ವಂಸ ಮುಸ್ಲಿಂ ಸಮುದಾಯಗಳ ಒಳಗೇ ಕಿಡಿ ಹೊತ್ತಿಸಿದೆ.

## ಏಷ್ಯನ್ ಚಾಂಪಿಯನ್ಸ್ ಟ್ರೋಫಿ: ಕೊರಿಯಾ ಮಣಿಸಿ ಫೈನಲ್ ಪ್ರವೇಶಿಸಿದ ಭಾರತ





ಅದ್ಭುತ ಪ್ರದರ್ಶನ ನೀಡಿದ ಭಾರತ ತಂಡ 4-1 ಗೋಲುಗಳಿಂದ ಕೊರಿಯಾ ತಂಡವನ್ನು ಸೋಲಿಸಿ ಚಾಂಪಿಯನ್ಸ್ ಟ್ರೋಫಿ ಹಾಕಿ ಪಂದ್ಯಾವಳಿಯಲ್ಲಿ ಫೈನಲ್ ಪ್ರವೇಶಿಸಿದೆ.

ಚೀನಾದ ಹುಲುಬ್ ಬೀರ್ ಸೋಮವಾರ ನಡೆದ ಸೆಮಿಫೈನಲ್‌ನಲ್ಲಿ ಸುಲಭ ಜಯ ಸಾಧಿಸಿದ ಭಾರತ ತಂಡ ಫೈನಲ್ ನಲ್ಲಿ ಆತಿಥೇಯ ಚೀನಾ ತಂಡವನ್ನು ಎದುರಿಸಲಿದೆ.

ಭಾರತ ತಂಡದ ಗೆಲುವಿನಲ್ಲಿ ನಾಯಕ ಹರ್ಮನ್ ಪ್ರೀತ್ ಸಿಂಗ್ ಪೆನಾಲ್ಟಿಯಲ್ಲಿ 2 ಗೋಲು ಬಾರಿಸಿ ಗಮನ ಸೆಳೆದರು. ಉತ್ತಮ್ ಸಿಂಗ್ ಮತ್ತು ಜರ್ಮನ್ ಪ್ರೀತ್ ತಲಾ ಒಂದು ಗೋಲು ಗಳಿಸಿದರು. ಕೊರಿಯಾ ಭಾರತದ ಪರ ಕೇವಲ ಒಂದು ಗೋಲು ಗಳಿಸಲಷ್ಟೇ ಶಕ್ತವಾಯಿತು. ಟೂರ್ನಿಯಲ್ಲಿ ಅಮೋಘ ಪ್ರದರ್ಶನ ನೀಡುತ್ತಿರುವ ಭಾರತ ತಂಡ ಸೋಲರಿಯದ ತಂಡವಾಗಿ ಫೈನಲ್ ಪ್ರವೇಶಿಸಿದೆ. ಲೀಗ್ ಕೊನೆಯ ಪಂದ್ಯದಲ್ಲಿ ಭಾರತ ಪಾಕಿಸ್ತಾನ ವಿರುದ್ಧ ಸುಲಭ ಗೆಲುವು ದಾಖಲಿಸಿತ್ತು.

## ಕರಾಟೆ ಚಾಂಪಿಯನ್‌ಶಿಪ್ ಸುಜಲ್ ಜೆ.ಶೆಟ್ಟಿಗೆ ಪದಕ




**ಬೆಂಗಳೂರು,ಸೆ.16:** ಮಲೇಷಿಯಾದ ಕೋಟಾ ಕಿನಾಬಾಲುನಲ್ಲಿ ಸೆಪ್ಟೆಂಬರ್ 14 ರಂದು ನಡೆದ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್ ನಲ್ಲಿ 21 ವರ್ಷದೊಳಗಿನ ಮಹಿಳಾ ವಿಭಾಗದಲ್ಲಿ ಸುಜಲ್ ಜೆ ಶೆಟ್ಟಿಯವರು +68 ಕೆಜಿ ಕುಮಿಟೆ ವಿಭಾಗದಲ್ಲಿ ಬೆಳ್ಳಿ ಪದಕ ಮತ್ತು ಕಟಾದಲ್ಲಿ ಕಂಚಿನ ಪದಕವನ್ನು ಗೆದ್ದಿದ್ದಾರೆ.

ಸುಜಲ್ ಜೆ ಶೆಟ್ಟಿ ಬೆಂಗಳೂರಿನ ಯುನಿವರ್ಸಲ್ ಸ್ಕೂಲ್ ಆಫ್ ಅಡ್ಮಿನಿಸ್ಟ್ರೇಷನ್ ನ ವಿದ್ಯಾರ್ಥಿನಿ. ಜಯಕರ್ ಶೆಟ್ಟಿ ಹಾಗೂ ಸುನೀತಾ ಶೆಟ್ಟಿ ದಂಪತಿಯ ಪುತ್ರಿ, ಬೆಂಗಳೂರಿನ ಬಂಟ್ಸ್ ಸಂಘದ ಆರ್ ಎನ್ ಎಸ್ ವಿದ್ಯಾನಿಕೇತನದ ಹಳೆ ವಿದ್ಯಾರ್ಥಿನಿಯಾಗಿದ್ದಾರೆ.

## ಚೆಸ್ ಒಲಿಂಪಿಯಾಡ್: ಭಾರತಕ್ಕೆ ಮಣಿದ ಅಜರ್‌ಬೈಜಾನ್

**ಬುಡಾಪೆಸ್ಟ್, ಸೆ.16:** ಅಮೋಘ ಲಯದಲ್ಲಿರುವ ಡಿ.ಗುಕೇಶ್ ಮತ್ತು ಅರ್ಜುನ್ ಎರಿಗೈಸಿ ಅವರ ನೆರವಿನಿಂದ ಅಮೋಘ ಆಟದಿಂದ ಭಾರತ ತಂಡ 45ನೇ ಚೆಸ್ ಒಲಿಂಪಿಯಾಡ್ನ ಓಪನ್ ವಿಭಾಗದ ಐದನೇ ಸುತ್ತಿನಲ್ಲಿ 3-1 ರಿಂದ 11ನೇ ಶ್ರೇಯಾಂಕದ ಅಜರ್‌ಬೈಜಾನ್ ತಂಡವನ್ನು ಸೋಲಿಸಿತು.

ಹಾಲಿ ಒಲಿಂಪಿಯಾಡ್‌ನಲ್ಲಿ ಇವರಿಬ್ಬರ ನಿಷ್ಕಳಂಕ ಆಟ ಗಮನಸೆಳೆದಿದೆ. ವಿಶ್ವ ಚಾಂಪಿಯನ್ ಪಟ್ಟದ ಚಾಲೆಂಜರ್ ಆಗಿರುವ ಗುಕೇಶ್, ಏಯ್ದಿನ್ ಸುಲೇಮಾನ್ಲಿ ಅವರನ್ನು ಸೋಲಿಸಿದರೆ, ಅರ್ಜುನ್ ಅವರು ರವೂಫ್ ಮೆಮೆಡೊವ್ ಮೇಲೆ ಗೆಲುವನ್ನು ಸಾಧಿಸಿದರು. ಇಬ್ಬರೂ ಬಿಳಿ ಕಾಯಿಗಳಲ್ಲಿ ಆಡುವ ಅವಕಾಶ ಪಡೆದಿದ್ದರು. ಪ್ರಜ್ಞಾನಂದ ರಮೇಶಬಾಬು ಅವರು ಎರಡನೇ ಬೋರ್ಡ್‌ನಲ್ಲಿ ಪ್ರಬಲ ಆಟಗಾರ ನಿಜತ್ ಅಬಸೋವ್ ವಿರುದ್ಧ ಡ್ರಾ ಮಾಡಿಕೊಂಡು ಭಾರತದ ಗೆಲುವನ್ನು ಖಚಿತಪಡಿಸಿದರು. ವಿದಿತ್ ಎಸ್.ಗುಜರಾತಿ ಕೂಡ ಶಖ್ರಿಯಾರ್ ಮೆಮೆಡ್ಯರೋವ್ ಜೊತೆ ಸುದೀರ್ಘ ಆಟದ ನಂತರ ಪಾಯಿಂಟ್ ಹಂಚಿಕೊಂಡರು.



ಭಾರತ ಪುರುಷರ ತಂಡ ಸತತ ಐದನೇ ಗೆಲುವಿನೊಡನೆ ವಿಯೆಟ್ನಾಂ, ಚೀನಾ, ಹಂಗರಿ ಜೊತೆ ಅಗ್ರಸ್ಥಾನವನ್ನು ಹಂಚಿಕೊಂಡಿದೆ. ಸ್ಫೂರ್ತಿಯುತ ಆಟವಾಡುತ್ತಿರುವ ವಿಯೆಟ್ನಾಂ ಐದನೇ ಸುತ್ತಿನಲ್ಲಿ ಪೋಲೆಂಡ್ ತಂಡವನ್ನು 2.5-1.5 ರಿಂದ ಮಣಿಸಿತು. ಚೀನಾ ಮತ್ತು ಹಂಗರಿ ತಂಡಗಳು ಕ್ರಮವಾಗಿ ಸ್ಪೇನ್ ಮತ್ತು ಉಕ್ರೇನ್ ತಂಡಗಳನ್ನು 2.5-1.5 ಸಮಾನ ಅಂತರದಿಂದ ಸೋಲಿಸಿದವು. ಇನ್ನು ಆರು ಸುತ್ತಿನ ಪಂದ್ಯಗಳು ಉಳಿದಿವೆ.

**ಮಹಿಳಾ ತಂಡಕ್ಕೂ ಜಯ:**

ಅಗ್ರ ಶ್ರೇಯಾಂಕದ ಪಡೆದಿರುವ ಭಾರತ ಮಹಿಳೆಯರ ತಂಡ, ಕಜಕಸ್ತಾನ ವಿರುದ್ಧ 2.5-1.5 ರಿಂದ ಜಯಪಡೆಯಿತು. ಹಾರಿಕಾ ಅವರು ಮೊದಲ ಬೋರ್ಡ್ನಲ್ಲಿ ಬಿಬಿಸಾರಾ ಅಸೌಬಯೇವಾ ಅವರೆದುರು ಆಘಾತ ಅನುಭವಿಸಿದರು. ಹೆಚ್ಚಿನ ಅವಧಿಯಲ್ಲಿ ಉತ್ತಮ ಸ್ಥಿತಿಯಲ್ಲಿದ್ದ ಹಾರಿಕಾ, ಇದಕ್ಕಿದ್ದ ಹಾಗೆ ಮಾಡಿದ ಸಣ್ಣಲೋಪ ಪಂದ್ಯ ಸೋಲುವಂತೆ ಮಾಡಿ ಕಜಕಸ್ಥಾನಕ್ಕೆ ಮುನ್ನಡೆಯಾಯಿತು. ನಾಲ್ಕನೇ ಬೋರ್ಡ್‌ನಲ್ಲಿ ವಂತಿಕಾ ಅಗರವಾಲ್ ಬಿಳಿ ಕಾಯಿಗಳಲ್ಲಿ ಆಡಿ ಅಲುವಾ ನೂರ್ಮನ್ ವಿರುದ್ಧ ಜಯಗಳಿಸಿದರು. ಕ್ಸೆನಿವಾ ಬಲಬಯೇವಾ ಇನ್ನೊಂದು ಪಂದ್ಯದಲ್ಲಿ ದಿವ್ಯಾ ದೇಶಮುಖ್ ಜೊತೆ ಪಾಯಿಂಟ್ ಹಂಚಿಕೊಂಡರು. ಪಂದ್ಯ 2-2 ಸಮನಾಗಿದ್ದ ಈ ಹಂತದಲ್ಲಿ ವೈಶಾಲಿ ಅವರು ಮಿರುಯರ್ಟ್ ಕಮಲಿದೆನೊವಾ ಎದುರು ಜಯಗಳಿಸಿದ್ದು, ಭಾರತದ ಗೆಲುವಿನಲ್ಲಿ ನಿರ್ಣಾಯಕ ಪಾತ್ರವಹಿಸಿತು. ಭಾರತ, ಅರ್ಮೇನಿಯಾ ಮತ್ತು ಮಂಗೋಲಿಯಾ ತಲಾ 10 ಪಾಯಿಟ್ಸ್ ಸಂಗ್ರಹಿಸಿ ಅಗ್ರಸ್ಥಾನ ಹಂಚಿಕೊಂಡಿವೆ. ಅರ್ಮೇನಿಯಾ 2.5-1.5 ರಿಂದ ಚೀನಾ ವನಿತೆಯರ ತಂಡ ಸೋಲಿಸಿತು. ಮಂಗೋಲಿಯಾ ಇದೇ ಅಂತರದಿಂದ ಅಮೆರಿಕ ಮೇಲೆ ಜಯ ಪಡೆಯಿತು. ಜಾರ್ಜಿಯಾ ಮತ್ತು ಪೋಲೆಂಡ್ 9.5 ಅಂಕ ಸಂಗ್ರಹಿಸಿ ಎರಡನೇ ಸ್ಥಾನದಲ್ಲಿವೆ. ಭಾರತ ಮುಂದಿನ ಪಂದ್ಯದಲ್ಲಿ ಅರ್ಮೇನಿಯಾ ತಂಡವನ್ನು ಎದುರಿಸಲಿದೆ.

**ಅರ್ಜುನ್ ಸಾಧನೆ:** ವಿಶ್ವ ಕ್ರಮಾಂಕದಲ್ಲಿ ನಾಲ್ಕನೇ ಸ್ಥಾನದಲ್ಲಿರುವ ಅರ್ಜುನ್ ಇರಿಗೇಶಿ ಅವರು ಭಾರತದ ಪರ ಐದೂ ಪಂದ್ಯಗಳಲ್ಲಿ ಆಡಿ ಜಯ ಸಾಧಿಸಿದ್ದಾರೆ. ಅರ್ಜುನ್ ಪ್ರಸ್ತುತ 2788ರ ಲೈವ್ ರೇಟಿಂಗ್ ಹೊಂದಿದ್ದು, 2800ರ ಮೈಲಿಗಲ್ಲು ತಲುಪಲು ಕೇವಲ 12 ಪಾಯಿಂಟ್ಸ್ ದೂರವಿದ್ದಾರೆ. ಭಾರತದ ಚೆಸ್‌ನಲ್ಲಿ ವಿಶ್ವನಾಥನ್ ಆನಂದ್ ಮಾತ್ರ ಈ ಎತ್ತರಕ್ಕೆ ಏರಿದ್ದಾರೆ.

ದೆಹಲಿ ಕರ್ನಾಟಕ ಸಂಘ
ರಾವ್ ತುಲಾರಾಮ್ ಮಾರ್ಗ, ಸೆಕ್ಟರ್-12, ಆರ್.ಕೆ. ಪುರಂ, ನವದೆಹಲಿ-110022
ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಸಮಿತಿ
ನವದೆಹಲಿ
ಸಹಯೋಗದಲ್ಲಿ



ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಅಂಗವಾಗಿ
ರಾಷ್ಟ್ರ ಧ್ವಜಾರೋಹಣ
17ನೇ ಸೆಪ್ಟೆಂಬರ್ 2024 | ಬೆಳಿಗ್ಗೆ : 9.00ಗಂಟೆಗೆ
ಧ್ವಜಾರೋಹಣ
ಡಾ. ಸಂಗಮೇಶ್
ಅಸೋಸಿಯೇಟ್ ಪ್ರೊಫೆಸರ್
ಸ್ಕೂಲ್ ಆಫ್ ಇಂಜಿನಿಯರಿಂಗ್, ಜೆ.ಎನ್.ಯು., ನವದೆಹಲಿ
ಎಲ್ಲರಿಗೂ ಆತ್ಮೀಯ ಸ್ವಾಗತ
ಸಿ.ಎಂ. ನಾಗರಾಜ, ಅಧ್ಯಕ್ಷರು, ದೆ.ಕ.ಸಂಘ
ರಾಧಾಕೃಷ್ಣ, ಪ್ರಧಾನ ಕಾರ್ಯದರ್ಶಿ, ದೆ.ಕ.ಸಂಘ
ವಿ.ವಿ. ಬಿರಾದಾರ, ಅಧ್ಯಕ್ಷರು
ಡಾ. ಎಸ್.ಎಲ್. ಭಂಡಾರಕರ್, ಕಾರ್ಯದರ್ಶಿ
ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಸಮಿತಿ, ನವದೆಹಲಿ




ಆಗ್ನೇಯ ಲೆಬನಾನ್‌ನ ವರ್ಘಾನಿ ಪ್ರದೇಶದಲ್ಲಿ ಇಸ್ರೇಲಿ ಡ್ರೋನ್ ಬಿದ್ದಿದೆ ಎಂದು ಲೆಬನಾನಿನ ಮಿಲಿಟರಿ ಮೂಲಗಳು ಕ್ಸಿನ್‌ಹುವಾಗೆ ಖಚಿತಪಡಿಸಿದೆ. ಈ ಪ್ರದೇಶದ ಜನರು ಸಿಕ್ಕಸಿಕ್ಕ ವಾಹನಗಳಲ್ಲಿ ಸ್ಥಳಾಂತರಗೊಳ್ಳುತ್ತಿದ್ದಾರೆ.




ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸೋಮವಾರ ಗುಜರಾತ್‌ನ ಗಾಂಧಿನಗರದಲ್ಲಿ 4ನೇ ಜಾಗತಿಕ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆ ಮತ್ತು ಎಕ್ಸ್‌ಪೋ ಪ್ರದರ್ಶನಕ್ಕೆ ಭೇಟಿ ನೀಡಿದರು.

## ಭಾರತ-ಬಾಂಗ್ಲಾದೇಶ ಕ್ರಿಕೆಟ್ ಸರಣಿ ರದ್ದತಿಗೆ ಆಗ್ರಹ

**ಮುಂಬೈ, ಸೆ.16:** ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂ ಸಮುದಾಯದ ಮೇಲೆ ದೌರ್ಜನ್ಯ ನಡೆಯುತ್ತಿರುವುದು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಭಾರತ- ಬಾಂಗ್ಲಾದೇಶ ನಡುವಣ ಕ್ರಿಕೆಟ್ ಸರಣಿ ನಡೆಯುವುದನ್ನು ಹಿಂದೂ ಜನಜಾಗೃತಿ ಸಮಿತಿಯು ಬಲವಾಗಿ ವಿರೋಧಿಸಿದೆ.

ನೆರೆರಾಷ್ಟ್ರದ ಹಿಂದೂಗಳು ಸಂಕಷ್ಟದಲ್ಲಿರುವಾಗ ಉಭಯ ದೇಶಗಳ ನಡುವೆ ಕ್ರಿಕೆಟ್ ಪಂದ್ಯಾವಳಿ ನಡೆಸುವುದು ಗಾಯದ ಮೇಲೆ ಉಪ್ಪು ಸವರಿದಂತೆ ಎಂದು ಅದು ಹೇಳಿದೆ.

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಗೆ (ಬಿಸಿಸಿಐ) ಈ ಕುರಿತು ಮನವಿ ಸಲ್ಲಿಸಿರುವ ಎಚ್‌ಜೆಎಸ್, ಭಾರತ- ಬಾಂಗ್ಲಾದೇಶ ನಡುವಣ ಕ್ರಿಕೆಟ್ ಸರಣಿಯನ್ನು ನಿಲ್ಲಿಸುವಂತೆ ಮತ್ತು ಹಿಂದೂಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ನಿಲ್ಲುವವರೆಗೂ ಬಾಂಗ್ಲಾದೇಶದ ಕಲಾವಿದರ ಯಾವುದೇ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬಾರದು ಎಂದಿದೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ವ್ಯವಾಹಾರ ಸಚಿವ ಎಸ್. ಜೈಶಂಕರ್ ಅವರಿಗೂ ಎಚ್‌ಜೆಎಸ್ ಮನವಿಪತ್ರ ಸಲ್ಲಿಸಿದೆ.

'ಸೆಪ್ಟೆಂಬರ್ 19ರಿಂದ ಅಕ್ಟೋಬರ್ 12ರ ಅವಧಿಯಲ್ಲಿ ಬಾಂಗ್ಲಾದೇಶದ ಜೊತೆ ಎರಡು ಟೆಸ್ಟ್ ಪಂದ್ಯಗಳು



ಮತ್ತು ಮೂರು ಟಿ20 ಪಂದ್ಯಗಳನ್ನು ಒಳಗೊಂಡ ಕ್ರಿಕೆಟ್ ಸರಣಿ ಆಯೋಜಿಸಲು ಭಾರತವು ನಿರ್ಧರಿಸಿದೆ.

ಇದೇ ವೇಳೆ ಬಾಂಗ್ಲಾದೇಶದಲ್ಲಿಯ ಹಿಂದೂ ಸಮುದಾಯವು ಗಂಭೀರ ದಾಳಿಗೆ ಒಳಗಾಗಿದೆ. ಹಿಂದೂ ವಿರೋಧಿ ಹಿಂಸಾಚಾರದಲ್ಲಿ ಈವರೆಗೆ 230 ಜನರು ಮೃತಪಟ್ಟಿರುವುದು ವರದಿಯಾಗಿದೆ. ಇಂಥ ಸಂದರ್ಭದಲ್ಲಿ ನಾವು ಅವರ ಜೊತೆ ಹೇಗೆ ಕ್ರಿಕೆಟ್ ಆಡಬೇಕು' ಎಂದು ಎಚ್‌ಜೆಎಸ್ ರಾಷ್ಟ್ರೀಯ ವಕ್ತಾರ ರಮೇಶ್ ಶಿಂದೆ ಹೇಳಿದ್ದಾರೆ.